ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 198, ಪುಟಗಳು: 8, ಶನಿವಾರ, 27 ಏಪ್ರಿಲ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

# ಐಟಿ ದಾಳಿ: 4.8 ಕೋಟಿ ಜಪ್ತಿ

## ಬಿಜೆಪಿ ಅಭ್ಯರ್ಥಿ ಸುಧಾಕರ್ ವಿರುದ್ಧ ಎಫ್‌ಐಆರ್ ದಾಖಲು



**ನೆಲಮಂಗಲ:** ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ. ಕೆ ಸುಧಾಕರ್ ವಿರುದ್ಧ ಎಸ್‌ಎಸ್‌ಟಿ ಅಧಿಕಾರಿಗಳು ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಬಿಜೆಪಿ ಮುಖಂಡ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಡಾ. ಕೆ ಸುಧಾಕರ್ ಆಪ್ತ, ಬಿಜೆಪಿಯ ಮಾಜಿ ಜಿಲ್ಲಾಧ್ಯಕ್ಷ ಮಾದಾವರ ಗೋವಿಂದಪ್ಪ ಮನೆ ಮೇಲೆ ದಾಳಿ ಮಾಡಿ, 4.82 ಕೋಟಿ ಹಣವನ್ನು ಜಪ್ತಿ ಮಾಡಿದರು.

ಅಧಿಕಾರಿಗಳು ಹಣವನ್ನು ಜಪ್ತಿ ಮಾಡಿಕೊಂಡ ಬಳಿಕ ಬೆಂಗಳೂರು ಉತ್ತರ ತಾಲೂಕಿನ ಚುನಾವಣಾ ನೋಡೆಲ್ ಅಧಿಕಾರಿ ಮುನೀಶ್ ಮೌದ್ಗಿಲ್ ಅವರಿಗೆ ಬಿಜೆಪಿ ಅಭ್ಯರ್ಥಿ ಸುಧಾಕರ್ ವಾಟ್ಸಪ್ ಕರೆ ಮಾಡಿ, ''ಗೋವಿಂದಪ್ಪ ಅವರಿಗೆ ಸಹಾಯ ಮಾಡಿ, ಅಲ್ಲದೆ ಹಣವನ್ನು ವಾಪಸು ಕೊಡಿಸುವಂತೆ'' ಹೇಳಿದ್ದಾರೆ. ಅಲ್ಲದೆ ಗೋವಿಂದಪ್ಪ ಕೂಡ ಮುನೀಶ್ ಮೌದ್ಗಿಲ್ ಅವರಿಗೆ ವಾಟ್ಸಪ್ ಮೂಲಕ "Please Help will we great full to you"ಎಂದು ಸಂದೇಶ ಕಳುಹಿಸಿದ್ದಾರೆ.

ಈ ವಿಚಾರವನ್ನು ಸಾಕ್ಷಿ ಸಮೇತ ಮುನೀಶ್ ಮೌದ್ಗಿಲ್ ಅವರು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳಿಗೆ ನೀಡಿದ್ದಾರೆ. ಬಳಿಕ ಎಸ್ ಎಸ್ ಟಿ ತಂಡದ ಮುಖ್ಯಸ್ಥ ದಶರಥ್ .ವಿ. ಕಂಬಾರ್ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಸುಧಾಕರ್ ವಿರುದ್ಧ ಅನುಚಿತ ಪ್ರಭಾವ, ಲಂಚ ಮತ್ತು ಭ್ರಷ್ಟಾಚಾರದ ಪ್ರಯತ್ನ ಮಾಡಿದ್ದಕ್ಕಾಗಿ RP ಕಾಯಿದೆ 1951ರ ಅಡಿಯಲ್ಲಿ ಸೆಕ್ಷನ್ 171ಇ (ಲಂಚ ಸ್ವೀಕಾರ), 171ಎಫ್ (ಚುನಾವಣೆಯಲ್ಲಿ ಅನಪೇಕ್ಷಿತ ಪ್ರಭಾವ ಬೀರುವಿಕೆ) 171ಬಿ (ಮತದಾರರಿಗೆ ಹಣದ ಆಮಿಷ), 171ಸಿ (ಚುನಾವಣೆ ಕರ್ತವ್ಯಕ್ಕೆ ಅಡ್ಡಿ ಹಾಗೂ ಹಸ್ತಕ್ಷೇಪ) ಆರೋಪದಡಿ ಎಫ್ ಐಆರ್ ದಾಖಲಾಗಿದೆ.

**ದಾಳಿ ನಡೆದಿದ್ದು ಹೇಗೆ:** ಗೋವಿಂದಪ್ಪನವರ ನೆಲಮಂಗಲದ ಮನೆಯಲ್ಲಿ ಹಣ ಇದೆ ಎಂದು ಮಾಹಿತಿ ತಿಳಿಯುತ್ತಿದ್ದಂತೆಯೇ ಐಟಿ ಅಧಿಕಾರಿಗಳು ಶುಕ್ರವಾರ (ಏಪ್ರಿಲ್ 25) ಪುಟ 2

## ಬೆಳಗಾವಿ ಮೇಲೆ ಪಿಎಂ-ಸಿಎಂ ಕಣ್ಣು, ಅಖಾಡಕ್ಕೆ ಏಕಕಾಲಕ್ಕೆ ಮೋದಿ

# ಸಿದ್ದರಾಮಯ್ಯ ಎಂಟ್ರಿ





**ಬೆಳಗಾವಿ:** ರಾಜ್ಯದ ಮೊದಲ ಹಂತದ 14 ಲೋಕಸಭಾ ಕ್ಷೇತ್ರಗಳಿಗೆ ಶುಕ್ರವಾರ ಮತದಾನ ನಡೆಯಿತು. ಇನ್ನುಳಿದ 14 ಕ್ಷೇತ್ರಗಳಿಗೆ ಎರಡನೇ ಹಂತದಲ್ಲಿ ಮೇ 7 ರಂದು ಮತದಾನ ನಡೆಯಲಿದೆ. ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ಬಿಜಾಪುರ, ಗುಲ್ಬರ್ಗಾ, ರಾಯಚೂರು, ಬೀದರ್, ಕೊಪ್ಪಳ. ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ, ಶಿವಮೊಗ್ಗ ಜಿಲ್ಲೆಗಳು ಸೇರಿವೆ. ಈ ಹಿನ್ನೆಲೆಯಲ್ಲಿ ಪ್ರಚಾರ ಇನ್ನೂ ನಡೆದಿದೆ. ರಾಜಕೀಯ ಪವರ್ ಸೆಂಟರ್ ಎನಿಸಿಕೊಂಡಿರುವ ಬೆಳಗಾವಿ ಅಖಾಡಕ್ಕೆ ಏಕಕಾಲಕ್ಕೆ ಪ್ರಧಾನಿ ಮೋದಿ ಮತ್ತು ಸಿಎಂ ಸಿದ್ದರಾಮಯ್ಯ ಧುಮುಕಲಿದ್ದಾರೆ. ಏಪ್ರಿಲ್ 28ರ ಬೆಳಿಗ್ಗೆ 11ಕ್ಕೆ ಬೆಳಗಾವಿಯ ಮಾಲಿನಿ ಸಿಟಿಯಲ್ಲಿ ಪ್ರಧಾನಿ ಮೋದಿ ಬೃಹತ್ ಸಮಾವೇಶ ನಡೆಸಲಿದ್ದು, ಬೆಳಗಾವಿ ಮತ್ತು ಚಿಕ್ಕೋಡಿ ಲೋಕಸಭಾ ಕ್ಷೇತ್ರಗಳ ಅಭ್ಯರ್ಥಿಗಳ ಪರವಾಗಿ ಪ್ರಚಾರ ಮಾಡಲಿದ್ದಾರೆ. ಇದೇ ದಿನದಂದು ಬೆಳಗಾವಿ ಮತ್ತು ಚಿಕ್ಕೋಡಿಗೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡಲಿದ್ದಾರೆ. ಚಿಕ್ಕೋಡಿ ಕ್ಷೇತ್ರ ವ್ಯಾಪ್ತಿಯ ಉಗಾರ್ ಖುರ್ದ್, ಬೆಳಗಾವಿ ಕ್ಷೇತ್ರದ ಯರಗಟ್ಟಿಯಲ್ಲಿ ನಡೆಯುವ ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ. ಸಿಎಂ ಸಿದ್ದರಾಮಯ್ಯ ಒಂದೇ ದಿನ ಎರಡೂ ಕ್ಷೇತ್ರಗಳಲ್ಲಿ ತಲಾ ಒಂದೊಂದು ಸಮಾವೇಶ ನಡೆಸಲಿದ್ದಾರೆ. ಪುಟ 2

### ರಾಜ್ಯದ ಮೊದಲ ಹಂತದ ಮತದಾನ ದಿನ

## 2,172 ಪ್ರಕರಣ ದಾಖಲು




**ಬೆಂಗಳೂರು:** ಲೋಕಸಭೆಯ ರಾಜ್ಯದ 14 ಕ್ಷೇತ್ರಗಳಿಗೆ ಮೊದಲ ಹಂತದಲ್ಲಿ ಶುಕ್ರವಾರ ಮತದಾನ ನಡೆಯಿತು. ಮೊದಲ ಹಂತದ ಚುನಾವಣೆ ಸಂದರ್ಭದಲ್ಲಿ ಎಸ್ ಎಸ್ ಟಿ ಮತ್ತು ಪೊಲೀಸ್ ಇಲಾಖೆ ರಾಜ್ಯದಲ್ಲಿ ಅಕ್ರಮವಾಗಿ ಸಂಗ್ರಹಿಸಿದ್ದ ಹಣ, ಮದ್ಯ, ಡ್ರಗ್ಸ್, ಚಿನ್ನಾಭರಣ ಮತ್ತು ಉಚಿತ ಉಡುಗೊರೆಗಳನ್ನು ಜಪ್ತಿ ಮಾಡಿದ್ದು, ಈ ಸಂಬಂಧ 2,172 ಪ್ರಕರಣಗಳು ದಾಖಲಾಗಿವೆ. ಅಬಕಾರಿ ಇಲಾಖೆ 3098 ಹೀನಸ್ ಪ್ರಕರಣಗಳನ್ನು ದಾಖಲಿಸಿದೆ.

ಲೈಸೆನ್ಸ್ ಉಲ್ಲಂಘನೆ ಮಾಡಿದ್ದಕ್ಕೆ 4789 ಪ್ರಕರಣ, ಎನ್ ಡಿಪಿಎಸ್ ಕಾಯ್ದೆ ಅಡಿ 177, ಸೆಕ್ಷನ್ 15ರಡಿ 28,299 ಪ್ರಕರಣಗಳು ದಾಖಲಾಗಿವೆ. ಅಧಿಕಾರಿಗಳು ಒಟ್ಟು 1,916 ವಾಹನಗಳನ್ನು ಜಪ್ತಿ ಮಾಡಲಾಗಿದೆ.

ಇನ್ನು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಯಲಹಂಕಾದ ಮಾದನಾಯನಹಳ್ಳಿ ಬಳಿ 4.80 ಕೋಟಿ ರೂಪಾಯಿ ಜಪ್ತಿ ಮಾಡಿದ್ದಾರೆ. ಎಫ್ ಎಸ್ ಟಿ ತಂಡ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಕೋರಮಂಗಲದಲ್ಲಿ 18.82 ಲಕ್ಷ ರೂಪಾಯಿ, ಕೋಲಾರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಕೆಜಿಎಫ್ ನ ಬೇತಮಂಗಲದಲ್ಲಿ 47.56 ಲಕ್ಷ ಹಣ ವಶಕ್ಕೆ ಪಡೆದಿದ್ದಾರೆ. ಪುಟ 2

# ಮುಸ್ಲಿಮರ ಮೀಸಲಾತಿ ರದ್ದತಿ ವಿಚಾರದಲ್ಲಿ ಬಿಜೆಪಿಯ ನಿಲುವು ಅಚಲ



**ಬೆಂಗಳೂರು:** ಮುಸ್ಲಿಮರ ಶೇ 4ರಷ್ಟು ಮೀಸಲಾತಿಯನ್ನು ರದ್ದುಪಡಿಸುವ ವಿಚಾರದಲ್ಲಿ ಬಿಜೆಪಿ ದೃಢವಾಗಿದೆ ಮತ್ತು ಆ ವಿಚಾರಕ್ಕೆ ಸಂಬಂಧಿಸಿ ಚೆಂಡು ಈಗ ಕಾಂಗ್ರೆಸ್ ಅಂಗಳದಲ್ಲಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಶುಕ್ರವಾರ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಮುಸ್ಲಿಂ ಕೋಟಾ ವಿಚಾರ ಸದ್ಯ ಸುಪ್ರೀಂ ಕೋರ್ಟ್ ನಲ್ಲಿದೆ. ಹಾಗಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಸುಳ್ಳು ಹೇಳುತ್ತಿದ್ದಾರೆ' ಎಂದರು.

ನಾವು ಮುಸ್ಲಿಂ ಕೋಟಾವನ್ನು ರದ್ದುಗೊಳಿಸುತ್ತೇವೆ ಅಥವಾ ಅದನ್ನು ಮುಂದುವರಿಸುತ್ತೇವೆ ಎಂದು ಸುಪ್ರೀಂ ಕೋರ್ಟ್‌ಗೆ ಯಾವತ್ತೂ ಹೇಳಿರಲಿಲ್ಲ. ನಮ್ಮ ನಿರ್ಧಾರವನ್ನು ಪ್ರಶ್ನಿಸಿ ಸಿದ್ದರಾಮಯ್ಯ ಅವರ ಆಪ್ತ ರವಿವರ್ಮ ಕುಮಾರ್ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ಸಿದ್ದರಾಮಯ್ಯನವರ ಆಗ್ರಹದ ಮೇರೆಗೆ ಅವರು ಹಾಗೆ ಮಾಡಿದ್ದರು. ನ್ಯಾಯಾಲಯ ಇನ್ನಷ್ಟೇ ಈ ವಿಷಯವನ್ನು ವಿಚಾರಣೆಗೆ ಕೈಗೆತ್ತಿಕೊಳ್ಳಬೇಕಿದೆ. ನಮ್ಮ ವಾದವನ್ನು ನಾವು ನ್ಯಾಯಾಲಯದಲ್ಲಿ ಮಂಡಿಸುತ್ತೇವೆ ಎಂದು ಮಾಜಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯೂ ಆಗಿರುವ ಬೊಮ್ಮಾಯಿ ಹೇಳಿದರು.

ವಿವಾದ ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೆ ಮುಸ್ಲಿಂ ಕೋಟಾವನ್ನು ರದ್ದುಗೊಳಿಸುವ ನಿರ್ಧಾರವನ್ನು ಜಾರಿಗೊಳಿಸುವುದಿಲ್ಲ ಎಂದು ಬಿಜೆಪಿ ಸರಕಾರ ಸ್ಪಷ್ಟಪಡಿಸಿತ್ತು. ನಮ್ಮ ನಿಲುವು ಇಂದಿಗೂ ಅದಕ್ಕೆ ಬದ್ಧವಾಗಿಯೇ ಇದೆ. ಆಗ ಪ್ರತಿಪಕ್ಷ ಕಾಂಗ್ರೆಸ್ ನಮ್ಮ ನಿರ್ಧಾರವನ್ನು ವಿರೋಧಿಸಿತ್ತು. ಈಗ, ಆಡಳಿತಾರೂಢ ಕಾಂಗ್ರೆಸ್ ಕೋಟಾವನ್ನು ಮುಂದುವರಿಸುತ್ತದೆಯೇ ಎಂಬುದು ಪ್ರಶ್ನೆ ಎಂದು ಬೊಮ್ಮಾಯಿ ಹೇಳಿದರು. ಪುಟ 2

### ಬಿಜೆಪಿ ಅಭ್ಯರ್ಥಿಯ ಅವಿರೋಧ ಆಯ್ಕೆ, ತನ್ನ ಅಭ್ಯರ್ಥಿಯನ್ನು

# ಉಚ್ಛಾಟಿಸಿದ ಕಾಂಗ್ರೆಸ್



**ಗುಜರಾತ್:** ಗುಜರಾತ್‌ನ ಸೂರತ್ ಲೋಕಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ನೀಲೇಶ್ ಕುಂಭಾನಿ ನಾಮಪತ್ರ ತಿರಸ್ಕೃತಗೊಳ್ಳುತ್ತಿದ್ದಂತೆ ಪಕ್ಷವು ಅವರನ್ನು ಉಚ್ಛಾಟಿಸಿದೆ. ನೀಲೇಶ್ ಅವರ ನಾಮಪತ್ರ ರದ್ದಾದ ನಂತರ ಇತರೆ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಹಿಂಪಡೆದ ಬಳಿಕ ಬಿಜೆಪಿ ಅಭ್ಯರ್ಥಿ ಮುಖೇಶ್ ದಲಾಲ್ ಅವರನ್ನು ಅವರೋಧವಾಗಿ ಆಯ್ಕೆ ಮಾಡಲಾಗಿತ್ತು. ಈ ಕ್ಷೇತ್ರದ ಚುನಾವಣಾ ಪ್ರಕ್ರಿಯೆಯನ್ನು ರದ್ದುಗೊಳಿಸುವಂತೆ ಕೋರಿ ನ್ಯಾಯಾಲಯದ ಮೊರೆ ಹೋಗುವ ಕುರಿತು ಕಾಂಗ್ರೆಸ್ ಮಾತನಾಡಿತ್ತು.

ನೀಲೇಶ್ ಕುಂಭಾಣಿ ಬಗ್ಗೆಯೂ ಪಕ್ಷ ಕಟ್ಟುನಿಟ್ಟಿನ ನಿಲು ತಳೆದಿದೆ, ನೀಲೇಶ್ ಅವರನ್ನು ಕಾಂಗ್ರೆಸ್ ಪಕ್ಷದಿಂದ ಆರು ವರ್ಷಗಳ ಕಾಲ ಉಚ್ಛಾಟಿಸಿದೆ. ನೀಲೇಶ್ ಅವರನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಆರು ವರ್ಷಗಳ ಕಾಲ ಅಮಾನತುಗೊಳಿಸಲು ಕಾಂಗ್ರೆಸ್ ಶಿಸ್ತು ಸಮಿತಿ ನಿರ್ಧರಿಸಿದೆ. ಸೂರತ್ ಕ್ಷೇತ್ರದಿಂದ ನಾಮಪತ್ರ ರದ್ದತಿಗೆ ನೀಲೇಶ್ ಕುಂಭಾಣಿ ಹೊಣೆಗಾರಿಕೆಯನ್ನು ಶಿಸ್ತು ಸಮಿತಿ ಹೊರಿಸಿದೆ.

ನಾಮಪತ್ರ ರದ್ದು ನಿಮ್ಮ ನಿರ್ಲಕ್ಷ್ಯ ಅಥವಾ ಬಿಜೆಪಿ ಜತೆಗಿನ ಒಡನಾಟವನ್ನು ತೋರಿಸುತ್ತದೆ ಎಂದು ಶಿಸ್ತು ಸಮಿತಿ ನಿರ್ಧಾರದಲ್ಲಿ ಹೇಳಿದೆ. ಇದರಿಂದಾಗಿ ಸೂರತ್ ನ ಜನರು ಮತದಾನದ ಹಕ್ಕಿನಿಂದ ವಂಚಿತರಾಗಿದ್ದಾರೆ ಎಂದು ಹೇಳಿದ್ದಾರೆ. ಸೂರತ್ ಕ್ಷೇತ್ರದಿಂದ ನಾಮಪತ್ರ ರದ್ದಾದ ಬಳಿಕ ನೀಲೇಶ್ ಕುಂಭಾಣಿ ಮಾಧ್ಯಮಗಳ ಮುಂದೆ ಬಂದಿಲ್ಲ, ಕಾಂಗ್ರೆಸ್ ನಾಯಕರು ಕೂಡ ಅವರನ್ನು ಸಂಪರ್ಕಿಸಲು ಸಾಧ್ಯವಾಗಿಲ್ಲ. ಪುಟ 2

### ಧಾರ್ಮಿಕ ಕ್ಷೇತ್ರದಲ್ಲಿ ಬದಲಾಗುತ್ತಿದೆ ಜಮ್ಮು-ಕಾಶ್ಮೀರ, ಅಲೆಕ್ಸಾಂಡರ್ ಕೆಡವಿದ ಸೂರ್ಯ ದೇವಾಲಯ

# ಪುನರ್ ನಿರ್ಮಾಣ



**ಜಮ್ಮು:** ಜಮ್ಮು-ಕಾಶ್ಮೀರದಲ್ಲಿ ಅನೇಕ ಬದಲಾವಣೆಗಳು ಆಗುತ್ತಿದೆ. ಹಿಂಸೆಗಳನ್ನು ಕಾಣುತ್ತಿದ್ದ ಈ ರಾಜ್ಯದಲ್ಲಿ ಶಾಂತಿ, ಧಾರ್ಮಿಕ ಬದಲಾವಣೆಗಳು ಆಗುತ್ತಿದೆ. ಇದೀಗ ಇಲ್ಲಿ ಧಾರ್ಮಿಕ ಕ್ಷೇತ್ರದಲ್ಲಿ ದೊಡ್ಡ ಮಟ್ಟದ ಬದಲಾವಣೆಗೆ ಮಾಡಲು ಇಲ್ಲಿನ ಜನ ಮುಂದಾಗಿದ್ದಾರೆ. ಹೌದು ಜಮ್ಮು ಮತ್ತು ಕಾಶ್ಮೀರದಲ್ಲಿರುವ ದೇಶದ ಅತ್ಯಂತ ಪುರಾತನ ಸೂರ್ಯ ದೇವಾಲಯವನ್ನು ಪುನರ್ ನಿರ್ಮಾಣ ಮಾಡಲಾಗುತ್ತಿದೆ. ಅನಂತನಾಗ್‌ನಲ್ಲಿ ನಿರ್ಮಿಸಲಾದ ಈ ಸೂರ್ಯ ದೇವಾಲಯವನ್ನು ಶೀಘ್ರದಲ್ಲೇ ನವೀಕರಿಸಲಾಗುವುದು ಎಂದು ಹೇಳಲಾಗಿದೆ. ಇನ್ನು ದೇವಾಲಯಕ್ಕಾಗಿ ಒಂದು ಸಮಿತಿಯನ್ನು ರಚನೆ ಮಾಡಲಾಗಿದೆ. ಇದರ ಮೊದಲ ಸಭೆಯಲ್ಲಿ ದೇವಾಲಯ ನಿರ್ಮಾಣ ಕಾಮಗಾರಿಯನ್ನು ಶೀಘ್ರ ಆರಂಭಿಸುವ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ.

ಮಾರ್ತಾಂಡ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಬಹುದಿನಗಳಿಂದ ಬೇಡಿಕೆ ಇತ್ತು. ಇದಕ್ಕಾಗಿ ಹಿಂದೂ ಮತ್ತು ಮುಸ್ಲಿಂ ಎರಡೂ ಧರ್ಮಗಳ ಜನರು ದೇವಾಲಯದ ಪುನರ್ ನಿರ್ಮಾಣಕ್ಕೆ ಅಭಿಯಾನ ಕೂಡ ನಡೆಸಿದರು ಎಂದು ಹೇಳಲಾಗಿದೆ. ಪುಟ 2

### ಉತ್ತರ ಪ್ರತಿಕೆಯಲ್ಲಿ ಜೈ ಶ್ರೀರಾಮ ಘೋಷಣೆ

# ಅಂಕ ನೀಡಿದ ಪ್ರಾಧ್ಯಾಪಕರು ಅಮಾನತು






**ಲಕ್ನೋ:** ಉತ್ತರ ಪ್ರದೇಶದ ವಿಶ್ವವಿದ್ಯಾನಿಲಯದಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳು ಉತ್ತರ ಪ್ರತಿಕೆಯಲ್ಲಿ ಜೈ ಶ್ರೀರಾಮ ಮತ್ತು ಕ್ರಿಕೆಟಿಗರ ಹೆಸರನ್ನು ಬರೆದಿದ್ದಾರೆ. ಇದೀಗ ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಪ್ರಶ್ನೆಗೆ ಉತ್ತರ ಬರೆಯುವ ಬದಲು ಜೈ ಶ್ರೀರಾಮ್ , ಕ್ರಿಕೆಟಿಗರ ಹೆಸರನ್ನು ಬರೆದಿದ್ದು, ಇದಕ್ಕೆ ಅಲ್ಲಿನ ಶಿಕ್ಷಕರು ಅಂಕವನ್ನು ನೀಡಿದ್ದಾರೆ ಎಂದು ಆರೋಪಿಸಲಾಗಿದೆ. ಹಣ ಪಡೆದು ಈ ಉತ್ತರ ಪ್ರತಿಕೆಗೆ ಅಂಕ ನೀಡಲಾಗಿದೆ ಎಂದು ಹೇಳಲಾಗಿದೆ.

ಹಾಡುಗಳು, ಸಂಗೀತ ಮತ್ತು ಧಾರ್ಮಿಕ ಘೋಷಣೆಗಳನ್ನು ಬರೆದಿರುವ ಉತ್ತರ ಪ್ರತಿಕೆಗಳಿಗೆ ಶಿಕ್ಷಕರು ಅಂಕ ನೀಡಿದ್ದು, ಇದೀಗ ಆ ಶಿಕ್ಷಕರನ್ನು ಅಮಾನತು ಮಾಡಲಾಗಿದೆ. ಜೌನ್‌ಪುರದ ವೀರ್ ಬಹದ್ದೂರ್ ಸಿಂಗ್ ಪೂರ್ವಾಂಚಲ್ ವಿಶ್ವವಿದ್ಯಾಲಯದ ಇಬ್ಬರು ಪ್ರಾಧ್ಯಾಪಕರನ್ನು ಅಮಾನತುಗೊಳಿಸಲಾಗಿದೆ.

ವಿಶ್ವವಿದ್ಯಾನಿಲಯದ ಕೆಲವು ಅಧಿಕಾರಿಗಳ ಸಹಕಾರದಿಂದ ಶೂನ್ಯ ಅಂಕ ಪಡೆದ ವಿದ್ಯಾರ್ಥಿಗಳಿಗೆ 60% ಅಂಕವನ್ನು ನೀಡಲಾಗಿದೆ. ಈ ಬಗ್ಗೆ ವಿದ್ಯಾರ್ಥಿ ಮುಖಂಡ ದಿವ್ಯಾ ಂಶು ಸಿಂಗ್ ಅವರು ಪ್ರಧಾನಿ, ಮುಖ್ಯಮಂತ್ರಿ, ರಾಜ್ಯಪಾಲರು ಹಾಗೂ ಉಪಕುಲಪತಿಗಳಿಗೆ ಬರೆದ ಪತ್ರ ಬರೆದಿದ್ದಾರೆ ಎಂದು ಹೇಳಲಾಗಿದೆ. ಇನ್ನು ಈ ಉತ್ತರ ಪ್ರತಿಕೆಯಲ್ಲಿ ಹಾರ್ದಿಕ್ ಪಾಂಡ್ಯ, ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರಂತಹ ಕ್ರಿಕೆಟಿಗರ ಹೆಸರುಗಳು ಕೂಡ ಇದೆ ಎಂದು ಹೇಳಲಾಗಿದೆ.

ಪ್ರತಿಗಳ ಮೌಲ್ಯಮಾಪನದ ಸಮಯದಲ್ಲಿ ಆರ್‌ಟಿಐ ಪ್ರತಿಕ್ರಿಯೆಯಿಂದ ಈ ಅಕ್ರಮ ಬಹಿರಂಗಗೊಂಡಿದೆ ಎಂದು ಹೇಳಲಾಗಿದೆ. ಇಂತಹ ಉತ್ತರ ಪ್ರತಿಕೆಯನ್ನು ಮರುಮೌಲ್ಯಮಾಪನ ಮಾಡಿದಾಗ ಈ ಪ್ರಕರಣ ಬೆಳಕಿಗೆ ಬಂದಿದೆ. ಈ ಬಗ್ಗೆ ಮಾತನಾಡಿದ ಉಪಕುಲಪತಿ ವಂದನಾ ಸಿಂಗ್ ಅವರು, '' ವಿದ್ಯಾರ್ಥಿಗಳಿಗೆ ಹೆಚ್ಚು ಅಂಕ ನೀಡಲಾಗಿದೆ ಎಂಬ ಆರೋಪವಿತ್ತು. ಹಾಗಾಗಿ ನಾವು ಸಮಿತಿಯನ್ನು ರಚಿಸಿದ್ದೇವೆ. ಆ ಸಮಿತಿಯು ತನ್ನ ವರದಿಯಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚು ಅಂಕಗಳನ್ನು ನೀಡಲಾಗಿದೆ'' ಎಂದು ಹೇಳಿದ್ದಾರೆ.

ಇನ್ನು ಈ ಉತ್ತರ ಪ್ರತಿಕೆಯಲ್ಲಿ ಜೈ ಶ್ರೀರಾಮ ಘೋಷಣೆ ಬಗ್ಗೆ ಯಾವುದು ನಮ್ಮ ಗಮನಕ್ಕೆ ಬಂದಿಲ್ಲ ಎಂದು ಉಪಕುಲಪತಿ ವಂದನಾ ಸಿಂಗ್ ಹೇಳಿದರು. ರಾಜ್ಯಭವನಕ್ಕೂ ಈ ಬಗ್ಗೆ ಪತ್ರ ಬರೆಯಲಾಗಿದ್ದು, ತನಿಖೆ ನಡೆಸಲಾಗುವುದು ಎಂದು ಹೇಳಿದ್ದಾರೆ. ಇಂತಹ ಘಟನೆ ಪುನರಾವರ್ತನೆಯಾಗದಂತೆ ಶಿಕ್ಷಕರಿಗೆ ಎಚ್ಚರಿಕೆ ನೀಡಲಾಗಿದೆ.ಈ ಕೃತ್ಯದಲ್ಲಿ ಭಾಗಿಯಾಗಿರುವ ಶಿಕ್ಷಕರನ್ನು ವಜಾಗೊಳಿಸಲು ಸಮಿತಿ ಶಿಫಾರಸು ಮಾಡಿದ್ದೇನೆ . ಆದರೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು, ಚುನಾವಣಾ ನೀತಿ ಸಂಹಿತೆ ತೆರವಾದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಉಪಕುಲಪತಿ ವಂದನಾ ಸಿಂಗ್ ಹೇಳಿದ್ದಾರೆ.

ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ; ಇನ್ನೂ ಬೇಕೆನ್ನುವವನು ಬಡವ

। ಸೆನೇಕಾ

## ಪಂಚಾಂಗ

(ಶನಿವಾರ 27, ಏಪ್ರಿಲ್ -2024)

- ಶ್ರೀಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ವಸಂತ ಋತು,
- ಚೈತ್ರ ಮಾಸ,
- ಕೃಷ್ಣ ಪಕ್ಷ/ ತೃತಿಯ ಚತುರ್ಥಿ,
- ಶನಿವಾರ, ಜೇಷ್ಠ ನಕ್ಷತ್ರ
- ರಾಹುಕಾಲ: 09:13 ರಿಂದ 10:47
- ಗುಳಿಕ ಕಾಲ: 06:06 ರಿಂದ 07:39
- ಯಮಗಂಡಕಾಲ: 01:55 ರಿಂದ 03:29

## ಸಂಕ್ಷಿಪ್ತ ಸುದ್ದಿ

### ತೈವಾನ್‌ನಲ್ಲಿ ಮತ್ತೆ ನಡುಗಿದ ಭೂಮಿ



**ತೈಪೆ:** ತೈವಾನ್‌ನಲ್ಲಿ ಮತ್ತೊಮ್ಮೆ ಭೂಕಂಪನದ ಅನುಭವವಾಗಿದೆ.ರಿಕ್ಟರ್ ಮಾಪಕದಲ್ಲಿ 6.1 ತೀವ್ರತೆಯನ್ನು ಹೊಂದಿದೆ. ಈ ತಿಂಗಳಲ್ಲಿ ತೈವಾನ್‌ನಲ್ಲಿ ಸಂಭವಿಸಿದ ಎರಡನೇ ದೊಡ್ಡ ಭೂಕಂಪನ ಇದಾಗಿದೆ. ಹವಾಮಾನ ಇಲಾಖೆಯ ಪ್ರಕಾರ, ದೇಶದ ಪೂರ್ವ ಭಾಗದಲ್ಲಿ ಭೂಕಂಪದ ಕೇಂದ್ರಬಿಂದುವಿದೆ. ಶನಿವಾರ ಹೌಲಿನ್‌ನಲ್ಲಿ ಈ ಭೂಕಂಪ ಸಂಭವಿಸಿದೆ.ತೈವಾನ್‌ನ ರಾಜಧಾನಿ ತೈಪೆಯಲ್ಲೂ ಕಟ್ಟಡಗಳು ಅಲುಗಾಡಿರುವುದು ಕಂಡುಬಂದಿದೆ.ಆದರೆ ಯಾವುದೇ ಪ್ರಾಣಹಾನಿ ಅಥವಾ ಆಸ್ತಿ ನಷ್ಟದ ಬಗ್ಗೆ ವರದಿಯಾಗಿಲ್ಲ. ತೈವಾನ್‌ನಲ್ಲಿ ಒಂದು ತಿಂಗಳೊಳಗೆ ಸಾವಿರಕ್ಕೂ ಹೆಚ್ಚು ಕಂಪನದ ಅನುಭವವಾಗಿದೆ.ಈ ತಿಂಗಳ ಆರಂಭದಲ್ಲಿ7.1 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು, ಪುಟ 2

### ಮತಗಟ್ಟೆಯಲ್ಲೇ ಜೆಡಿಎಸ್ -ಕಾರ್ಯಕರ್ತರ ಮಾರಾಮಾರಿ



**ಹಾಸನ:** ಮತದಾನ ಪ್ರಕ್ರಿಯೆ ಮುಗಿಯುವ ವೇಳೆ ಎರಡು ಗುಂಪುಗಳ ನಡುವೆ ಮಾರಾಮಾರಿ ನಡೆದಿರೋ ಘಟನೆ ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲೂಕಿನ ಕೆಬಿ ಪಾಳ್ಯದಲ್ಲಿ ನಡೆದಿದೆ.ಮತಗಟ್ಟೆ ಬಳಿಯೇ ಕಾಂಗ್ರೆಸ್ ಹಾಗೂ ಜೆಡಿಎಸ್ ಕಾರ್ಯಕರ್ತರು ಬಡಿದಾಡಿಕೊಂಡಿದ್ದಾರೆ.ಮತಗಟ್ಟೆ ಸಂಖ್ಯೆ 249ರಲ್ಲಿ ಈ ಘಟನೆ ನಡೆದಿದೆ.ಮತಗಟ್ಟೆಗೆ ಹಾಸನ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್ ತಾಯಿ ಅನುಪಮಾ ಮಹೇಶ್ ಭೇಟಿ ಕೊಟ್ಟ ವೇಳೆ ಗಲಾಟೆ ನಡೆದಿದೆ. ಕಾಂಗ್ರೆಸ್, ಜೆಡಿಎಸ್ ಕಾರ್ಯಕರ್ತರ ಗಲಾಟೆ ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ, ಕೆ.ಬಿ. ಪಾಳ್ಯದ ಪುಟ 2

# ಕೇಂದ್ರದಿಂದ 3,454 ಕೋಟಿ ರೂ. ಬರ ಪರಿಹಾರ

**ನವದೆಹಲಿ/ಬೆಂಗಳೂರು:** ಕೇಂದ್ರ ಸರ್ಕಾರ ಕರ್ನಾಟಕಕ್ಕೆ 3,454 ಕೋಟಿ ರೂ. ಬರ ಪರಿಹಾರ ಘೋಷಣೆ ಮಾಡಿದೆ. ನೆರೆ ಪರಿಹಾರವೆಂದು ತಮಿಳುನಾಡಿಗೆ 275 ಕೋಟಿ ರೂ. ಪರಿಹಾರ ನೀಡಿದೆ. ಕಳೆದ ವರ್ಷ ಸೆಪ್ಟೆಂಬರ್ ನಲ್ಲಿ ರಾಜ್ಯ ಸರ್ಕಾರ ಕೇಂದ್ರಕ್ಕೆ ಬರ ಪರಿಹಾರಕ್ಕಾಗಿ 18,174 ಕೋಟಿ ಹಣ ಬೇಡಿಕೆ ಇಟ್ಟಿತ್ತು. ಬೇಡಿಕೆ ಇಟ್ಟು ಇಷ್ಟು ದಿನಗಳು ಕಳೆದರೂ ಕೇಂದ್ರ ಸರ್ಕಾರ ಬರ ಪರಿಹಾರ ಬಿಡುಗಡೆ ಮಾಡಿರಲಿಲ್ಲ. ಹೀಗಾಗಿ ರಾಜ್ಯ ಸರ್ಕಾರ ಸುಪ್ರೀಂಕೋರ್ಟ್ ಮೊರೆ ಹೋಗಿತ್ತು. ಬಳಿಕ ಕೇಂದ್ರ ಸರ್ಕಾರ ಬರ ಪರಿಹಾರ ಬಿಡುಗಡೆ ಮಾಡುವುದಾಗಿ ಸುಪ್ರೀಂಕೋರ್ಟ್ ನಲ್ಲಿ ಸೋಮವಾರದೊಳಗೆ ಒಪ್ಪಿಕೊಂಡಿತ್ತು. ಅದರಂತೆ ಇದೀಗ ಕೇಂದ್ರ ಸರ್ಕರ ಬರ ಪರಿಹಾರ ಘೋಷಣೆ ಮಾಡಿದೆ.

**ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದ ಮನವಿ ಏನು? :** ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕಂದಾಯ ಸಚಿವ ಕೃಷ್ಣಬೈರೇಗೌಡ 2023ರ ಡಿಸೆಂಬರ್ ನಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿ ಮಾಡಿ, ರಾಜ್ಯದಲ್ಲಿ 236 ರಲ್ಲಿ 223 ತಾಲ್ಲೂಕುಗಳು ಬರಪೀಡಿತವಾಗಿದ್ದು, ಅದರಲ್ಲಿ 196 ತಾಲ್ಲೂಕುಗಳಲ್ಲಿ ಬರದ ತೀವ್ರತೆ ಹೆಚ್ಚಾಗಿದೆ. ಇದರಿಂದಾಗಿ 48.19 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಮತ್ತು ತೋಟಗಾರಿಕಾ ಬೆಳೆಗಳು ನಷ್ಟ ಆಗಿದೆ. ಇದರಿಂದ ಹೆಚ್ಚಿನ ಸಂಖ್ಯೆಯ ಸಣ್ಣ ಮತ್ತು ಅತಿ ಸಣ್ಣ ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ ಎಂದು ವಿವರಿಸಿದ್ದರು. ಹೀಗಾಗಿ ಶೀಘ್ರವೇ 18,177.44 ಕೋಟಿ ರೂ. ಪರಿಹಾರ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದರು. ಇದರಲ್ಲಿ 4663 ಕೋಟಿ ರೂ. ಇನ್‌ಪುಟ್ ಸಬ್ಸಿಡಿ, 12,577 ಕೋಟಿ ರೂ. ತುರ್ತು ಪರಿಹಾರ ನೀಡುವಂತೆ ಕೋರಿದ್ದರು. 566 ಕೋಟಿ ರೂ. ಕುಡಿಯುವ ನೀರಿಗಾಗಿ ಹಾಗೂ 363 ಕೋಟಿ ರೂ. ಜಾನುವಾರುಗಳ ಸಂರಕ್ಷಣೆಗಾಗಿ ಒದಗಿಸುವಂತೆ ಮನವಿ ಮಾಡಿದ್ದರು. ಜೊತೆಗೆ ಎನ್.ಡಿ.ಆರ್.ಎಫ್. ನಿಂದ 4663 ಕೋಟಿ ರೂ. ಇನ್‌ಪುಟ್ ಸಬ್ಸಿಡಿ ಒದಗಿಸುವಂತೆ ಮನವಿ ಮಾಡಿದ್ದರು. ರೈತರಿಗೆ ಇನ್‌ಪುಟ್ ಸಬ್ಸಿಡಿ ನೀಡಲು 2015-16 ರ ಕೃಷಿ ಗಣತಿಯನ್ನು ಪರಿಗಣಿಸಲಾಗುತ್ತಿದ್ದು, ಇದು 8 ವರ್ಷ ಹಳೆಯ ಮಾಹಿತಿಯಾಗಿದೆ. ಅಲ್ಲದೆ ರಾಜ್ಯದಲ್ಲಿ ರೈತರ ದತ್ತಾಂಶವನ್ನು ಫ್ರೂಟ್ಸ್ ತಂತ್ರಾಂಶದಲ್ಲಿ ದಾಖಲಿಸಲಾಗಿದ್ದು ಪಿಎಂ-ಕಿಸಾನ್ ಯೋಜನೆಗೆ ಇದನ್ನು ಪರಿಗಣಿಸಲಾಗುತ್ತಿದೆ. ಇದರನ್ವಯ ರಾಜ್ಯದಲ್ಲಿ 83 ಲಕ್ಷ ಜನ ಸಣ್ಣ ಮತ್ತು ಅತಿ ಸಣ್ಣ ರೈತರಿದ್ದು, ಪರಿಹಾರ ವಿತರಣೆಗೆ ಈ ದತ್ತಾಂಶವನ್ನು ಪರಿಗಣಿಸುವಂತೆ ಮನವಿ ಮಾಡಿದ್ದರು. ಜೊತೆಗೆ ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಬರಪೀಡಿತ ತಾಲೂಕುಗಳಲ್ಲಿ ಉದ್ಯೋಗದ ದಿನಗಳನ್ನು 100 ರಿಂದ 150 ದಿನಗಳಿಗೆ ಹೆಚ್ಚಿಸುವಂತೆ ಆಗ್ರಹಿಸಿದ್ದರು.

# ತೇಜಸ್ವಿಸೂರ್ಯ ವಿರುದ್ಧ ಎಫ್‌ಐಆರ್

**ಬೆಂಗಳೂರು:** ಧರ್ಮದ ಆಧಾರದಲ್ಲಿ ಮತ ಕೇಳಿದ್ದಕ್ಕೆ ಸಂಸದ ತೇಜಸ್ವಿ ಸೂರ್ಯ ವಿರುದ್ಧ ಎಫ್‌ಐಆರ್ ದಾಖಲಾಗಿದೆ.



ಎಕ್ಸ್‌ನಲ್ಲಿ ಧರ್ಮದ ಆಧಾರದಲ್ಲಿ ಮತ ಕೇಳಿದ್ದಕ್ಕೆ ತೇಜಸ್ವಿ ಸೂರ್ಯ ವಿರುದ್ಧ ಎಫ್ ಐಆರ್ ದಾಖಲಾಗಿದೆ ಎಂದು ಕರ್ನಾಟಕ ಚುನಾವಣಾ ಆಯೋಗ ಎಕ್ಸ್‌ನಲ್ಲಿ ತಿಳಿಸಿದೆ. ಏ.25 ರಂದು ತೇಜಸ್ವಿ ಸೂರ್ಯಎಕ್ಸ್‌ನಲ್ಲಿ ಅಯೋಧ್ಯೆಯಬಾಲ ರಾಮನ ಹಣೆಗೆ ಸೂರ್ಯ ಸ್ಪರ್ಶಿಸುವ ವಿಡಿಯೋವನ್ನು ಅಪ್ಲೋಡ್ ಮಾಡಿ, ರಾಮ ನವಮಿಯಂದು ಅಯೋಧ್ಯೆಯಲ್ಲಿ ಭಗವಾನ್ ಶ್ರೀರಾಮನ ಮೇಲೆ ಭವ್ಯವಾದ ಸೂರ್ಯತಿಲಕವನ್ನು ವೀಕ್ಷಿಸಲು ನಮ್ಮ ಪೀಳಿಗೆಯು ಆಶೀರ್ವದಿಸಲ್ಪಟ್ಟಿದೆ.ಸುಮಾರು 500 ವರ್ಷಗಳ ಕಾಯುವಿಕೆ ಮತ್ತು ಕೋಟಿಗಟ್ಟಲೆ ಭಾರತೀಯರ ಆಶಯವನ್ನು ಪ್ರಧಾನಿ ಈಡೇರಿಸಿದ್ದಾರೆ. ಭಾರತೀಯತೆ ಉಳಿಯಲು ಬಿಜೆಪಿಗೆ ಮತ ನೀಡಿ ಎಂದು ಬರೆದಿದ್ದರು.

# ಇವಿಎಂ ಮೆಷಿನ್ ಸಾಗಿಸುತ್ತಿದ್ದ ಟೈರ್ ಬ್ಲಾಸ್ಟ್




**ಕೋಲಾರ:** ಇವಿಎಂ ಮೆಷಿನ್ ಸಾಗಿಸುತ್ತಿದ್ದ ಕ್ಯಾಂಟರ್ ವಾಹನದ ಟೈರ್ ಬ್ಲಾಸ್ಟ್ ಆದ ಘಟನೆಯೊಂದು ಕೋಲಾರದಲ್ಲಿ ನಡೆದಿದೆ. ಮುಳಬಾಗಿಲಿನಿಂದ ಕೋಲಾರದ ಸ್ಟ್ರಾಂಗ್ ರೂಂಗೆ ಇವಿಎಂ ಸಾಗಿಸಲಾಗುತ್ತಿತ್ತು.ಈ ವೇಳೆ ಕೋಲಾರ ತಾಲೂಕು ವಡಗೂರ್ ಗೇಟ್ ಬಳಿ ಟೈರ್ ಬ್ಲಾಸ್ಟ್ ಆಗಿದೆ. ಪರಿಣಾಮ ಸುಮಾರು 1 ಗಂಟೆಗಳ ಕಾಲ ವಾಹನ ರಸ್ತೆಯಲ್ಲಿಯೇ ನಿಲ್ಲುವಂತಾಗಿದೆ. ಕ್ಯಾಂಟರ್ ಸೀಲ್ ಮಾಡಿರುವುದರಿಂದ ವಾಹನ ರಿಪೇರಿಯಾದ ನಂತರ ಸ್ಟ್ರಾಂಗ್ ರೂಂಗೆ ರವಾನೆ ಮಾಡಲಾಗಿದೆ.ವಾಹನದ ಸುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಒದಗಿಸಲಾಗಿತ್ತು.ತಹಶಿಲ್ದಾರ್ ಹಾಗೂ ಪೊಲೀಸ್ ಸಿಬ್ಬಂದಿ ಸ್ಥಳದಲ್ಲೇ ಮೊಕ್ಕಾಂ ಹೂಡಿದ್ದರು.ಕೋಲಾರದಲ್ಲಿ 78.07% ರಷ್ಟು ಮತದಾನ ನಡೆದಿದೆ. ಕೋಲಾರದಲ್ಲಿ ಕಾಂಗ್ರೆಸ್‌ನಿಂದ ಕೆ.ವಿಗೌತಮ್ ಹಾಗೂ ಮೈತ್ರಿ ಅಭ್ಯರ್ಥಿಯಾಗಿ ಮಲ್ಲೇಶ್ ಬಾಬು ಅಖಾಡದಲ್ಲಿದ್ದಾರೆ.

## ಕೆಎಸ್‌ಆರ್‌ಟಿಸಿ ಬಸ್ ಬದಲಿಗೆ ಕಾರಿನಲ್ಲಿ ಮತಪೆಟ್ಟಿಗೆ ರವಾನೆ

# ವಾಹನ ತಡೆದು ಗ್ರಾಮಸ್ಥರ ಆಕ್ರೋಶ



**ರಾಮನಗರ:** ಮತದಾನ ಮುಕ್ತಾಯವಾದ ಬಳಿಕ ಕೆಎಸ್‌ಆರ್‌ಟಿಸಿ ಬಸ್ ಬದಲಾಗಿಕಾರಿನಲ್ಲಿ ಮತಪೆಟ್ಟಿಗೆರವಾನೆ ಮಾಡುತ್ತಿದ್ದ ಚುನಾವಣಾಧಿಕಾರಿಗಳ ವಿರುದ್ಧ ಗ್ರಾಮಸ್ಥರು ಆಕ್ರೋಶ ಹೊರಹಾಕಿದ್ದಾರೆ. ಕಾರನ್ನುತಡೆದು ಅಧಿಕಾರಿಗಳ ವಿರುದ್ಧ ವಾಗ್ವಾದ ನಡೆಸಿದ ಘಟನೆ ಚನ್ನಪಟ್ಟಣ ತಾಲೂಕಿನ ರಾಂಪುರ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಬೂತ್ ನಂ.46 ರ ಮತಪೆಟ್ಟಿಗೆಯನ್ನ ಕಾರಿನಲ್ಲಿರವಾನೆ ಮಾಡಿದ್ದಾರೆಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಬೂತ್ ನಂ-47ರ ಮತಗಟ್ಟೆಯನ್ನ ಬಸ್‌ನಲ್ಲಿ ರವಾನೆ ಮಾಡಲು ಅಧಿಕಾರಿಗಳು ಮುಂದಾಗಿದ್ದರು. ಎರಡೂ



ಮತಪೆಟ್ಟಿಗೆಗಳನ್ನ ಬಸ್‌ನಲ್ಲೇರವಾನೆ ಮಾಡುವಂತೆ ಜನರು ಆಗ್ರಹಿಸಿದರು. ಸ್ಥಳಕ್ಕೆ ಚುನಾವಣಾಧಿಕಾರಿಗಳು ಬರಬೇಕೆಂದು ಪಟ್ಟು ಹಿಡಿದ ಘಟನೆ ನಡೆಯಿತು.

ಮತಪೆಟ್ಟಿಗೆ ಕೊಂಡೊಯ್ಯುತ್ತಿದ್ದ ವಾಹನ ನಡೆದು ಗ್ರಾಮಸ್ಥರ ಪ್ರತಿಭಟನೆ ನಡೆಸಿದ ಹಿನ್ನೆಲೆ, ಲಾಠಿ ಬೀಸಿ ಗ್ರಾಮಸ್ಥರನ್ನ ಪೊಲೀಸರು ಚದುರಿಸಿದರು. ಮತಪೆಟ್ಟಿಗೆ ರವಾನೆ ಮಾಡಲು ಗ್ರಾಮಸ್ಥರು ಬಿಡಲಿಲ್ಲ. ಆಗ ಪೊಲೀಸರು ಗ್ರಾಮಸ್ಥರ ಮೇಲೆ ಲಾಠಿ ಪ್ರಹಾರ ನಡೆಸಿದರು.

ಸ್ಥಳಕ್ಕೆ ಚನ್ನಪಟ್ಟಣ ತಹಸಿಲ್ದಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಬಳಿಕ ಪೊಲೀಸ್ ಭದ್ರತೆಯಲ್ಲಿ ಮತಪೆಟ್ಟಿಗೆಗಳ ರವಾನೆ ಮಾಡಲಾಯಿತು. ಪೊಲೀಸರು ಮತ್ತು ಚುನಾವಣಾಧಿಕಾರಿಗಳು ಕೆಎಸ್ ಆರ್‌ಟಿಸಿ ಬಸ್ ಮೂಲಕ ಮತಪೆಟ್ಟಿಗೆಗಳ ರವಾನಿಸಿದರು.

# ವೋಟ್ ಮಾಡದ ನಟಿ ರಮ್ಯಾ

**ಬೆಂಗಳೂರು:** ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಕರ್ನಾಟಕದ 14 ಕ್ಷೇತ್ರದಲ್ಲಿ ಮೊದಲ ಹಂತದ ಚುನಾವಣೆ ರಂಗೇರಿದೆ.ಸ್ಯಾಂಡಲ್‌ವುಡ್‌ನ ಹಲವು ನಟ-ನಟಿಯರು ಬಂದು ಮತದಾನ ಮಾಡಿ ಮಾದರಿಯಾಗಿದ್ದಾರೆ. ಇದೀಗ ನಟಿರಮ್ಯಾ ಮತದಾನ ಮಾಡದೇ ಇರುವುದು ನೆಟ್ಟಿಗರಿಂದ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ನಟಿರಮ್ಯಾ ಈ ಬಾರಿಯಾದ್ರೂ ವೋಟ್ ಮಾಡ್ತಾರೆಎಂದು ಮಂಡ್ಯದಲ್ಲಿ ಅಭಿಮಾನಿಗಳು ಕಾಯುತ್ತಾಇದ್ದರು. ಆದರೆ ಅಭಿಮಾನಿಗಳ ನಿರೀಕ್ಷೆಯನ್ನು ನಟಿ ಸುಳ್ಳು ಮಾಡಿದ್ದಾರೆ. ಮತದಾನದಲ್ಲಿ ನಟಿ ಭಾಗವಹಿಸಿಲ್ಲ. ವೋಟ್ ಮಾಡಿಲ್ಲಯಾಕೆ ಎಂಬ ಪ್ರಶ್ನೆ ಈಗ ಅಭಿಮಾನಿಗಳಲ್ಲಿ ಮೂಡಿದೆ.

2019ರ ಲೋಕಸಭೆ ಹಾಗೂ 2023ರ ವಿಧಾನಸಭೆ ಚುನಾವಣೆಯಲ್ಲಿ ನಟಿ ರಮ್ಯಾತಮ್ಮ



ಹಕ್ಕು ಚಲಾಯಿಸಿಲ್ಲ. ಈ ಬಾರಿಯೂಕೂಡ ನಟಿ ಮತದಾನದಲ್ಲಿ ಭಾಗವಹಿಸಿಲ್ಲ. ಈ ಬಾರಿ ಸ್ಯಾಂಡಲ್ ವುಡ್‌ನಲ್ಲಿ ಬಹುತೇಕ ನಟ-ನಟಿಯರು ವೋಟ್ ಮಾಡುವ ಮೂಲಕ ಅಭಿಮಾನಿಗಳಿಗೆ ಮತದಾನ ಮಾಡುವಂತೆ ಸಂದೇಶ ನೀಡಿದ್ದರು.

# ನಕಲಿ ಮತದಾನ ನಡೆದಿಲ್ಲ: ಉಡುಪಿ ಡಿ.ಸಿ ಸ್ಪಷ್ಟನೆ

**ಉಡುಪಿ:** ಇಲ್ಲಿನ ರಾಜೀವ ನಗರದಲ್ಲಿ ನಕಲಿ ಮತದಾನಗೊಂದಲದ ವಿಚಾರಕ್ಕೆ ಸಂಬಂಧಿಸಿದಂತೆ ಉಡುಪಿ ಡಿ.ಸಿ.ಡಾ.ವಿದ್ಯಾಕುಮಾರಿ ಸ್ಪಷ್ಟನೆ ನೀಡಿದ್ದು, ನಕಲಿ ಮತದಾನ ನಡೆದಿಲ್ಲ ಎಂದು ತಿಳಿಸಿದ್ದಾರೆ.



ರಾಜೀವ ನಗರದಲ್ಲಿ ಯಾವುದೇ ನಕಲಿ ಮತದಾನ ನಡೆದಿಲ್ಲ. ಮಣಿಪಾಲದ ಅರ್ಬಿ ನಿವಾಸಿ ಕೃಷ್ಣ ನಾಯ್ಕ್ ಹೆಸರಲ್ಲಿ ಮತದಾನ ನಡೆದಿದ್ದು, ಒಂದೇ ಹೆಸರಿನ ಇಬ್ಬರು ಇರೋದರಿಂದ ಗೊಂದಲ ಉಂಟಾಗಿದೆ.ಒಂದೇ ಮತಗಟ್ಟೆಯಲ್ಲಿಕೃಷ್ಣ ನಾಯ್ಕ ಹೆಸರಿನಇಬ್ಬರು ಮತದಾರರುಇದ್ದಕಾರಣ ವೋಟರ್ ಸ್ಲಿಪ್ ಅದಲು ಬದಲಾಗಿಗೊಂದಲ ಉಂಟಾಗಿದೆ ಎಂದರು.

**ನಡೆದಿದ್ದು ಏನು?:** ಮತಚಲಾಯಿಸಲೆಂದು ಮಣಿಪಾಲದ ಅರ್ಬಿ ನಿವಾಸಿ ಕೃಷ್ಣ ನಾಯ್ಕ್ ಮತಗಟ್ಟೆಗೆ ಆಗಮಿಸಿದ ವೇಳೆ ತನ್ನ ಹೆಸರಲ್ಲಿ ಬೇರೊಬ್ಬರು ಮತ ಚಲಾಯಿಸಿರುವುದು ಪತ್ತೆಯಾಗಿದೆ. ಈ ಹಿನ್ನೆಲೆ ಎರಡೂ ಪಕ್ಷಗಳ ಮತಗಟ್ಟೆ ಏಜೆಂಟ್ ಗಳಿಂದ ವಿರೋಧ ವ್ಯಕ್ತವಾಗಿದ್ದು, ಮತಗಟ್ಟೆ ಅಧಿಕಾರಿಗಳನ್ನು ಬೂತ್ ಏಜೆಂಟ್‌ಗಳು ತರಾಟೆಗೆ ತೆಗೆದುಕೊಂಡಿದ್ದಾರೆ. ಮಣಿಪಾಲದ ರಾಜೀವ ನಗರ ಮತಗಟ್ಟೆಯಲ್ಲಿ ಘಟನೆ ನಡೆದಿದ್ದು, ನಕಲಿ ಮತದಾನ ಮಾಡಿದವರನ್ನು ಪತ್ತೆ ಹಚ್ಚುವಂತೆ ಒತ್ತಾಯಿಸಲಾಗಿತ್ತು.

# ಬೆಳ್ತಂಗಡಿಯ ಬಾಂಜಾರು ಮಲೆಯಲ್ಲಿ 100% ಮತದಾನ

**ಮಂಗಳೂರು:** ಲೋಕಸಭಾ ಚುನಾವಣೆಯ ಮೊದಲ ಹಂತದ ಮತದಾನ ಇಂದು ಸಂಜೆ 6 ಗಂಟೆಗೆ ಮುಕ್ತಾಯವಾಗಿದೆ.ರಾಜ್ಯದ 14 ಕ್ಷೇತ್ರಗಳಲ್ಲಿ ಬಹುತೇಕವಾಗಿ ಶಾಂತಿಯುತ ಮತದಾನ ನಡೆದಿದೆ. ಈ ನಡುವೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಕುಗ್ರಾಮವೊಂದು ಎಲ್ಲರ ಗಮನಸೆಳೆದಿದೆ.

ಹೌದು. ದಕ್ಷಿಣಕನ್ನಡದ ಬೆಳ್ತಂಗಡಿ ತಾಲೂಕಿನ ಬಾಂಜಾರು ಮಲೆ ಗ್ರಾಮದ ಮತದಾರರು ಹಕ್ಕು ಚಲಾಯಿಸಲು ಹಿಂದೇಟು ಹಾಕಿದವರಿಗೆ ಸೆಡ್ಡು ಹೊಡೆದಿದ್ದಾರೆ. ಈ ಗ್ರಾಮದಲ್ಲಿ ನೂರಕ್ಕೆ ನೂರು ಮತದಾನವಾಗಿದೆ. ಗ್ರಾಮದಲ್ಲಿರುವ 111 ಮತದಾರರು ಕೂಡ ಮತದಾನ ಮಾಡುವ ಮೂಲಕ ದಾಖಲೆ ಬರೆದಿದ್ದಾರೆ.

ಒಟ್ಟಾರೆಯಾಗಿ ಕುಗ್ರಾಮವಾದರೂ ತಮ್ಮ ಹಕ್ಕು ಚಲಾಯಿಸುವಲ್ಲಿ ಮಾತ್ರ ಗ್ರಾಮಸ್ಥರು



ಎಲ್ಲರಿಗೂ ಮಾದರಿಯಾಗಿದ್ದಾರೆ. ಸಂಜೆ 5 ಗಂಟೆಯ ವೇಳೆಗೆ ದಕ್ಷಿಣಕನ್ನಡದಲ್ಲಿ 71.83% ರಷ್ಟು ಮತದಾನವಾಗಿದೆ. ದಕ್ಷಿಣ ಕನ್ನಡದಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ಬ್ರಿಜೇಶ್ ಚೌಟಾ ಹಾಗೂ ಕಾಂಗ್ರೆಸ್‌ನಿಂದ ಪದ್ಮರಾಜ್ ರಾಮಯ್ಯಚುನಾವಣಾ ಅಖಾಡದಲ್ಲಿದ್ದಾರೆ.

# ದ್ವೇಷದ ವಿರುದ್ಧ ಮತ ಹಾಕಿದ್ದೇನೆ

**ಬೆಂಗಳೂರು:** ಬಹುಭಾಷಾ ನಟ ಪ್ರಕಾಶ್‌ರೈಇಂದು ಬೆಳಗ್ಗೆ ಮತದಾನ ಮಾಡಿ, ತಾವು ಮತದಾನ ಮಾಡಿರುವ ಕುರಿತಂತೆ ವಿಡಿಯೋವೊಂದನ್ನು ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದರು. ಆ ವಿಡಿಯೋವನ್ನು ಅನೇಕರು ಹಂಚಿಕೊಂಡಿದ್ದಾರೆ. ಕೆಲವರು ನೆಗೆಟಿವ್‌ಕಾಮೆಂಟ್ ಮಾಡಿದರೆ, ಇನ್ನೂ ಕೆಲವರು ನಿಮ್ಮ ಮಾತನ್ನು ಅನುಮೋದಿಸುತ್ತೇವೆಎಂದಿದ್ದಾರೆ.

ವೋಟು ಹಾಕಿದ ನಂತರ ಪೋಸ್ಟ್ ಮಾಡಿದ ವಿಡಿಯೋದಲ್ಲಿ ದೇಶದ ಬದಲಾವಣೆಗಾಗಿ ಮತದಾನ ಮಾಡಿರುವೆ, ದ್ವೇಷದ ವಿರುದ್ಧ ಮತ ಹಾಕಿರುವೆ. ಸಂಸತ್ ನಲ್ಲಿ ನನ್ನ ಪರವಾಗಿ ಧ್ವನಿ ಕೇಳಲಿ ಎಂದು ವೋಟು ಮಾಡಿದ್ದೇನೆ. ದಯಮಾಡಿ ವೋಡು ಮಾಡಿ, ಬದಲಾವಣೆಗೆ ಮತ ಹಾಕಿ ಎಂದು ಮಸೇಜ್ ನೀಡಿದ್ದರು.



## ಮಣಿಪುರದಲ್ಲಿ ಉಗ್ರರಿಂದ ಬಾಂಬ್ ದಾಳಿ

# ಇಬ್ಬರು ಯೋಧರು ಹುತಾತ್ಮ



**ಇಂಫಾಲ:** ಮಣಿಪುರದ ಬಿಷ್ಣುಪುರ್ ಜಿಲ್ಲೆಯಲ್ಲಿ ಶಂಕಿತ ಉಗ್ರರು ನಡೆಸಿದ ಬಾಂಬ್ ದಾಳಿಯಲ್ಲಿ ಇಬ್ಬರು ಸಿಆರ್‌ಪಿಎಫ್ ಯೋಧರು ಸಾವನ್ನಪ್ಪಿದ್ದು, ಮೂವರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ.

ಉಗ್ರರ ದಾಳಿಯಲ್ಲಿ ಮೃತಪಟ್ಟವರು ಕೇಂದ್ರೀಯ ಮೀಸಲು ಪೊಲೀಸ್ ಪಡೆ 128 ಬೆಟಾಲಿಯನ್‌ಗೆ ಸೇರಿದವರಾಗಿದ್ದಾರೆ.ಅವರನ್ನು ಸಿಆರ್‌ಪಿಎಫ್ ಸಬ್ ಇನ್ಸ್‌ಪೆಕ್ಟರ್ ಎನ್.ಸರ್ಕಾರ್ ಮತ್ತು ಹೆಡ್ ಕಾನ್ಸ್‌ಟೇಬಲ್ ಅರುಪ್ ಸೈನಿ ಎಂದು ಗುರುತಿಸಲಾಗಿದೆ.ಗಾಯಗೊಂಡವರನ್ನು ಇನ್ಸ್‌ಪೆಕ್ಟರ್ ಜಾದವ್ ದಾಸ್ ಮತ್ತು ಕಾನ್ಸ್‌ಟೇಬಲ್ ಅಫ್ತಾಬ್ ದಾಸ್ ಎಂದು ಗುರುತಿಸಲಾಗಿದೆ.

ಉಗ್ರರ ಗುಂಪು ನರನ್‌ಸೇನಾ ಗ್ರಾಮದ ಬೆಟ್ಟದಿಂದ ಕಣಿವೆ ಪ್ರದೇಶದ ಕಡೆಗೆ ಕೇಂದ್ರ ಭದ್ರತಾ ಪಡೆಯ ಔಟ್‌ಪೋಸ್ಟ್ ಗುರಿಯಾಗಿಸಿಕೊಂಡು ಗುಂಡಿನ ದಾಳಿ ನಡೆಸಿದೆ.ಈ ವೇಳೆ ಉಗ್ರರು ಔಟ್ ಪೋಸ್ಟ್ ಮೇಲೆ ಬಾಂಬ್ ಎಸೆದಿದ್ದಾರೆ.ಬಾಂಬ್ ಸ್ಫೋಟಗೊಂಡ ಬಳಿಕ ಗುಂಡಿನ ಚಕಮಕಿ ತೀವ್ರಗೊಂಡಿದೆ.ಈ ವೇಳೆ ಇಬ್ಬರು ಭದ್ರತಾ ಸಿಬ್ಬಂದಿ ಮೃತಪಟ್ಟಿದ್ದು, ಇಬ್ಬರಿಗೆ ತೀವ್ರ ಗಾಯಗಳಾಗಿವೆ. ಗಾಯಗೊಂಡ ಯೋಧರಿಗೆ ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಧ್ಯರಾತ್ರಿ 12:30ರ ಸುಮಾರಿಗೆ ಉಗ್ರರು ಗುಂಡಿನ ದಾಳಿ ಆರಂಭಿಸಿದ್ದು 2:15ರ ದಾಳಿ ಮುಂದುವರಿಯಿತು. ದಾಳಿಕೋರರನ್ನು ಪತ್ತೆಹಚ್ಚಲು ಕೂಂಬಿಂಗ್ ಕಾರ್ಯಾಚರಣೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಕೋಲ್ಕತ್ತಾ ಸೇರಿ ದೇಶದ 4 ವಿಮಾನ ನಿಲ್ದಾಣಗಳಿಗೆ ಬಾಂಬ್ ಬೆದರಿಕೆ

**ನವದೆಹಲಿ:** ಕೋಲ್ಕತ್ತಾ ಸೇರಿ ದೇಶದ ಪ್ರಮುಖ ನಾಲ್ಕು ವಿಮಾನ ನಿಲ್ದಾಣಗಳಲ್ಲಿ ಬಾಂಬ್ ಸ್ಫೋಟಿಸುವ ಬೆದರಿಕೆ ಹಾಕಲಾಗಿದ್ದು, ಎಲ್ಲೆಡೆ ಗೊಂದಲದ ವಾತಾವರಣ ನಿರ್ಮಾಣ ಆಗಿದೆ.

ವಿಮಾನ ನಿಲ್ದಾಣದ ಅಧಿಕಾರಿಗಳಿಗೆ ಏಪ್ರಿಲ್ 26 ರಂದು ಇಮೇಲ್ ಬಂದಿದ್ದು, ಅದರಲ್ಲಿ ಸಂಕೀರ್ಣದ ವಿವಿಧ ಸ್ಥಳಗಳಲ್ಲಿ ಬಾಂಬ್‌ಗಳನ್ನು ಇರಿಸಲಾಗಿದೆ ಎಂದು ಹೇಳಲಾಗಿದೆ.ಇಮೇಲ್ ಸ್ವೀಕರಿಸಿದ ನಂತರ ವಿಮಾನ ನಿಲ್ದಾಣದಲ್ಲಿ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

**ಇಮೇಲ್‌ನಲ್ಲೆ ಏನಿದೆ?:** ವಿಮಾನ ನಿಲ್ದಾಣದ ಮೂಲಗಳ ಪ್ರಕಾರ, ಮೇಲ್ ಕಳುಹಿಸುವವರ ತಂಡವು ರಾಮೇಶ್ವರಂ ಕೆಫೆಯಲ್ಲಿ ಇಟ್ಟಿದ್ದ ಬಾಂಬ್‌ಗಿಂತಲೂ ಕೋಲ್ಕತ್ತಾ ವಿಮಾನ ನಿಲ್ದಾಣದಲ್ಲಿ ಇರಿಸಲಾದ ಬಾಂಬ್ ದೊಡ್ಡದಾಗಿದೆ.ಒಟ್ಟು ನಾಲ್ಕು ವಿಮಾನ ನಿಲ್ದಾಣಗಳಲ್ಲಿ ಬಾಂಬ್‌ಗಳನ್ನು ಇಡಲಾಗಿದೆ. ಅಲ್ಲದೇ ಈ ಎಲ್ಲಾ ಬಾಂಬ್‌ಗಳು ಮಧ್ಯಾಹ್ನ



12.55 ಕ್ಕೆ ಸ್ಫೋಟಗೊಳ್ಳುತ್ತವೆ ಎಂದು ಮೇಲ್ ನಲ್ಲಿ ತಿಳಿಸಲಾಗಿದೆ.

ಹುಸಿ ಬೆದರಿಕೆ: ಶುಕ್ರವಾರ ಬೆಳಗ್ಗೆ 11.40ರ ಸುಮಾರಿಗೆ ಕೋಲ್ಕತ್ತಾ ವಿಮಾನ ನಿಲ್ದಾಣದ ವ್ಯವಸ್ಥಾಪಕರಿಗೆ ಈ ಮೇಲ್ ಬಂದಿದೆ. ಸದ್ಯ ಮಧ್ಯಾಹ್ನ 12.55ಕ್ಕೆ ಬಾಂಬ್ ಸ್ಫೋಟದ ಬೆದರಿಕೆ ಇರುವ ಇಮೇಲ್ ಸುಳ್ಳು.ಅಲ್ಲದೇ ಇಮೇಲ್‌ನ ಮೂಲವನ್ನು ಹುಡುಕುತ್ತಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# 4.8 ಕೋಟಿ ಜಪ್ತಿ

ರಂದು ದಾಳಿ ಮಾಡಿದ್ದರು. 10 ಜನ ಐಟಿ ಅಧಿಕಾರಿಗಳು ಮನೆಯ ಇಂಚಿಂಚು ಪರಿಶೀಲನೆ ಮಾಡಿದ್ದರು. ಈ ವೇಳೆ ಕೋಟ್ಯಾಂತರ ರೂಪಾಯಿ ನಗದು ಹಣ ಹಾಗೂ ಚಿನ್ನಾಭರಣೆ ಪತ್ತೆಯಾಗಿತ್ತು. ಕೂಡಲೇ ಐಟಿ ಸಿಬ್ಬಂದಿ ಹಣ ಎಣಿಕೆ ಮೆಷಿನ್ ಹಾಗೂ ಚಿನ್ನಭರಣ ತೂಕದ ಮೆಷಿನ್ ತಗೆದುಕೊಂಡು ಬಂದು ಎಣಿಕೆ ಮಾಡಿದ್ದು, ಮನೆಯಲ್ಲಿ ದಾಖಲೆ ಇಲ್ಲದೆ ಪತ್ತೆಯಾದ ಬರೋಬ್ಬರಿ 4 ಕೋಟಿ 80ಲಕ್ಷ ರೂ. ಹಣ ವಶಕ್ಕೆ ಪಡೆದುಕೊಂಡಿದ್ದರು. ಈ ಹಣವನ್ನು ಚುನಾವಣೆ ಸಂದರ್ಭದಲ್ಲಿ ಮತದಾರರಿಗೆ ಹಂಚಲೆಂದು ಸಂಗ್ರಹಿಸಲಾಗಿತ್ತು ಎನ್ನಲಾಗಿದೆ.

# ಸಿದ್ದರಾಮಯ್ಯ ಎಂಟ್ರಿ

ಬೆಳಗಾವಿ ಕಳೆದ ಎರಡು ದಶಕಗಳಿಂದ ಬಿಜೆಪಿ ಭದ್ರಕೋಟೆಯಾಗಿದೆ. ಇನ್ನು ಚಿಕ್ಕೋಡಿ ಲೋಕಸಭೆ ಕ್ಷೇತ್ರದಲ್ಲೂ ಬಿಜೆಪಿ ತನ್ನದೆಯಾದ ಪ್ರಭಾವ ಹೊಂದಿದೆ. ಹೀಗಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಈ ಬಾರಿ ಬೆಳಗಾವಿ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲಿಸಲು ಪಣ ತೊಟ್ಟಿದ್ದಾರೆ. ಈ ಸಂಬಂಧ ಲಕ್ಷ್ಮೀ ಹೆಬ್ಬಾಳ್ಕರ್ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಕಣಕ್ಕಿಳಿಸಿ, ಬಿಜೆಪಿ ಅಭ್ಯರ್ಥಿ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರನ್ನು ಮಣಿಸಲು ರಣತಂತ್ರ ರೂಪಿಸಿದ್ದಾರೆ.

**ರಾಜ್ಯದಲ್ಲಿ ಮೋದಿ ಪ್ರವಾಸ:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು (ಏ.27) ರಾತ್ರಿ 8.50ಕ್ಕೆ ಬೆಳಗಾವಿ ವಿಮಾನ ನಿಲ್ದಾಣಕ್ಕೆ ಆಗಮಿಸಲಿದ್ದು, ನಗರದ ಐಟಿಸಿ ಹೋಟೆಲ್ ನಲ್ಲಿ ವಾಸ್ತವ್ಯ ಹೂಡಲಿದ್ದಾರೆ. ನಾಳೆ (ಏ.28) ಬೆಳಿಗ್ಗೆ 10.55ಕ್ಕೆ ಹೋಟೆಲ್ ನಿಂದ ಹೊರಡುವ ಪ್ರಧಾನಿ ಮೋದಿ, 11 ಗಂಟೆಗೆ ಮಾಲಿನಿ ಸಿಟಿ ಮೈದಾನದಲ್ಲಿ ನಡೆಯುವ ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ. ಬಳಿಕ 11.55 ಬೆಳಗಾವಿಯಿಂದ ಶಿರಸಿಗೆ ಪ್ರಯಾಣ ಬೆಳಸಲಿದ್ದಾರೆ.

ಮಧ್ಯಾಹ್ನ 12.55ಕ್ಕೆ ಉತ್ತರ ಕನ್ನಡ ಜಿಲ್ಲೆ ಶಿರಸಿಗೆ ಆಗಮಿಸುವ ಮೋದಿ, 1 ಗಂಟೆಗೆ ಶಿರಸಿ ಸಮಾವೇಶದಲ್ಲಿ ಭಾಗಿಯಾಗುತ್ತಾರೆ. 2 ಗಂಟೆಗೆ ಶಿರಸಿಯಿಂದ ಹೊರಟು 2.50ಕ್ಕೆ ದಾವಣಗೆರೆಗೆ ತಲುಪಲಿದ್ದಾರೆ. ಮಧ್ಯಾಹ್ನ 3 ಗಂಟೆಗೆ ದಾವಣಗೆರೆ ಸಮಾವೇಶದಲ್ಲಿ ಪಾಲ್ಗೊಳ್ಳುತ್ತಾರೆ. ನಂತರ 4.05ಕ್ಕೆ ದಾವಣಗೆರೆಯಿಂದ ಹೊಸಪೇಟೆ ಕಡೆಗೆ ಹೊರಡುವ ಪ್ರಧಾನಿ ಮೋದಿ, ಸಂಜೆ 4.50ಕ್ಕೆ ಹೊಸಪೇಟೆ ತಲುಪಲಿದ್ದಾರೆ. 5 ಗಂಟೆಗೆ ಹೊಸಪೇಟೆ ಸಮಾವೇಶದಲ್ಲಿ ಭಾಗಿಯಾಗಿ, 6 ಗಂಟೆಗೆ ಹೊಸಪೇಟೆ ಹೋಟೆಲ್ ಗೆ ಆಗಮಿಸಿ, ಅಲ್ಲೇ ವಾಸ್ತವ್ಯ ಹೂಡಲಿದ್ದಾರೆ.

ಏಪ್ರಿಲ್ 29ರ ಬೆಳಗ್ಗೆ 11 ಗಂಟೆಗೆ ಹೊಸಪೇಟೆಯಿಂದ ಮೋದಿ ನಿರ್ಗಮಿಸಿ, ಮಧ್ಯಾಹ್ನ 12.15ಕ್ಕೆ ಬಾಗಲಕೋಟೆಯ ತೋಟಗಾರಿಕೆ ವಿಶ್ವವಿದ್ಯಾಲಯ ಮೈದಾನದಲ್ಲಿ ನಡೆಯಲಿರುವ ಬಹಿರಂಗ ಸಮಾವೇಶದಲ್ಲಿ ಭಾಗಿಯಾಗುತ್ತಾರೆ. ಮಧ್ಯಾಹ್ನ 1.05ಕ್ಕೆ ಬಾಗಲಕೋಟೆಯಿಂದ ಸೊಲ್ಲಾಪುರಕ್ಕೆ ಪ್ರಯಾಣ ಬೆಳಸಲಿದ್ದಾರೆ.

**ಡ್ರೋನ್ ಹಾರಾಟಕ್ಕೆ ನಿಷೇಧ:** ಬೆಳಗಾವಿಗೆ ಪ್ರಧಾನಿ ಮೋದಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಭದ್ರತೆ ದೃಷ್ಟಿಯಿಂದ ಇಂದು (ಏ.27) ರ ಮುಂಜಾನೆ 6 ಗಂಟೆಯಿಂದ ನಾಳೆ (28)ರ ಸಂಜೆ 6 ಗಂಟೆಯವರಗೆ ಡ್ರೋನ್ ಹಾರಾಟಕ್ಕೆ ನಿಷೇಧ ಹೇರಿ ಜಿಲ್ಲಾಧಿಕಾರಿ ನಿತೇಶ ಪಾಟೀಲ್ ಆದೇಶ ಹೊರಡಿಸಿದ್ದಾರೆ. ಬೆಳಗಾವಿ ತಾಲೂಕಿನ ವ್ಯಾಪ್ತಿಯನ್ನು ರೆಡ್ ಜೋನ್ ಎಂದು ಘೋಷಿಸಿದೆ.

# 2,172 ಪ್ರಕರಣ ದಾಖಲು

ಮೈಸೂರಿನ ಕಾಳಿದಾಸನಹುಂಡಿ ಚೆಕ್ ಪೋಸ್ಟ್‌ನಲ್ಲಿ 81.90 ಲಕ್ಷ, ಬೆಂಗಳೂರಿನ ರಾಯನ್ ಸರ್ಕಲ್ ಚೆಕ್ ಪೋಸ್ಟ್ ನಲ್ಲಿ 20 ಲಕ್ಷ, ಉಡುಪಿ ಜಿಲ್ಲೆ ಕುಂದಾಪುರದಲ್ಲಿ 43.34 ಲಕ್ಷ ರೂಪಾಯಿ ಜಪ್ತಿ ಮಾಡಲಾಗಿದೆ.

ರಾಜ್ಯದ ಮೊದಲ ಹಂತದಲ್ಲಿ 14 ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಿತು. ಘಟಾನುಘಟಿ ನಾಯಕರು ಸೇರಿದಂತೆ 247 ಅಭ್ಯರ್ಥಿಗಳ ರಾಜಕೀಯ ಭವಿಷ್ಯ ಮತಪೆಟ್ಟಿಗೆ ಸೇರಿದೆ. ಮೊದಲ ಹಂತದ ಮತದಾನದಲ್ಲಿ ಶೇ 69 ರಷ್ಟು ಮತದಾನವಾಗಿದೆ. ಎರಡನೇ ಹಂತದ ಮತದಾನ ಮೇ 7 ರಂದು ನಡೆಯಲಿದೆ.

ಬೆಂಗಳೂರಿನ ಸದ್ದಗುಂಟೆಪಾಳ್ಯದ ಮತಗಟ್ಟೆ ಸಂಖ್ಯೆ 91, 92, 93, 94 ಬಳಿ ನೀತಿ ಸಂಹಿತೆ ಉಲ್ಲಂಘಿಸಿದ್ದ ಬಿಜೆಪಿ ಹಾಗೂ

## ಮೊದಲನೇ ಪುಟದಿಂದ...

ಕಾಂಗ್ರೆಸ್ ಕಾರ್ಯಕರ್ತರ ವಿರುದ್ಧ ಬಿಬಿಎಂಪಿ ಅಧಿಕಾರಿ ಶ್ರೀನಿವಾಸ್ ಹಾಗೂ ಪೊಲೀಸ್ ಸಿಬ್ಬಂದಿ ಚಂದ್ರಶೇಖರ್ ನೀಡಿದ ದೂರಿನನ್ವಯ ಎನ್ ಸಿಆರ್ ದಾಖಲಾಗಿದೆ. ಮತದಾರರ ಮೇಲೆ ಪ್ರಭಾವ ಬೀರಿರುವ ಆರೋಪ ಮತ್ತು ನಿಷೇಧಾಜ್ಞೆ ನಡುವೆಯೂ ಉಭಯ ಪಕ್ಷದ ಕಾರ್ಯಕರ್ತರ ನಡುವೆ ಜಗಳವಾಗಿತ್ತು. ಈ ಹಿನ್ನೆಲೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಿಜೆಪಿಯ ನಿಲುವು ಅಚಲ

ಧರ್ಮದ ಆಧಾರದ ಮೇಲೆ ಮೀಸಲಾತಿಗೆ ಸಂವಿಧಾನದಲ್ಲಿ ಅವಕಾಶವಿಲ್ಲ. ಈ ನಿಬಂಧನೆಯ ಹೊರತಾಗಿಯೂ, ಸುಮಾರು 24 ಮುಸ್ಲಿಂ ಸಮುದಾಯಗಳನ್ನು 20 ಕೋಟಾ ವರ್ಗಕ್ಕೆ ಸೇರಿಸಲಾಗಿತ್ತು. ಧರ್ಮಾಧಾರಿತ ಮೀಸಲಾತಿ ಕುರಿತ ಆಂಧ್ರಪ್ರದೇಶ ಸರ್ಕಾರದ ನಿರ್ಧಾರವನ್ನು ಸುಪ್ರೀಂ ಕೋರ್ಟ್ ತಳ್ಳಿಹಾಕಿದೆ. ಆಡಳಿತಾರೂಢ ಕಾಂಗ್ರೆಸ್ ಈಗ ಸಂದಿಗ್ಧ ಪರಿಸ್ಥಿತಿಯಲ್ಲಿದ್ದು, ಎಂದಿನಂತೆ ಬಿಜೆಪಿ ಮೇಲೆ ಗೂಬೆ ಕೂರಿಸಲು ಯತ್ನಿಸುತ್ತಿದೆ ಎಂದು ಬೊಮ್ಮಾಯಿ ಆರೋಪಿಸಿದ್ದಾರೆ.

# ಉಚ್ಚಾಟಿಸಿದ ಕಾಂಗ್ರೆಸ್

ಕುಂಭಾಣಿ ಮನೆ ಮುಂದೆ ಕಾಂಗ್ರೆಸ್ ಮುಖಂಡರು ಪ್ರತಿಭಟನೆ ನಡೆಸುತ್ತಿದ್ದಾರೆ. ನೀಲೇಶ್ ಅವರು ಬಿಜೆಪಿಯವರ ಒತ್ತಾಯಕ್ಕೆ ಮಣಿದು ಬಿಜೆಪಿಯಿಂದ ಕೋಟ್ಯಂತರ ರೂಪಾಯಿ ಕಬಳಿಸಿದ್ದಾರೆ ಎಂದು ಕಾಂಗ್ರೆಸ್ ನಾಯಕರು ಆರೋಪ ಮಾಡುತ್ತಿದ್ದಾರೆ. ನೀಲೇಶ್ ಯಾವಾಗ ಬೇಕಾದರೂ ಬಿಜೆಪಿ ಸೇರಬಹುದು ಎಂದು ಹೇಳಲಾಗುತ್ತಿದೆ.

# ಪುನರ್ ನಿರ್ಮಾಣ

ಈ ದೇವಾಲಯವು ಶ್ರೀನಗರದಿಂದ ಸುಮಾರು 63 ಕಿಲೋಮೀಟರ್ ದೂರದಲ್ಲಿದೆ. ಈ ದೇವಾಲಯವನ್ನು ಕ್ರಿ.ಶ.750 ರಲ್ಲಿ ರಾಜ ಲಾಲಿದಾದಿತ್ಯ ನಿರ್ಮಿಸಿದ್ದ, ಇದು ದೇಶದ ಹಳೆಯ ಪರಂಪರೆಗಳಲ್ಲಿ ಇದೂ ಒಂದಾಗಿದ್ದು, ಇದೀಗ ಇದನ್ನು ಪುನರ್ ನಿರ್ಮಾಣ ಮಾಡಲಾಗುತ್ತಿದೆ.

**ದೇವಾಲಯವನ್ನು ಯಾವ ಶೈಲಿಯಲ್ಲಿ ನಿರ್ಮಿಸಲಾಗಿದೆ:** ಈ ಸೂರ್ಯ ದೇವಾಲಯವು ಕಾಶ್ಮೀರಿ ವಾಸ್ತುಶಿಲ್ಪದ ಸೌಂದರ್ಯವನ್ನು ಒಳಗೊಂಡಿದೆ. ಈ ದೇವಾಲಯದ ನಿರ್ಮಾಣದಲ್ಲಿ ಕಂಧಾರ, ಚೈನೀಸ್ ಮತ್ತು ಗುಪ್ತ ರೋಮನ್ ಶೈಲಿಗಳನ್ನು ಬಳಸಲಾಗಿದೆ. ದೇವಾಲಯವು 270 ಅಡಿ ವಿಸ್ತೀರ್ಣವನ್ನು ಹೊಂದಿದ್ದು, ಅಗಲ 180 ಅಡಿ ಇದೆ. ಇದರ ಜತೆಗೆ ಇನ್ನು ಆಶ್ಚರ್ಯಕರ ಸಂಗತಿಯೆಂದರೆ, ಮಾರ್ತಾಂಡ ದೇವಾಲಯವು ಎಎಸ್‌ಐ ಸಂರಕ್ಷಿತ ತಾಣಗಳಲ್ಲಿ ಒಂದಾಗಿದೆ. ಆದರೆ ಇಲ್ಲಿ ಸೂರ್ಯನಿಗೆ ಇಂದು ಪೂಜೆ ನಡೆಯುತ್ತಿಲ್ಲ ಎಂದು ಸಮಿತಿ ಹೇಳಿದೆ. ಗುಜರಾತ್ ಮತ್ತು ಒಡಿಶಾದಲ್ಲೂ ಸೂರ್ಯ ದೇವಾಲಯಗಳು ಸಹ ಎಎಸ್‌ಐ ಸಂರಕ್ಷಿತ ದೇವಾಲಯಗಳಾಗಿವೆ ಹಾಗೂ ಇಲ್ಲಿನ ಸೂರ್ಯ ದೇವಾಲಯಗಳಲ್ಲಿ ಪೂಜೆ ಮಾಡಲಾಗುತ್ತದೆ.

**ಅಲೆಕ್ಸಾಂಡರ್ ಮಾರ್ತಾಂಡ ದೇವಾಲಯವನ್ನು ಕೆಡವಿದ್ದ:** ಅಲೆಕ್ಸಾಂಡರ್ 15ನೇ ಶತಮಾನದಲ್ಲಿ ಭಾರತದ 1600 ವರ್ಷಗಳಷ್ಟು ಹಳೆಯ ಸಂಪತ್ತನ್ನು ಸಂಪೂರ್ಣವಾಗಿ ನಾಶ ಮಾಡಲು ಮುಂದಾಗಿದ್ದ, ಇದರಲ್ಲಿ ಜಮ್ಮು ಕಾಶ್ಮೀರದಲ್ಲಿರು ಈ ಸೂರ್ಯದೇವಾಲವು ಒಂದಾಗಿತ್ತು. ಆದರೆ ಇದನ್ನು ನಾಶಮಾಡಲು ಬಹಳ ಕಷ್ಟಪಟ್ಟಿದ್ದ, ಇದನ್ನು ಕೆಡವಲು ಸುಮಾರು ಎರಡು ವರ್ಷಗಳ ಕಾಲ ಪ್ರಯತ್ನ ಪಟ್ಟಿದ್ದ, ಕೊನೆಗೂ ಇದನ್ನು ಕೆಡವಿದ್ದಾನೆ. ಆದರೆ 500 ವರ್ಷಗಳ ನಂತರವೂ ಈ ದೇವಾಲಯದ ಕೆತ್ತನೆಗಳು ಮತ್ತು ವಿಭಿನ್ನ ಶೈಲಿಗಳ ಸೌಂದರ್ಯವು ಗೋಚರಿಸುತ್ತದೆ.

# ಮಾರಾಮಾರಿ

ಮತಗಟ್ಟೆ ಸಂಖ್ಯೆ 249ರಲ್ಲಿ ಕಾಂಗ್ರೆಸ್ ಹಾಗೂ ಜೆಡಿಎಸ್ ಕಾರ್ಯಕರ್ತರು ಪರಸ್ಪರ ಬಡಿದಾಡಿಕೊಂಡಿದ್ದಾರೆ.ಘಟನೆಯಲ್ಲಿ ಓರ್ವನ ಸ್ಥಿತಿ ಗಂಭೀರವಾಗಿದ್ದು, ಹಾಸನದ ಖಾಸಗಿ ಆಸ್ಪತ್ರಗೆ ದಾಖಲಿಸಿ, ಚಿಕಿತ್ಸೆ ಕೊಡಿಸಲಾಗುತ್ತಿದೆ.

ಮತಗಟ್ಟೆ ಸಂಖ್ಯೆ 249ಕ್ಕೆ ಭೇಟಿ ಹಾಸನ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್ ಅವರ ತಾಯಿ ಅನುಪಮಾ ಮಹೇಶ್ ಭೇಟಿ ನೀಡಿದ್ದರು.ಈ ವೇಳೆ ಜೆಡಿಎಸ್ ಪರ ಜೆಡಿಎಸ್ ಕಾರ್ಯಕರ್ತರು ಜೈಕಾರ ಕೂಗಿದ್ದಾರೆ.

ಇದರಿಂದ ರೊಚ್ಚಿಗೆದ್ದ ಕಾಂಗ್ರೆಸ್ ಕಾರ್ಯರ್ತರು, ತಮ್ಮ ಪಕ್ಷದ ಅಭ್ಯರ್ಥಿ ಶ್ರೇಯಸ್ ಪಟೇಲ್ ಪರ ಘೋಷಣೆ ಕೂಗಿದ್ರು.ಇದು ವಿಕೋಪಕ್ಕೆ ತಿರುಗಿ ಎರಡು ಪಕ್ಷದವರ ನಡುವೆ ಮಾರಾಮಾರಿ ನಡೆದಿದೆ.

ಇದಾದ ಬಳಿಕ ಗಲಾಟೆ ವಿಕೋಪಕ್ಕೆ ಹೋಗಿದೆ. ಜೆಡಿಎಸ್ ಕಾರ್ಯಕರ್ತರು ಕಬ್ಬಿಣದ ರಾಡ್‌ನಿಂದ ಕಾಂಗ್ರೆಸ್ ಕಾರ್ಯಕರ್ತರ ಮೇಲೆ ಹಲ್ಲೆ ನಡೆಸಿರುವ ಆರೋಪ ಕೇಳಿ ಬಂದಿದೆ. ಮೋಹನ್‌ಕುಮಾರ್, ಗಿರೀಶ್ ಹಾಗೂ ಮಂಜುನಾಥ್ ಎಂಬುವರ ಮೇಲೆ ಹಲ್ಲೆ ನಡೆದಿದೆ ಎನ್ನಲಾಗಿದೆ.

**ಕಾಂಗ್ರೆಸ್ ಕಾರ್ಯಕರ್ತರಿಂದಲೂ ಹಲ್ಲೆ:** ಈ ವೇಳೆ ಕಾಂಗ್ರೆಸ್ ಕಾರ್ಯಕರ್ತ ಮೋಹನ್‌ಕುಮಾರ್ ಎಂಬುವರು ಗಂಭೀರವಾಗಿ ಗಾಯಗೊಂಡಿದ್ದಾರೆ.ಜೆಡಿಎಸ್ ಕಾರ್ಯಕರ್ತರಾದ ಸಾಗರ್ ಹಾಗೂ ಪ್ರದೀಪ್ ಎಂಬುವರ ಮೇಲೆ ಹಲ್ಲೆ ಮಾಡಿರುವ ಆರೋಪ ಕೇಳಿ ಬಂದಿದೆ. ಬಳಿಕ ಕಾಂಗ್ರೆಸ್ ಕಾರ್ಯಕರ್ತರು ಜೆಡಿಎಸ್ ಕಾರ್ಯಕರ್ತರ ಮೇಲೂ ಹಲ್ಲೆ ಮಾಡಿದ್ದಾರೆ ಎನ್ನಲಾಗಿದೆ.ಪ್ರದೀಪ್, ಸಾಗರ್ ಹಾಗೂ ಗೌತಮ್ ಎಂಬುವರ ಮೇಲೆ ಕಾಂಗ್ರೆಸ್ ಕಾರ್ಯಕರ್ತರು ಹಲ್ಲೆ ಮಾಡಿದ್ದಾರೆ ಎನ್ನಲಾಗಿದೆ.

ಸದ್ಯ ಗಾಯಗೊಂಡ ಜೆಡಿಎಸ್ ಕಾರ್ಯಕರ್ತರು ಹಾಸನದ ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದಾರೆ.ಇನ್ನು ಆಸ್ಪತ್ರೆಗೆ ಮೈಸೂರು ದಕ್ಷಿಣ ವಲಯ ಡಿಐಜಿ ಅಮಿತ್ ಸಿಂಗ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಮದ್ ಸುಜೇತಾ ಭೇಟಿ ನೀಡಿ, ಗಾಯಾಳುಗಳಿಂದ ಮಾಹಿತಿ ಪಡೆದಿದ್ದಾರೆ.

# ಭೂಮಿ

17 ಮಂದಿ ಪ್ರಾಣ ಕಳೆದುಕೊಂಡಿದ್ದರು.ಅಂದಿನಿಂದ ತೈವಾನ್ ಭೂಮಿ ನಿರಂತರವಾಗಿ ನಡುಗುತ್ತಿದೆ.ಶನಿವಾರ ಕೂಡ ಇಲ್ಲಿ 30 ನಿಮಿಷಗಳ ಅಂತರದಲ್ಲಿ ಎರಡು ಕಂಪನದ ಅನುಭವವಾಗಿದೆ. ಇವುಗಳಲ್ಲಿ ಒಂದರ ತೀವ್ರತೆ 6.1 ಮತ್ತು ಇನ್ನೊಂದರ ತೀವ್ರತೆ 5.8 ಆಗಿತ್ತು.ಎರಡೂ ಭೂಕಂಪಗಳ ಕೇಂದ್ರಬಿಂದು ಬಹುತೇಕ ಒಂದೇ ಆಗಿತ್ತು.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ

# 20ಕ್ಕೂ ಹೆಚ್ಚು ಸ್ಥಾನಗಳಲ್ಲಿ ಕೈ ಗೆಲ್ಲಲಿದೆ

**ಮೈಸೂರು:** ಕರ್ನಾಟಕದಲ್ಲಿ ಕಾಂಗ್ರೆಸ್‌ಗೆ ಉತ್ತಮ ವಾತಾವರಣವಿದ್ದು, 20ಕ್ಕೂ ಹೆಚ್ಚು ಸ್ಥಾನ ಗೆಲ್ಲಲಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದರು.

ಸ್ವಗ್ರಾಮವಾದ ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಸಿದ್ದರಾಮನಹುಂಡಿ ಮತಗಟ್ಟೆಯಲ್ಲಿ ಶುಕ್ರವಾರ ಮತ ಚಲಾಯಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ?ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ ಸೇರಿದಂತೆ ಮೊದಲ ಹಂತದಲ್ಲಿ ಹೆಚ್ಚು ಕ್ಷೇತ್ರಗಳಲ್ಲಿ ಗೆಲ್ಲುತ್ತೇವೆ. ಜನ ಗ್ಯಾರಂಟಿ ಯೋಜನೆಗಳ ಕೈ ಹಿಡಿಯಲಿದ್ದಾರೆ? ಎಂದರು.

ಕರ್ನಾಟಕದಲ್ಲಿ ಮೋದಿ ಅಲೆ ಇಲ್ಲ, ಕಾಂಗ್ರೆಸ್ ಅಲೆ ಇದೆ. ಮೂರು ದಿನಗಳ ಮೋದಿ ಭಾಷಣವು ಹತಾಶೆ ಹಾಗೂ ಪ್ರಚೋದನಾಕಾರಿಯಾಗಿತ್ತೇ ಹೊರತು ಪರಿಣಾಮಕಾರಿಯಾಗಿಲ್ಲ. ಅದು ದೇಶದ ಪ್ರಧಾನಮಂತ್ರಿಯ ಭಾಷಣವಲ್ಲ. ಸಂವಿಧಾನ ವಿರೋಧಿ ಭಾಷಣ ಎಂದು ದೂರಿದರು. ಮೋದಿ ದ್ವೇಷ ಭಾಷಣದ ವಿರುದ್ಧ ಈಗಾಗಲೇ ಚುನಾವಣಾ ಆಯೋಗಕ್ಕೆ ದೂರು ನೀಡಿದ್ದೇವೆ. ಅವರು ಇನ್ನಷ್ಟೇ ಕ್ರಮ ಕೈಗೊಳ್ಳಬೇಕಿದೆ ಎಂದರು. ಹಿಂದೂಗಳ ಮಾಂಗಲ್ಯ ಕೀಳುತ್ತಾರೆ, ಹಿಂದುಳಿದವರ ಮೀಸಲಾತಿ ಕಿತ್ತು ಮುಸಲ್ಮಾನರಿಗೆ ಕೊಡುತ್ತಾರೆ ಎನ್ನುವ ಎರಡೂ ಭಾಷಣಗಳು ಆರ್‌ಎಸ್‌ಎಸ್ ಹಿನ್ನೆಲೆಯಿಂದ ಕೂಡಿದ ಭಾಷಣ. ಆರ್‌ಎಸ್‌ಎಸ್ ಅಜೆಂಡಾವನ್ನು ಮೋದಿ ಹೇಳಿದ್ದಾರಷ್ಟೇ ಎಂದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಹಿಂದುಳಿದವರ ಮೀಸಲಾತಿ ಕಿತ್ತು ಮುಸಲ್ಮಾನರಿಗೆ ಕೊಟ್ಟಿದೆ ಎನ್ನುವುದು ಸುಳ್ಳು. ವೀರಪ್ಪ ಮೊಯ್ಲಿ ಮುಖ್ಯಮಂತ್ರಿಯಾಗಿದ್ದಾಗ ಚಿನ್ನಪ್ಪ ರೆಡ್ಡಿ ವರದಿ ಆಧಾರದಲ್ಲಿ ಮುಸ್ಲಿಮರಿಗೆ ಶೇ 4 ಮೀಸಲಾತಿ ನೀಡಲು ತೀರ್ಮಾನಿಸಿದ್ದರು. 1994ರಲ್ಲಿ ಈ ಕುರಿತು ಆದೇಶ ಹೊರಡಿಸಲಾಯಿತು. ಅಂದಿನಿಂದ ಈವರೆಗೆ ರಾಜ್ಯದಲ್ಲಿ ಮುಸಲ್ಮಾನರಿಗೆ ಮೀಸಲಾತಿ ಇದೆ ಎಂದು ವಿವರಿಸಿದರು.

ಕೇಂದ್ರವು ರಾಜ್ಯಕ್ಕೆ ಬರ ಪರಿಹಾರ ಕೊಟ್ಟಿದ್ದರೆ ನಾವೇಕೆ ಪರಿಹಾರ ಕೇಳುತ್ತಿದ್ದೆವು. ಸುಪ್ರೀಂ ಕೋರ್ಟ್ ಯಾಕೆ ಸೂಚನೆ ನೀಡುತ್ತಿತ್ತು ಎಂದು ಪ್ರಶ್ನಿಸಿದರು.

ಕೃತಕ ಕಣ್ಣೀರು: ದೇವೇಗೌಡರು ಯಾವಾಗಲೂ ಅನುಕೂಲ ರಾಜಕಾರಣ ಮಾಡುತ್ತಾರೆ. ಅವರದ್ದು ಕೃತಕ ಕಣ್ಣೀರು. ರಾಜಕಾರಣದಲ್ಲಿ ಕಣ್ಣೀರು ಹಾಕುವ ಪರಿಸ್ಥಿತಿ ಏನಿದೆ ಜನ ಆಶೀರ್ವದಿಸಿದರೆ ಉಳಿಯುತ್ತೇವೆ, ಇಲ್ಲದಿದ್ದರೆ ಉಳಿಯುವುದಿಲ್ಲ. ಕುಟುಂಬದ ರಾಜಕಾರಣದಲ್ಲಿ ನಂಬಿಕೆ ಇಟ್ಟವರು ಮಾತ್ರ ಹೀಗೆ ಕೃತಕವಾಗಿ ಕಣ್ಣೀರು ಹಾಕುವ ತಂತ್ರ ಅನುಸರಿಸುತ್ತಾರೆ ಎಂದು ದೂರಿದರು.



### ಹುಟ್ಟೂರಿಗೆ ಸಿದ್ದು: ಗ್ರಾಮಸ್ಥರ ಸಂಭ್ರಮ

**ಬೆಳಿಗ್ಗೆ 10.20ರ ಸುಮಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪುತ್ರ, ಡಾ. ಯತೀಂದ್ರ ಜೊತೆಗೂಡಿ ಸಿದ್ದರಾಮನಹುಂಡಿಗೆ ಆಗಮಿಸಿದರು. ಅಲ್ಲಿಂದ ಸುಮಾರು 200?300 ಮೀಟರ್‌ನಷ್ಟು ದೂರ ವಾಹನದಲ್ಲೇ ಮತದಾರರ ಕೈ ಬೀಸುತ್ತ ಸಾಗಿದರು. ನಿಷೇಧಾಜ್ಞೆ ನಡುವೆಯೂ ಗ್ರಾಮಸ್ಥರು ಪಟಾಕಿ ಸಿಡಿಸಿ ಮುಖ್ಯಮಂತ್ರಿಯನ್ನು ಸ್ವಾಗತಿಸಿದರು. ಮತಗಟ್ಟೆ ಸಂಖ್ಯೆ 86ರಲ್ಲಿ ಯತೀಂದ್ರ ಜೊತೆಗೂಡಿ ಮತದಾನ ಮಾಡಿದ ಸಿದ್ದರಾಮಯ್ಯ ಹೊರಗೆ ಮಾಧ್ಯಮದವರಿಗೆ ಶಾಯಿ ಹಚ್ಚಿದ ಬೆರಳು ತೋರಿಸಿದರು. ಬಳಿಕ ಸ್ನೇಹಿತ ಕೆಂಪಿರೇಗೌಡರ ಮನೆಗೆ ಭೇಟಿ ಕೊಟ್ಟರು. ಸಿದ್ದರಾಮೇಶ್ವರ ದೇಗುಲದಲ್ಲಿ ಪೂಜೆ ಸಲ್ಲಿಸಿ ನಿರ್ಗಮಿಸಿದರು.**

### ಎನ್‌ಡಿಎ ಗೆಲ್ಲಲಿದೆ ಎಂದ ಸಿದ್ದರಾಮಯ್ಯ!

**ಮೊದಲ ಹಂತದಲ್ಲಿ ಇಂಡಿಯಾ ಮೈತ್ರಿಕೂಟ ಗೆಲ್ಲಲಿದೆ? ಎನ್ನುವ ಬದಲಿಗೆ ಎನ್‌ಡಿಎ ಮೈತ್ರಿಕೂಟ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ? ಎಂದು ಬಾಯಿ ತಪ್ಪಿ ಹೇಳುವ ಮೂಲಕ ಸಿದ್ದರಾಮಯ್ಯ ಗೊಂದಲ ಮೂಡಿಸಿದರು. ಮೋದಿ ಅವರಿಗೆ ತಾವು ಗೆಲ್ಲುವುದಿಲ್ಲ ಎಂದು ಗೊತ್ತಾಗಿದೆ. ಮೊದಲ ಹಂತದಲ್ಲಿ ಚುನಾವಣೆ ನಡೆದಿರುವ 102 ಕ್ಷೇತ್ರಗಳ ಪೈಕಿ ಎನ್‌ಡಿಎ ಮತ್ತು ಮೈತ್ರಿಕೂಟ ಅತಿ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ ಎಂದು ಸಿದ್ದರಾಮಯ್ಯ ಹೇಳಿದರು.**

## ಗ್ಯಾರಂಟಿ ಮುಂದಿಟ್ಟು ಮತ ಸೆಳೆಯುವ ಪ್ರಯತ್ನ ಯಶಸ್ವಿ

**ಮೈಸೂರು:** ಕಾಂಗ್ರೆಸ್ ಸರ್ಕಾರದ ಐದು ಗ್ಯಾರೆಂಟಿಗಳು ಜನರ ಜೀವನವನ್ನು ಉತ್ತಮಗೊಳಿಸಿದ ಬಗ್ಗೆ ಮತದಾರರ ಗಮನಕ್ಕೆ ತಂದು ಮತಗಟ್ಟೆಗಳಲ್ಲಿ ಮತಬೇಟೆಗೆ ಕಾಂಗ್ರೆಸ್ ಕಾರ್ಯಕರ್ತರ ಶ್ರಮಕ್ಕೆ ಉತ್ತಮ ಪ್ರತಿಕ್ರಿಯೆ ಲಭಿಸಿದೆ ಎಂದು ಕೆಪಿಸಿಸಿ ವಕ್ತಾರ ಹೆಚ್. ಎ. ವೆಂಕಟೇಶ್ ತಿಳಿಸಿದ್ದಾರೆ.

ಕೆಆರ್ ಕ್ಷೇತ್ರದ ವಿವಿಧ ಮತ ಕೇಂದ್ರಗಳ ಮುಂದೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಜೊತೆಯಲ್ಲಿ ಮತದಾನದ ಬಗ್ಗೆ ಸಮಾಲೋಚನೆ ಮಾಡಿ ಅಲ್ಲಿನ ಮತದಾರರಿಗೆ ಮತಯಾಚನೆ ಮಾಡಿ ಪಕ್ಷದ ಐದು ಗ್ಯಾರಂಟಿಗಳ ಬಗ್ಗೆ ಮತದಾರರಿಗೆ ಮನವರಿಕೆ ಮಾಡಿ ಕಾಂಗ್ರೆಸ್ ಪಕ್ಷಕ್ಕೆ ತಮ್ಮ ಬೆಂಬಲ ನೀಡಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮೈಸೂರು ನಗರ ಕಾಂಗ್ರೆಸ್ ಕಾರ್ಯದರ್ಶಿ ಡೈರಿ ವೆಂಕಟೇಶ್, ಕಾರ್ಮಿಕ ವಿಭಾಗದ ಅಧ್ಯಕ್ಷರಾದ ವಿನಯ್, ಪಕ್ಷದ ಮುಖಂಡರಾದ ರವಿಶಂಕರ್,ಹಾಗೂ ಆ ಭಾಗದ ಅನೇಕ ಕಾಂಗ್ರೆಸ್ ಪಕ್ಷದ ಮುಖಂಡರು ಉಪಸ್ಥಿತರಿದ್ದರು.



### ವಿಶೇಷ ಉಡುಗೆತೊಟ್ಟು ಮಿಂಚಿದ ಸಿಬ್ಬಂದಿ

**ನಂಜನಗೂಡು ತಾಲ್ಲೂಕಿ ವೀಶೇಷ ಮತಗಟ್ಟೆಗಳಲ್ಲಿ ಚುನಾವಣಾ ಸಿಬ್ಬಂದಿಗಳು ವಿಷಯಾಧಾರಿತ ಉಡುಗೆ ತೊಟ್ಟು ಕರ್ತವ್ಯಕ್ಕೆ ಹಾಜರಾಗಿದ್ದು ಎಲ್ಲರ ಗಮನ ಸೆಳೆಯಿತು.**

**ತಾಂಡವಪುರ, ಹುಲ್ಲಹಳ್ಳಿ ಯತ್ನಿಕ್ ಮತಗಟ್ಟೆಯಲ್ಲಿ ಬಿಳಿಪಂಚೆ , ಬಿಳಿಶರ್ಟ್ , ಶಲ್ಯ, ಮೈಸೂರು ಪೇಟ ತೊಟ್ಟಿದ್ದು ಸಖಿ ಮತಗಟ್ಟೆಗಳಲ್ಲಿ ಗುಲಾಬಿ ಬಣ್ಣದ ಉಡುಗೆತೊಟ್ಟಿದ್ದರು. ಬಂಕಹಳ್ಳಿಯ ಹಾಡಿ ಮತಗಟ್ಟೆಗಳಲ್ಲಿ ಪುಕ್ಕದ ಕಿರೀಟ, ನಡುವಿಗೆ ಸೊಪ್ಪಿನಿಂದ ಸುತ್ತಿಕೊಂಡು ಗಮನ ಸೆಳೆದರೆ, ಇತ್ತ ದೇವಿರಮ್ಮನಹಳ್ಳಿ ಪಾಳ್ಯದ ಯುವ ಮತಗಟ್ಟೆಯಲ್ಲಿ ಸಿಬ್ಬಂದಿ ಗರಿ ಗರಿ ಕೋಟು ಧರಿಸಿ ಹಾಜರಿದ್ದರು. ಸಿಂಧುವಳ್ಳಿ ಗ್ರಾಮ ಪಂಚಾಯಿತಿಯ ಕುರಹಟ್ಟಿ ಗ್ರಾಮದ ಸಖಿಮತಗಟ್ಟೆಗೆ ಸ್ವಸಹಾಯಸ ಸಂಘದ ಮಹಿಳೆಯರು ಪಿಂಕ್ ಸೀರೆ ಧರಿಸಿ ಹಕ್ಕು ಚಲಾಯಿಸಲು ಬಂದಿದ್ದು ಎಲ್ಲರ ಪ್ರಶಂಶೆಗೆ ಪಾತ್ರ ವಾಗಿದೆ.**



## ಬಾಲಬೋದಿನಿ ಶಾಲೆಯಲ್ಲಿ ಮೊದಲ ಮತ ಚಲಾಯಿಸಿದ ಸಿ. ಸಂದೀಪ್

**ಮೈಸೂರು:** ಕೃಷ್ಣರಾಜ ಕ್ಷೇತ್ರ ವ್ಯಾಪ್ತಿಯ ಚಾಮುಂಡಿಪುರಂ ವಾರ್ಡ್ ಬಾಲಬೋದಿನಿ ಮತಗಟ್ಟೆಯಲ್ಲಿ ಕಳೆದ ಚುನಾವಣೆಗಳಂತೆ ಈ ಭಾರಿಯೂ ಸಹ ಮೈಸೂರು ಕೊಡಗು ಲೋಕಸಭಾ ಚುನಾವಣೆಯಲ್ಲಿ ಬೆಳ್ಳಂಬೆಳಗ್ಗೆ ಕಾದು ನಿಂತು ಮತಗಟ್ಟೆ ಬಾಗಿಲು ತೆರೆದ ತಕ್ಷಣವೇ ಮೊದಲ ಮತ ಚಲಾವಣೆ ಮಾಡಿದ ಸಿ. ಸಂದೀಪ್ ಮತದಾನದಲ್ಲಿ ಪಾಲ್ಗೊಂಡ ಸಂತಸ ವ್ಯಕ್ತಪಡಿಸಿದರು, ಇದೇ ಸಂಧರ್ಭದಲ್ಲಿ ಸಿ. ಸಂದೀಪ್ ಮಾತನಾಡಿ ಶಾಲೆ ದೇವಸ್ಥಾನ ಚಿತ್ರಮಂದಿರ ಹೋಟೆಲ್ ಗಳು ತೆರೆಯುವ ಮೊದಲೇ ಒಳಹೋಗಲು ಕಾಯುತ್ತಿದ್ದ ಸನ್ನಿವೇಶದ ಹಾಗೇ ಮತಗಟ್ಟೆ ತೆರೆಯುವ ಮೊದಲೇ ನಾನು ಸಹ ಮತದಾನ ಹಕ್ಕು ದೊರೆತ ನಂತರ ಇಲ್ಲಿಯವರೆಗೂ ಸಹ ಚುನಾವಣೆಗಳಲ್ಲಿ ಮೊದಲ ಕಾದು ನಿಂತು ಮತ ಚಲಾಯಿಸುತ್ತಿದ್ದೇನೆ ಎನ್ನುವ ಹೆಮ್ಮೆ ನನಗಿದೆ ಎಂದರು, ಮತದಾನ ಪ್ರತಿಯೊಬ್ಬ ಭಾರತೀಯನ ಹಕ್ಕು ನಮ್ಮ ಮತಗಳಿಂದಲೇ ಆಡಳಿತ ನಡೆಯುವ ಪ್ರಜಾಪ್ರಭುತ್ವ ಹಬ್ಬದಲ್ಲಿ ಪ್ರತಿಯೊಬ್ಬರು ಸಹ ತಮ್ಮ ಕುಟುಂಬ ನೆರೆಮನೆಯವರ ಜೊತೆ ಕಡ್ಡಾಯವಾಗಿ ಆಗಮಿಸಿ ಮತದಾನ ಪ್ರಕ್ರಿಯೆಯಲ್ಲಿ ಭಾಗಿಯಾದರೆ ಅದು ಭಾರತೀಯನಾಗಿ ಸಾರ್ಥಕವಾಗುತ್ತದೆ ಎಂದರು.



## ಹಾಸನದ ಪೆನ್ ಡ್ರೈವ್ ಪ್ರಕರಣಕ್ಕೆ ಎಐಎಂಎಸ್‌ಎಸ್ ಉಗ್ರ ಖಂಡನೆ!

**ಹಾಸನ:** ಖ್ಯಾತ ಪ್ರಭಾವಿ ರಾಜಕಾರಣಿ ಕುಟುಂಬದ ಸದಸ್ಯರು ಸಾವಿರಾರು ಹೆಣ್ಣು ಮಕ್ಕಳನ್ನು ಕಾಮಕಾಂಡದಲ್ಲಿ ತೊಡಗಿಸಿರುವ ಪೆನ್ ಡ್ರೈವ್ ಗಳನ್ನು ಹಾಸನದ ಹಾದಿ ಬೀದಿಗಳಲ್ಲಿ ಚೆಲ್ಲಲಾಗಿ ಬಿದ್ದಿವೆ ಎನ್ನಲಾದ ಆಘಾತಕಾರಿ ಸಂಗತಿಯು ವಿವಿಧ ಮೂಲಗಳಿಂದ ತಿಳಿದು ಬಂದಿದೆ. ಇದು ರಾಜ್ಯದಲ್ಲೇ ತಲ್ಲಣ ಉಂಟು ಮಾಡಿದೆ. ಈ ಘಟನೆಯ ಕುರಿತು ರಾಜ್ಯ ಸರ್ಕಾರವು ಕೂಡಲೇ ಕ್ರಮ ಕೈಗೊಳ್ಳಬೇಕು, ಈ ಭೀಕರ ಘಟನೆಯಲ್ಲಿ ತೊಡಗಿದ ವ್ಯಕ್ತಿಗಳು ಎಷ್ಟೇ ಪ್ರಭಾವಿಗಳಾಗಿದ್ದರೂ ಅವರನ್ನು ಈ ಕೂಡಲೇ ಬಂಧಿಸಿ ಕಾನೂನು ಕ್ರಮ ಜರುಗಿಸಬೇಕು ಎಂದು ೦ಋಒಖಖ(ಎಐಎಂಎಸ್‌ಎಸ್) ಕರ್ನಾಟಕ ರಾಜ್ಯ ಸಮಿತಿಯು ಆಗ್ರಹಿಸುತ್ತದೆ. ಇದೇ ವೇಳೆಯಲ್ಲಿ ಈ ಅಮಾನುಷ ಲೈಂಗಿಕ ದೌರ್ಜನ್ಯಕ್ಕೆ ಬಲಿಯಾಗಿ ಸಂತ್ರಸ್ತರಾದ ನೂರಾರು ಹೆಣ್ಣುಮಕ್ಕಳಿಗೆ ರಕ್ಷಣೆ ಹಾಗೂ ಆರೈಕೆ ತೀವ್ರ ಜರೂರಾಗಿದೆ. ಕೆಲವು ಹೆಣ್ಣು ಮಕ್ಕಳು ಆತ್ಮಹತ್ಯೆಯಂತಹ ಘೋರ ಮಾರ್ಗ ಹಿಡಿಯುವಂತಹ ವರದಿಗಳು ಬಂದಿವೆ. ಸರ್ಕಾರವು ಕೂಡಲೇ ಈ ಸಂತ್ರಸ್ತ ಮಹಿಳೆಯರಿಗೆ ರಕ್ಷಣೆ ಹಾಗೂ ವೈದ್ಯಕೀಯ ಸೌಲಭ್ಯ ಒದಗಿಸಬೇಕೆಂದು AIMSS ಕರ್ನಾಟಕ ರಾಜ್ಯ ಸಮಿತಿಯು ಸರ್ಕಾರಕ್ಕೆ ಆಗ್ರಹಿಸುತ್ತದೆ.

## ಗ್ರಾಮದ ಹಿರಿಯರ ಮತದಾನ

**ಮಂಡ್ಯ:** ಮೇಲುಕೋಟೆ ಕ್ಷೇತ್ರದ ಹೊಳಲು ಗ್ರಾಮದ ಮತಗಟ್ಟೆ ಸಂಖ್ಯೆ: 188 /161 ರ ಮತಗಟ್ಟೆಯಲ್ಲಿ ಮಾಜಿ ಶಾಸಕರಾದ ಹೆಚ್ .ಬಿ. ರಾಮು ಹಾಗೂ ಪತ್ನಿಯಾದ ಹೊನ್ನಮ್ಮ ರವರು ಹಾಗೂ ಗ್ರಾಮದ ಹಿರಿಯರು, ವಿಶೇಷ ವಿಕಲಚೇತನರಾದ 90 ವರ್ಷದ ಶಾಂತಮ್ಮ ಮೊಮ್ಮಗನ ಸಹಾಯದಿಂದ, ಹಾಗೂ ವಿಕಲಚೇತನರಾದ ಏಳುಮಲೆ ಮತಗಟ್ಟೆ ಸಿಬ್ಬಂದಿಯ ಸಹಾಯದಿಂದ ಮತ ಚಲಾಯಿಸಿದರು. ಈ ಸಂದರ್ಭದಲ್ಲಿ ದುದ್ದ ಎರಡನೇ ವಲಯದ ಆರ್ ಐ ಜಯರಾಮು ರವರು ಮತಗಟ್ಟೆಯನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಮತಗಟ್ಟೆಯ ಸಿಬ್ಬಂದಿಗಳು ,ಆರಕ್ಷಕ ಸಿಬ್ಬಂದಿಗಳು ,ಅಂಗನವಾಡಿ ಕಾರ್ಯಕರ್ತರು, ಆಶಾ ಕಾರ್ಯಕರ್ತರು ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಸಪ್ತರ್ಷಿ ಗುರುಕುಲ ಸೇವಾ ಆಶ್ರಮಕ್ಕೆ ಅರ್ಜಿ ಆಹ್ವಾನ

**ಮೈಸೂರು:** ನಗರದ ಕೆಆರ್‌ಎಸ್ ರಸ್ತೆಯ ಮಂಟಿಯ ಸಮೀಪವಿರುವ ಸಾದನಹಳ್ಳಿ ಸಪ್ತರ್ಷಿ ಗುರುಕುಲ ಆಶ್ರಮಕ್ಕೆ ಉಚಿತ ವಿದ್ಯಾರ್ಥಿನಿಲಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಶ್ರಮದಲ್ಲಿ ಓದ ಬಯಸುವವರಿಗೆ ವೇದ, ಸಂಸ್ಕೃ ತ, ಪ್ರಾಚೀನ ಗುರುಕುಲ ಪದ್ಧತಿಯಂತೆ ಶಿಕ್ಷಣ ಅಭ್ಯಾಸ ಹಾಗೂ ಪ್ರಾಥಮಿಕ, ಪ್ರೌಢಶಾಲೆ, ಕಾಲೇಜು ಹಂತದಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿಯನ್ನು ಕಲ್ಪಿಸಲಾಗುವುದು. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಸೇವಾಶ್ರಮದ ಪೀಠಾಧ್ಯಕ್ಷರಾದ ಡಾ.ಅಭಿನವ ರಾಮಾನುಜರನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ 9481319111 ಅಥವಾ 8861573934 ಸಂಪರ್ಕಿಸಬಹುದು.

## ಮತದಾನ ಮಾಡಿದ ಡಾ.ಕೃಷ್ಣ ದಂಪತಿ

**ಮಂಡ್ಯ:** ಮತದಾನದ ಹಕ್ಕನ್ನು ಪ್ರತಿಯೊಬ್ಬರೂ ಚಲಾಯಿಸಬೇಕು. ಚುನಾವಣೆಯು ಹಬ್ಬವಿದ್ದ ಹಾಗೆ ಎಂದು ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ.ಎಚ್.ಕೃಷ್ಣ ಹೇಳಿದರು. ನಗರದಲ್ಲಿ ಶುಕ್ರವಾರ ಮತದಾನ ಮಾಡಿ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಒಂದು ಹಬ್ಬವೆಂದರೆ ಅದು ಮತದಾನವಾಗಿದೆ ಅದರಂತೆ ಪ್ರತಿಯೊಬ್ಬ ಭಾರತೀಯನು ಭಾಗವಹಿಸಿ ಮತದಾನ ಮಾಡುವ ಮನೋಭಾವ ಬೆಳೆಸಿಕೊಳ್ಳಬೇಕು. ಆ ಮೂಲಕ ಸಂವಿಧಾನ ಹಕ್ಕು ಚಲಾಯಿಸುವುದು ಮುಖ್ಯವಾಗಲಿ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಪತ್ನಿ ಡಾ.ಪಾವನ ಕೃಷ್ಣ ಅವರ ಜೊತೆ ಡಾ.ಕೃಷ್ಣ ಅವರು ಅಶೋಕ ನಗರದ ಮತಗಟ್ಟೆಯಲ್ಲಿ ಮತದಾನ ಮಾಡಿದರು.

# ಶಾಂತಿಯುತ ಮತದಾನ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ ಇಂದು ನಡೆದ ಮತದಾನವು ಶಾಂತಿಯುತವಾಗಿ ಜರುಗಿತು. ಮತದಾರರು ಸರತಿ ಸಾಲಿನಲ್ಲಿ ನಿಂತು ತಮ್ಮ ಹಕ್ಕು ಚಲಾಯಿಸಿದರು. ಚುನಾವಣಾ ಕರ್ತವ್ಯಕ್ಕೆ ನಿಯೋಜನೆಗೊಂಡ ಮತಗಟ್ಟೆ ಅಧಿಕಾರಿಗಳು, ಸಿಬ್ಬಂದಿ, ಸೆಕ್ಟರ್ ಅಧಿಕಾರಿಗಳು ತಮ್ಮ ಕಾರ್ಯಗಳನ್ನು ಸುಗಮವಾಗಿ ನಿರ್ವಹಿಸಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಾಮಾನ್ಯ ಚುನಾವಣಾ ವೀಕ್ಷಕರಾದ ನ್ಯಾಲಿ ಎಟೆ ಅವರು ಕ್ಷೇತ್ರದಾದ್ಯಂತ ಮತಗಟ್ಟೆ ಕೇಂದ್ರಗಳಿಗೆ ಇಂದು ಮುಂಜಾನೆಯಿಂದಲೆ ಭೇಟಿ ನೀಡಿ ಪರಿಶೀಲಿಸುವ ಕಾರ್ಯವನ್ನು ದಿನವಿಡಿ ಕೈಗೊಂಡರು.

ಮೊದಲಿಗೆ ಚುನಾವಣಾ ವೀಕ್ಷಕರು ಚಿಕ್ಕಬಳ್ಳಾಪುರ ತಾಲೂಕಿನ ಜಡಲತಿಮ್ಮನ ಹಳ್ಳಿಯ ಮಹಿಳಾ ಸಖಿ ಮತಗಟ್ಟೆ, ಕುಪ್ಪಳ್ಳಿ ವಿಶೇಷ ಮತಗಟ್ಟೆ ಕೇಂದ್ರಗಳಿಗೆ ಮುಂಜಾನೆಯೇ ಭೇಟಿ ನೀಡಿ ಅಲ್ಲಿನ ಮತದಾನ ಪೂರ್ವ ಸಿದ್ಧತೆಗಳನ್ನು ಪರಿಶೀಲನೆ ಮಾಡಿದರು.ನಂತರ ಚಿಕ್ಕಬಳ್ಳಾಪುರ ನಗರದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಕಚೇರಿಯಲ್ಲಿ ತೆರೆದಿರುವ ವಿಶೇಷ ಚೇತನ ಸ್ನೇಹಿ ಮತಗಟ್ಟೆಗೆ ಭೇಟಿ ನೀಡಿ ಅಲ್ಲಿನ ಅಣಕು ಮತದಾನ(ಮಾಕ್ ಪೋಲಿಂಗ್ ) ಪ್ರಕ್ರಿಯೆಯನ್ನು ಪರಿಶೀಲಿಸಿರು. ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪ್ರಕಾಶ್ ಜಿ ಟಿ ನಿಟ್ಟಾಲಿ, ಚಿಕ್ಕಬಳ್ಳಾಪುರ ಕಾರ್ಯನಿರ್ವಾಹಣಾಧಿಕಾರಿ ಸಂದೀಪ್,ಪೌರಾಯುಕ್ತ ಮಂಜುನಾಥ್ ಸೇರಿದಂತೆ

### ಕಲಾವಿದ ನಟರಾಜ್ ಕುಟುಂಬ ಸಮೇತ ಮತದಾನ

**ಬೆಂಗಳೂರಿನ ಪದ್ಮನಾಭ ನಗರದ ಸಹಕಾರಿ ವಿದ್ಯಾ ಕೇಂದ್ರದ ಮತಗಟ್ಟೆಯಲ್ಲಿ ಚಲನಚಿತ್ರ ಪೋಷಕ ಕಲಾವಿದರ ಸಂಘದ ಕಾರ್ಯಕಾರಿ ಸದಸ್ಯ, ಪತ್ರಕರ್ತ, ಕರ್ನಾಟಕ ವರ್ಕಿಂಗ್ ಡಿಜಿಟಲ್ ಅಂಡ್ ಸೋಶಿಯಲ್ ಮಿಡಿಯಾ ಪ್ರಧಾನ ಕಾರ್ಯದರ್ಶಿ ಮತ್ತು ವೀರಶೈವ ಲಿಂಗಾಯುತ ಸಂಘಟನೆಯ ಉಪಾಧ್ಯಕ್ಷ ನಟರಾಜ್ ಹಂಜಾಗಿಮಠ ಇಂದು ನಡೆದ ಮತ ಹಬ್ಬ ಲೋಕಸಭಾ ಚುನಾವಣೆಯಲ್ಲಿ ಕುಟುಂಬ ಸಮೇತರಾಗಿ ಆಗಮಿಸಿ ಮತ ಚಲಾಯಿಸಿದರು.**

ಚುನಾವಣೆಯ ಕರ್ತವ್ಯಕ್ಕೆ ನಿಯೋಜನೆ ಆಗಿರುವ ಅಧಿಕಾರಿಗಳು, ಸಿಬ್ಬಂದಿ ಇದ್ದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ ಅವರು ಮತದಾನ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಮಾದರಿ ಮತಗಟ್ಟೆಗಳಿಗೆ ಹಾಗೂ ವಲ್ನರಬಲ್ ಮತಗಟ್ಟೆಗೆ ಭೇಟಿ ನೀಡಿ ಪರಿಶೀಲಿಸಿದರು. ಈ ವೇಳೆ ಅವರು ಮಾತನಾಡಿ, ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಾದ್ಯಂತ ಸಖಿ ಮತಗಟ್ಟೆಗಳು, ವಿಶೇಷ ಚೇತನ ಸ್ನೇಹಿ ಮತಗಟ್ಟೆಗಳು, ಯುವ ಮತಗಟ್ಟೆಗಳು ಹಾಗೂ ಎಥ್ನಿಕ್ ಮತಗಟ್ಟೆಗಳನ್ನು ತೆರೆಯಲಾಗಿದ್ದು, ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ಮತಗಟ್ಟೆ ಕೇಂದ್ರಗಳಿಗೆ ತೆರಳಿ ಮತದಾನ ಮಾಡಲು ಮನವಿ ಮಾಡಿದರು.

ಕಲಾವಿದ ನಟರಾಜ್ ಕುಟುಂಬ ಸಮೇತ ಮತದಾನ.





### ಮತದಾನ ಮಾಡಿದ ನವವಧು ವರ

**ದೇವನಹಳ್ಳಿ ತಾಲೂಕು ವಿಜಯಪುರ ಪಟ್ಟಣದಲ್ಲಿ ದೇವನಹಳ್ಳಿ ರಸ್ತೆಯ ಗಿರಿಜಾ ಶಂಕರ ಕಲ್ಯಾಣ ಮಂಟಪದಲ್ಲಿ ಶುಕ್ರವಾರದಂದು ವಿವಾಹವಾದ ಶ್ರೀನಿವಾಸ ನಾಗಮಣಿ ದಂಪತಿಗಳ ಮಗಳಾದ ತೇಜಸ್ವಿನಿ ಶಶಾಂಕ್ ರವರು ಸರ್ಕಾರಿ ಉರ್ದು ಪ್ರೌಢಶಾಲೆಯಲ್ಲಿ ಮತದಾನ ಮಾಡಿದರು.**



### ಮಹಿಳೆಯರ ಪ್ರಾಬಲ್ಯ

**ದೇವನಹಳ್ಳಿ ತಾಲೂಕು ವಿಜಯಪುರ ಪಟ್ಟಣದ ಕೋಲಾರ ರಸ್ತೆಯ 18 ನೇ ವಾರ್ಡ್‌ನಲ್ಲಿ ಬಿಜೆಪಿ ಅಭ್ಯರ್ಥಿ ಸುಧಾಕರ್ ಪರವಾಗಿ ಮತಯಾಚನೆ ಮಾಡಲು ಕುಳಿತ ಮಹಿಳೆಯರು.**

## ಮಂದಗತಿಯಿಂದ ಚುರುಕುಗೊಂಡ ಮತದಾನ

**ವಿಜಯಪುರ:** ಪಟ್ಟಣದಲ್ಲಿ ಬೆಳಗಿನ ವೇಳೆ 7:30ರ ಹೊತ್ತಿಗೆ ಮತದಾನ ಚುರುಕುಕೊಂಡರೆ ಹೋಬಳಿಯ ಗ್ರಾಮೀಣ ಪ್ರದೇಶದಲ್ಲಿ ಬಹಳಷ್ಟು ಕಡೆ 8:30 9:00 ವರೆಗೆ ಕೇವಲ ಬೆರಳೆಣಿಕೆ ಮತದಾನ ನಡೆದಿದ್ದು ಮತದಾರರು ಮತಗಟ್ಟೆಗೆ ಬಂದಿರಲಿಲ್ಲ. ಆದರೆ ಮಧ್ಯಾಹ್ನದ ನಂತರ ಗ್ರಾಮೀಣ ಪ್ರದೇಶದಲ್ಲಿ ಮತದಾನ ಚುರುಕುಕೊಂಡಿದ್ದು ಕೆಲವಷ್ಟು ಕಡೆ 85 ರಿಂದ 90 ರಷ್ಟು ಮತದಾನ ನಡೆದಿದ್ದು ಕಂಡುಬಂದಿತು.

ಹೋಬಳಿಯಾದ್ಯಂತ ಸಂಪೂರ್ಣ ಬಂದೋಬಸ್ತ್ ಏರ್ಪಡಿಸಲಾಗಿದ್ದು ಯಾವುದೇ ಅಹಿತಕರ ಘಟನೆಗಳು ಕಂಡುಬರಲಿಲ್ಲ. ಧರ್ಮಪುರದ ಒಂದು ಬೂತ್ನಲ್ಲಿ ಬೇರೆಡೆ ಮತದಾನ ಮಾಡಿ ಬಂದವರು ಇಲ್ಲಿಯೂ ಸಹ ಹೆಸರು ಮತಪಟ್ಟಿಯಲ್ಲಿ ಇದ್ದ ಕಾರಣ ಮತದಾನ ಮಾಡಲು ಬಂದ ಪ್ರಸಂಗ ಕಂಡುಬಂದಿತು.

ಹಾರೋಹಳ್ಳಿಯ ಮತಗಟ್ಟೆಯೊಂದರಲ್ಲಿ 102 ವರ್ಷ ವಯಸ್ಸಿನ ನರಸಮ್ಮ ಎಂಬ ವೃದ್ದೆ ತಮ್ಮ ಮಗ ಮುನಿಯಪ್ಪ ರವರೊಂದಿಗೆ ಮತದಾನ ಮಾಡಿದ್ದು ವಿಶೇಷವಾಗಿತ್ತು. ವೃದ್ದರು ಹಾಗೂ ಅಂಗವಿಕಲರುಗಳಿಗೆ ಅವರುಗಳ ಮನೆ ಬಾಗಿಲಲ್ಲಿಯೇ ಮತದಾನ ಮಾಡುವ ವ್ಯವಸ್ಥೆ ಕಲ್ಪಿಸಿದ್ದರು ಸಹ ಬಹಳಷ್ಟು ಮಂದಿ ಮತಗಟ್ಟೆಗಳಿಗೆ ಬಂದು ಮತದಾನ ಮಾಡುತ್ತಿರುವುದು ಕಂಡುಬಂದಿತು.



**ವಿಜಯಪುರ ಪಟ್ಟಣದ ಸಮೀಪದ ಹಾರೋಹಳ್ಳಿ ಮತಗಟ್ಟೆಯೊಂದರಲ್ಲಿ ನೂರ ಎರಡು ವರ್ಷ ವಯಸ್ಸಿನ ನರಸಮ್ಮ ಎಂಬಾಕೆ ತಮ್ಮ ಮಗನ ಸಹಾಯದಿಂದ ಮತದಾನ ಮಾಡಲು ಆಗಮಿಸಿರುವುದು.**



### ಉಪ್ಪಿನಮೋಳೆ ಗ್ರಾಮದಲ್ಲಿ ಶಾಸಕ ಪುಟ್ಟರಂಗಶೆಟ್ಟಿ ಅವರಿಂದ ಮತದಾನ

**ಚಾಮರಾಜನಗರ ಲೋಕಸಭಾ ಚುನಾವಣೆ ಹಿನ್ನೆಲೆ ಶುಕ್ರವಾರ ಬೆಳಿಗ್ಗ 7 ಗಂಟೆ ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲೂಕಿನ ಉಪ್ಪಿನಮೋಳೆ ಗ್ರಾಮದಲ್ಲಿ ಬೂತ್ 217 ರಲ್ಲಿ ಎಂ ಎಲ್ ಎ ಹಾಗೂ ಎಂ ಎಸ್ ಐ ಎಲ್ ಅಧ್ಯಕ್ಷರಾದ ಸಿ.ಪುಟ್ಟರಂಗಶೆಟ್ಟಿ ಅವರು ಮತದಾನ ಮಾಡಿದರು. ಈ ವೇಳೆ ಮಾತನಾಡಿದ ಅವರು ನನ್ನ ಸ್ವಗ್ರಾಮವಾದ ಉಪ್ಪಿನಮೋಳೆ ಗ್ರಾಮದಲ್ಲಿ ಮತದಾನ ಮಾಡಿದ್ದೇನೆ ಐದು ವರ್ಷಕೊಮ್ಮೆ ಬರುವ ಚುನಾವಣೆ ಹಬ್ಬ ಎಂದು ತಿಳಿಸಿದರು.**

ಶಾಸಕ ದರ್ಶನ್ ಧ್ರುವನಾರಾಯಣ್ ವಿಶ್ವಾಸ

# ಕಾಂಗ್ರೆಸ್ ಗೆಲುವಿಗೆ ಪೂರಕ ವಾತಾವರಣ ಇದೆ

**ಚಾಮರಾಜನಗರ:** ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವಿಗೆ ಪೂರಕ ವಾತಾವರಣವಿದ್ದು, ಪಕ್ಷದ ಅಭ್ಯರ್ಥಿ ಸುನೀಲ್‌ಬೋಸ್ ಅವರಿಗೆ ನಂಜನಗೂಡು ವಿಧಾನಸಭಾ ಕ್ಷೇತ್ರದಿಂದ ಹೆಚ್ಚು ಮತಗಳನ್ನು ಕೊಡಿಸುವುದಾಗಿ ಕ್ಷೇತ್ರದ ಶಾಸಕ ದರ್ಶನ್‌ಧ್ರುವನಾರಾಯಣ್ ಹೇಳಿದರು.

ತಾಲೂಕಿನ ಸ್ವಗ್ರಾಮವಾದ ಹೆಗ್ಗವಾಡಿಯ ಸರ್ಕಾರಿ ಶಾಲೆಯಲ್ಲಿರುವ ಮತಗಟ್ಟೆ ಸಂಖ್ಯೆ 65ರಲ್ಲಿ ತಮ್ಮ ಸಹೋದರ ಧೀರನ್, ಪಕ್ಷದ ಮುಖಂಡರೊಂದಿಗೆ ಸರತಿ ಸಾಲಿನಲ್ಲಿ ನಿಂತು ತಮ್ಮ ಹಕ್ಕು ಚಲಾಯಿಸಿದ ನಂತರ ಮಾತನಾಡಿದ ಅವರು, ಭಾರತದೇಶದಲ್ಲಿ ಅಭಿವೃದ್ಧಿ ಬಯಸಿ, ಬದಲಾವಣೆ ಬಯಸಿ ಎಲ್ಲಾ ಸಮುದಾಯಗಳನ್ನು ಒಟ್ಟಿಗೆ ಕರೆದೊಯ್ಯುವ ಒಳ್ಳೆಯ ವ್ಯವಸ್ಥೆ ನಾವು ಮತದಾನ ಮಾಡಿದ್ದೇವೆ ಎಂದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲೂ ಕೂಡ ಹಿಂದೆ ಕಾಂಗ್ರೆಸ್ ಭದ್ರಕೋಟೆ ಆಗಿತ್ತು. ಅ ರೀತಿ ಮತ್ತೊಮ್ಮೆ ಅವಕಾಶ ಬಂದಿದೆ. ನಮ್ಮ ತಂದೆ ಇಲ್ಲಿ 2 ಬಾರಿ ಸಂಸದರಾಗಿದ್ದರು. ಕಳೆದ ಚುನಾವಣೆಯಲ್ಲಿ ಅಲ್ಪಮತಗಳ ಅಂತರದಲ್ಲಿ ಸೋತರು. ಈ ಬಾರಿ ಜನರಿಗೆ ಒಳ್ಳೆಯ ಅವಕಾಶ ಸಿಗುತ್ತಿದೆ. ಜನರ ಬದಲಾವಣೆ ಬಯಸಿ ಉತ್ತಮ ನಿರ್ಧಾರ ತಗೆದುಕೊಳ್ತಾರೆ ಎಂದರು.

ನಂಜನಗೂಡು ವಿಧಾನಸಭಾ ಕ್ಷೇತ್ರದಲ್ಲಿ ಪೂರಕವಾದ ವಾತಾವರಣ ಇದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃದಲ್ಲಿ ಚುನಾವಣಾ ಪೂರ್ವದಲ್ಲಿ ಕೊಟ್ಟ ಐದು ಗ್ಯಾರಂಟಿ ಯೋಜನೆಗಳನ್ನು ನುಡಿದಂತೆ ಜಾರಿ ಮಾಡಿದೆ. ಅದನ್ನು ಪ್ರತಿಮನೆ, ಪ್ರತಿಮನೆ ತಲುಪಿಸುವ ಕೆಲಸ ಮಾಡಿದ್ದೇವೆ ಸರ್ಕಾರದಿಂದ ಅನುದಾನ ತಂದು ಹೆಚ್ಚು ಕೆಲಸ ಮಾಡಿದ್ದೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ, ತಮ್ಮ ತಂದೆ ಮಾಜಿ ಸಂಸದರಾದ ಆರ್.ಧ್ರುವಾನಾಯಣ್ ಅವರು ಹಿಂದೆ ಕ್ಷೇತ್ರದಲ್ಲಿ ಸಾಕಾಷ್ಟು ಅಭಿವೃದ್ಧಿ ಕೆಲಸ ಮಾಡಿ ಪಕ್ಷದ ಅಭ್ಯರ್ಥಿ ಸುನೀಲ್ ಬೋಸ್‌ಗೆ ಗೆಲುವಿಗೆ ಪೂರಕ ವಾತಾವರಣ ಇದ್ದು ನಂಜನಗೂಡ ಕ್ಷೇತ್ರದಿಂದ ಹೆಚ್ಚಿನ ಬಹುಮತ ಕೊಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ಸಹೋದರ ಉದ್ಯಮಿ ಧೀರನ್, ಧ್ರುವನಾರಾಯಣ್, ಜಿ.ಪಂ.ಮಾಜಿ ಸದಸ್ಯ ನವೀನ್ ಕೆರೆಹಳ್ಳಿ , ತಾ.ಪಂ.ಮಾಜಿ ಸದಸ್ಯ ರೇವಣ್ಣ, ಜಿಲ್ಲಾ ಮಾಧ್ಯಮ ಕಾರ್ಯದರ್ಶಿ ರಾಜೇಶ ಗೌಡಹಳ್ಳಿ, ಇತರರು ಹಾಜರಿದ್ದರು.



# ಸಿನಿಮಾ



# ಮೇ 3ಕ್ಕೆ ಉಸಿರೇ ಉಸಿರೇ ರಿಲೀಸ್

## ಅತಿಥಿ ಪಾತ್ರದಲ್ಲಿ ಕಿಚ್ಚ ಸುದೀಪ್

ಬಿಗ್ ಬಾಸ್ ಖ್ಯಾತಿಯ ರಾಜೀವ್ ಹನು ನಾಯಕರಾಗಿ ನಟಿಸಿರುವ ಹಾಗೂ ನಟ ಕಿಚ್ಚ ಸುದೀಪ್ ಅತಿಥಿ ಪಾತ್ರದಲ್ಲಿ ಕಾಣಿಸಿಕೊಂಡಿರುವ ಉಸಿರೇ ಉಸಿರೇ ಚಿತ್ರ ಮೇ 3 ರಂದು ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ.

ಈ ಚಿತ್ರಕ್ಕಾಗಿ ನಾನು ಐದು ವರ್ಷಗಳನ್ನು ಮೀಸಲಿಟ್ಟಿದ್ದೆ. ಈ ಸಮಯದಲ್ಲಿ ಬೇರೆ ಯಾವುದೇ ಹೊಸ ಚಿತ್ರಗಳನ್ನು ಒಪ್ಪಿಕೊಂಡಿರಲಿಲ್ಲ. ಈ ಚಿತ್ರಕ್ಕೆ ನನ್ನ ಸರ್ವಸ್ವವನ್ನೂ ನೀಡಿದ್ದೇನೆ. ಬೇರೆ ಯಾವುದಕ್ಕೂ ಸಮಯವನ್ನು ನೀಡಿರಲಿಲ್ಲ. ನಾನು ನಿಜವಾಗಿಯೂ ಪ್ರೀತಿಸಿದ ಚಿತ್ರ ಉಸಿರೇ ಉಸಿರೇ. ಪ್ರಯಾಣವು ಕಠಿಣವಾಗಿದ್ದರೂ ಚಿತ್ರದ ಔಟ್‌ಪುಟ್ ತೃಪ್ತಿ ತಂದಿದೆ. ಚಿತ್ರ ಉತ್ತಮ ರೀತಿಯಲ್ಲಿ ಮೂಡಿಬಂದಿದೆ ಎಂದು ರಾಜೀವ್ ಹನು ಹೇಳಿದ್ದಾರೆ.

ಇದು ನೈಜ ಕಥೆಯನ್ನು ಆಧರಿಸಿದ ಚಿತ್ರವಾಗಿದ್ದು, ಪ್ರತಿಯೊಬ್ಬರ ಹೃದಯವನ್ನು ಸ್ಪರ್ಶಿಸುವ ಕಥಾಹಂದರವನ್ನು ಹೊಂದಿದೆ. ಈ ಚಿತ್ರಕ್ಕೊಂದು ವಿಶಿಷ್ಟ ಕೋನವಿದೆ. ಅದು ಹಿಂದೂ-ಮುಸ್ಲಿಂ ಪ್ರೇಮಕಥೆಯಂತೆ ಕಂಡರೂ, ಕಥೆ ಹೆಚ್ಚು ಆಳವನ್ನು ಹೊಂದಿದೆ. ಸುದೀಪ್ ಅವರು ಚಿತ್ರದಲ್ಲಿ ವಿಶೇಷ ಪಾತ್ರದಲ್ಲಿ ನಟಿಸುವ ಮೂಲಕ ನಮಗೆ ಬೆಂಬಲ ನೀಡಿದ್ದಾರೆಂದು ತಿಳಿಸಿದ್ದಾರೆ.

ಉಸಿರೇ ಉಸಿರೇ ನನ್ನ ಚೊಚ್ಚಲ ಕನ್ನಡ ಚಿತ್ರ. ಪ್ರೀತಿ ಎಲ್ಲ ಧರ್ಮಗಳನ್ನು ಮೀರಿದ್ದು ಎಂಬ ಸಂದೇಶವನ್ನು ಸಾರುವ ಉತ್ತಮ ಕಥಾಹಂದರವನ್ನು ಚಿತ್ರ ಹೊಂದಿದೆ. ಚಿತ್ರದ ಭಾಗವಾಗಿದ್ದು ತುಂಬಾ ಸಂತೋಷ ತಂದಿದೆ. ಉತ್ತರ ಭಾರತದವನಾಗಿದ್ದರಿಂದ ನನ್ನ ಆಲೋಚನೆಗಳನ್ನು ಗ್ರಹಿಸುವುದು ಮತ್ತು ಚಿತ್ರಿಸುವುದು ಆರಂಭದಲ್ಲಿ ಸವಾಲಾಗಿತ್ತು. ಆದರೆ, ಚಿತ್ರರಂಗದ ಎಲ್ಲರ ಬೆಂಬಲದಿಂದ ಅದು ಸಾಧ್ಯವಾಯಿತು ಎಂದಿದ್ದಾರೆ.

ಚಿತ್ರದಲ್ಲಿ ದೇವರಾಜ್, ತಾರಾ, ಸುಚೇಂದ್ರ ಪ್ರಸಾದ್, ಬ್ರಹ್ಮ, ಅಲಿ, ಸಾಧು ಕೋಕಿಲ, ಮಂಜು ಪಾವಗಡ, ಶೈನ್ ಶೆಟ್ಟಿ ಮತ್ತು ಸೀತಾರಾಮ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಪ್ರದೀಪ್ ಯಾದವ್ ನಿರ್ಮಾಣದ ಈ ಚಿತ್ರಕ್ಕೆ ಸಿಎಂ ವಿಜಯ್ ಕಥೆ ಬರೆದು ನಿರ್ದೇಶಿಸಿದ್ದಾರೆ, ವಿವೇಕ್ ಚಕ್ರವರ್ತಿ ಸಂಗೀತ ಸಂಯೋಜನೆ ಮತ್ತು ಮನು ಬಿಕೆ ಅವರ ಛಾಯಾಗ್ರಹಣ ಚಿತ್ರಕ್ಕಿದೆ.

# ಅಪ್ಪ-ಮಗನ ಬಾಂಧವ್ಯದ 'ಫಾದರ್'





# ಕೃಷ್ಣನಿಗೆ ಅಮೃತಾ ಅಯ್ಯಂಗಾರ್ ಜೋಡಿ

ಆರ್ ಚಂದ್ರು ಒಡೆತನದ ಆರ್ ಸಿ ಸ್ಟುಡಿಯೋಸ್ ಬ್ಯಾನರ್ ನಲ್ಲಿ ನಿರ್ಮಾಣವಾಗುತ್ತಿರುವ 'ಫಾದರ್' ಫ್ಯಾನ್ ಇಂಡಿಯಾ ಸಿನಿಮಾವನ್ನು ರಾಜ್ ಮೋಹನ್ ನಿರ್ದೇಶಿಸುತ್ತಿದ್ದಾರೆ. ರಾಜಮೋಹನ್ ಅವರ ಕನ್ನಡದ ಚೊಚ್ಚಲ ನಿರ್ದೇಶನದ ಸಿನಿಮಾದಲ್ಲಿ, ಪ್ರಕಾಶ್ ರಾಜ್ ಮತ್ತು ಕೃಷ್ಣ ತಂದೆ-ಮಗ ಜೋಡಿಯಾಗಿ, ತೆಲುಗು ನಟ ಸುನೀಲ್ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಕೃಷ್ಣ ಚೊಚ್ಚಲ ನಿರ್ದೇಶನದ 'ಲವ್ ಮಾಕ್‌ಟೇಲ್' ನಲ್ಲಿನ ಜನಪ್ರಿಯ 'ಜೋ' ಪಾತ್ರವು ಅಮೃತಾಗೆ ಭಾರೀ ಹೆಸರು ತಂದು ಕೊಟ್ಟಿತು. ಹೀಗಾಗಿ ಈ ಕಾಂಬಿನೇಷನ್ ಅನ್ನು ಮತ್ತೆ ಬೆಳ್ಳಿತೆರೆಯಲ್ಲಿ ನೋಡಲು ಕುತೂಹಲ ಹೆಚ್ಚಿದೆ. ಚಿತ್ರದ ಮುಹೂರ್ತದ ದಿನದಂದು ಅಮೃತಾ ಚಿತ್ರತಂಡಕ್ಕೆ ಸೇರ್ಪಡೆಗೊಳ್ಳುವ ಬಗ್ಗೆ ಅಧಿಕೃತ ಘೋಷಣೆ ಮಾಡಲಾಗುವುದು. 'ಹನು-ಮಾನ್' ಚಿತ್ರದ ಸಂಗೀತ ನಿರ್ದೇಶಕ 'ಗೌರ ಹರಿ' ಕನ್ನಡಕ್ಕೆ ಪಾದಾರ್ಪಣೆ ಮಾಡುತ್ತಿದ್ದಾರೆ. ಇನ್ವೆನಿಯೊ ಒರಿಜಿನ್ ಕಂಪನಿಯ ಆರ್ ಚಂದ್ರು, ಅಲಂಕಾರ್ ಪಾಂಡಿಯನ್ ಮತ್ತು ಉದ್ಯಮಿ ಸೀಕಲ್ ರಾಮಚಂದ್ರ ಗೌಡ ಅವರ ಸಹಯೋಗದೊಂದಿಗೆ, 'ಫಾದರ್' ಸಿನಿಮಾ ಕೃಷ್ಣ ಮತ್ತು ಅಮೃತ ಅಯ್ಯಂಗಾರ್ ಇಬ್ಬರಿಗೂ ಮೊದಲ ಪ್ಯಾನ್ ಇಂಡಿಯಾ ಸಿನಿಮಾವಾಗಿದೆ. 'ಫಾದರ್' ಹೊರತಾಗಿ, 'ಪಿಒಕೆ', 'ಶ್ರೀ ರಾಮಬಾಣ ಚರಿತ', 'ಡಾಗ್', 'ಕಬ್ಜಾ 2' ಮತ್ತು ಶಿವರಾಜಕುಮಾರ್ ಅವರೊಂದಿಗಿನ ಮತ್ತೊಂದು ಸಿನಿಮಾ ಸೇರಿ ಇನ್ನೂ ಐದು ಪ್ರಾಜೆಕ್ಟ್ ಗಳು ಸಿದ್ಧವಾಗಿವೆ. ಸದ್ಯ ಕೃಷ್ಣ ಅವರು ತಮ್ಮ'ಹಲಗಲಿ' ಚಿತ್ರೀಕರಣದಲ್ಲಿ ನಿರತರಾಗಿದ್ದಾರೆ. ಅದರ ಜೊತೆಯಲ್ಲಿ 'ಫಾದರ್' ಚಿತ್ರೀಕರಣವನ್ನು ಪ್ರಾರಂಭಿಸುತ್ತಾರೆ. ಅಮೃತಾ ಅಯ್ಯಂಗಾರ್ ಬಗ್ಗೆ ಹೇಳುವುದಾದರೆ, ನಟ ಕೊನೆಯದಾಗಿ 'ಅಬ್ಬಬ್ಬಾ'ದಲ್ಲಿ ಕಾಣಿಸಿಕೊಂಡಿದ್ದರು. ಅವರು ಧನಂಜಯ್ ಮತ್ತು ಸತ್ಯದೇವ್ ಅಭಿನಯದ ಕನ್ನಡ ಮತ್ತು ತೆಲುಗಿನಲ್ಲಿ ಮಾಡಿದ ದ್ವಿಭಾಷಾ ಯೋಜನೆಯಾದ 'ಜೀಬ್ರಾ' ಚಿತ್ರೀಕರಣವನ್ನು ಸಹ ಪೂರ್ಣಗೊಳಿಸಿದ್ದಾರೆ.

# ಮಾಲಾಶ್ರೀ ನಟನೆಯ 'ಮಾರಕಾಸ್ತ್ರ' ತೆಲುಗು ಆವೃತ್ತಿ 'ಮರಣಾಯುಧಂ' ಈ ವಾರ ಬಿಡುಗಡೆ!

ಮಾಲಾಶ್ರೀ ಮುಖ್ಯಭೂಮಿಕೆಯ 'ಮಾರಕಾಸ್ತ್ರ' ಚಿತ್ರ ಕಳೆದ ವರ್ಷ ತೆರೆಕಂಡು ಕನ್ನಡಿಗರ ಮನ ಗೆದ್ದಿತ್ತು. ಇದೀಗ ಇದೇ ಚಿತ್ರ ತೆಲುಗಿನಲ್ಲೂ ನಿರ್ಮಾಣ ಆಗಿದ್ದು, 'ಮರಣಾಯುಧಂ' ಎಂದು ಶೀರ್ಷಿಕೆ ಇಡಲಾಗಿದೆ.

ಗುರುಮೂರ್ತಿ ಸುನಾಮಿ ನಿರ್ದೇಶನದ ಮತ್ತು ಕೋಮಲಾ ನಟರಾಜ ನಿರ್ಮಿಸಿದ ಮಾಲಾಶ್ರೀ ಅವರ ಆಕ್ಷನ್ ಸಿನಿಮಾ 'ಮಾರಕಾಸ್ತ್ರ' ಕಳೆದ ವರ್ಷ ಬಿಡುಗಡೆಯಾಯಿತು, ಆದರೆ ಗಲ್ಲಾಪೆಟ್ಟಿಗೆಯಲ್ಲಿ ಮಿಶ್ರ ಪ್ರತಿಕ್ರಿಯೆಗಳನ್ನು ಪಡೆಯಿತು. ನಿರ್ದೇಶಕರು ಇದನ್ನು ತೆಲುಗಿನಲ್ಲಿ 'ಮರಣಾಯುಧಂ' ಎಂದು ಡಬ್ ಮಾಡಿ ಏಪ್ರಿಲ್ 19 ರಂದು ಬಿಡುಗಡೆ ಮಾಡಿದ್ದಾರೆ. ಸುಮಾರು 26 ನಿಮಿಷಗಳ ದೃಶ್ಯಗಳಿಗೆ ಕತ್ತರಿ ಹಾಕಿದ ನಂತರ, ಚಿತ್ರವು ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ತೆರೆ ಕಂಡಿದೆ.

ಎಡಿಟ್ ಮಾಡಿದ ಕನ್ನಡ ಆವೃತ್ತಿಯನ್ನು ಏಪ್ರಿಲ್ 26 ರಂದು ಕರ್ನಾಟಕ ಮತ್ತು ತೆಲಂಗಾಣದಲ್ಲಿ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಮಾಲಾಶ್ರೀ ಜೊತೆಗೆ ಚಿತ್ರದಲ್ಲಿ ಆನಂದ್ ಆರ್ಯ, ಹರ್ಷಿಕಾ ಪೂಣಚ್ಚ, 'ಉಗ್ರಂ' ಮಂಜು, ನಟರಾಜ್, ಅಯ್ಯಪ್ಪ ಪಿ ಶರ್ಮಾ ಮುಂತಾದವರು ನಟಿಸಿದ್ದಾರೆ.

ಮಾರಕಾಸ್ತ್ರ ಚಿತ್ರವನ್ನು ಕಳೆದ ವರ್ಷ ಬಿಡುಗಡೆ ಮಾಡಿದ್ದೆವು. ಆ ಸಮಯದಲ್ಲಿ ಭಾರತ-ಪಾಕ್ ಮ್ಯಾಚ್, ಹಬ್ಬಗಳು ಬಂದವು. ಹಾಗಾಗಿ ಹೆಚ್ಚಿನ ವೀಕ್ಷಕರಿಗೆ ನಮ್ಮ ಸಿನಿಮಾ ನೋಡಲು ಆಗಲಿಲ್ಲ. ಆದರೆ ಚಿತ್ರ ನೋಡಿದ ತೆಲುಗು ವಿತರಕರಾದ ವೆಂಕಟೇಶ್ ರಾವ್ ಅವರು ಈ ಚಿತ್ರವನ್ನು ತೆಲುಗಿನಲ್ಲಿ ನಿರ್ಮಾಣ ಮಾಡಿ ಎಂದರು. ಮಾರಕಾಸ್ತ್ರ ಈಗ ಮಾರಣಾಯುಧಂ ಎಂಬ ಹೆಸರಿನಿಂದ ಇದೇ ಏಪ್ರಿಲ್ 26 ರಂದು ಕರ್ನಾಟಕದಲ್ಲಿ ಬಿಡುಗಡೆಯಾಗಲಿದೆ. ಇದೇ ಶನಿವಾರ 27ರಂದು ಪೌರ ಕಾರ್ಮಿಕರು ಸೇರಿದಂತೆ ಅನೇಕ ಶ್ರಮಿಕ ವರ್ಗದವರಿಗೆ ಒಂದು ಉಚಿತ ಪ್ರದರ್ಶನದ ವ್ಯವಸ್ಥೆ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಆರಂಭದಲ್ಲಿ ಸಿನಿಮಾ ಮಾಡಲು ಮಾಲಾಶ್ರೀ ಹಿಂಜರಿದರು. ಅಂತಿಮವಾಗಿ ಸಿನಿಮಾ ಮಾಡಲು ಒಪ್ಪಿಕೊಂಡರು, ನಿರ್ದೇಶಕರ ಉತ್ಸಾಹವನ್ನು ಹೊಗಳಿದ ಅವರು ಎಲ್ಲರೂ ಸಿನಿಮಾ ನೋಡುವಂತೆ ಮನವಿ ಮಾಡಿದರು.




## ಮುಂಬೈನ ಪಂ.ಸುಧೀರ್ ನಾಯಕ್ ಹಾರ್ಮೋನಿಯಂ ಸೋಲೋ ಕಾರ್ಯಕ್ರಮ

**ಮೈಸೂರು:** 'ನಿನಾದ ಗೃಹ ಸಂಗೀತ' ಸರಣಿಯ 14ನೆಯ ಕಾರ್ಯಕ್ರಮ ಏಪ್ರಿಲ್ 27ರಂದು ಸಂಜೆ 6ಗಂಟೆಗೆ ಕೇರ್ಗಳ್ಳಿಯ 'ನಿನಾದ'ದಲ್ಲಿ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಮುಂಬೈನ ಪಂ.ಸುಧೀರ್ ನಾಯಕ್ ಅವರು ಹಾರ್ಮೋನಿಯಂ ಸೋಲೋ ನಡೆಸಿಕೊಡಲಿದ್ದಾರೆ. ಪಂ.ಸುಧೀರ್ ನಾಯಕ್ ಅವರು ಅಂತರಾಷ್ಟ್ರೀಯ ಖ್ಯಾತಿಯ ಕಲಾವಿದರು. ದೇಶ-ವಿದೇಶ ದ ಎಲ್ಲಾ ಪ್ರತಿಷ್ಠಿತ ಸಂಗೀತ ಕಾರ್ಯಕ್ರಮಗಳಲ್ಲಿ ಚಿರಪರಿಚಿತ ಹೆಸರು. ಪ್ರಸಿದ್ಧ ಹಾರ್ಮೋನಿಯಂ ವಾದಕ ಪಂ.ತುಲಸಿದಾಸ ಬೋರ್‌ಕರ್ ಅವರ ಪ್ರಮುಖ ಶಿಷ್ಯರು. ಸುಪ್ರಸಿದ್ಧ ಗಾಯಕ, ಸಂಯೋಜಕ ಪಂ.ಜಿತೇಂದ್ರ ಅಭಿಶೇಕಿ ಅವರ ಬಳಿಯೂ ಹೆಚ್ಚಿನ ತರಬೇತಿ ಪಡೆದಿದ್ದಾರೆ. ಚಿಕ್ಕ ವಯಸ್ಸಿನಿಂದಲೇ ಪಂ.ಭೀಮಸೇನ ಜೋಶಿ, ಪಂ.ಜಿತೇಂದ್ರ ಅಭಿಷೇಕಿ, ಫಿರೋಜ್ ದಸ್ತೂರ್, ರಾಮಾಶ್ರೇಯ ಝಾ, ಗಂಗೂಬಾಯಿ ಹಾನಗಲ್, ಬಿರ್ಜು ಮಹಾರಾಜ್ ಮುಂತಾದ ದಿಗ್ಗಜರೊಂದಿಗೆ ಸಾಥ್ ಮಾಡಿದ ಹಿರಿಮೆ ಸುಧೀರ್ ಅವರದ್ದು. ಸಮಕಾಲೀನ ಸಂಗೀತಗಾರರಾದ ಶುಭಾ ಮುದ್ಗಲ್, ಅನೀಶ್ ಪ್ರಧಾನ್, ಅಶ್ವಿನಿ ಭಿಡೆ, ದೇವಕಿ ಪಂಡಿತ್ ಇವರುಗಳೊಂದಿಗೆ ಒಡನಾಡಿದ್ದಾರೆ. ಯುಎಸ್‌ಎ, ಯುಕೆ, ಕೆನಡಾ, ಮೆಕ್ಸಿಕೊ, ಯುರೋಪ್, ಆಸ್ಟ್ರೇಲಿಯಾ ಮುಂತಾದ ಹಲವೆಡೆ ಮತ್ತು ಭಾರತದಾದ್ಯಂತ ಸೋಲೋ ವಾದನ ನೀಡಿದ್ದಾರೆ. ಅಮೆರಿಕಾದ ಪಿಟ್ಸಬರ್ಗ್ ವಿಶ್ವವಿದ್ಯಾಲಯದಲ್ಲಿ ಉಪನ್ಯಾಸಕ್ಕಾಗಿ ಇವರು ಆಹ್ವಾನಿಸಲ್ಪಟ್ಟಿದ್ದಾರೆ. ಇನ್ನಿತರ ಹಲವು ವಿಶ್ವವಿದ್ಯಾಲಯಗಳಲ್ಲಿ, ಸಂಸ್ಥೆಗಳಲ್ಲಿ ಸಂಗೀತದ ಬಗ್ಗೆ ಸೋದಾಹರಣ ಉಪನ್ಯಾಸ, ಸಂವಾದಗಳನ್ನು ನಡೆಸಿಕೊಟ್ಟಿದ್ದಾರೆ. ಸುಧೀರ್ ಅವರು ಅನೇಕ ಸಂಗೀತ್ ಪ್ರಾಜೆಕ್ಟ್‌ಗಳಿಗೆ ಸಂಯೋಜನೆ ಮಾಡಿದ್ದಾರೆ. ಅವರು ಸಾಂಸ್ಕೃತಿಕ ವಿನಿಮಯದ ಭಾಗವಾದ 'ಖೋಶಿಶ್' ತಂಡದಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಾರೆ. ಹಾರ್ಮೋನಿಯಂ ವಾದ್ಯದ ಕುರಿತ ಅಧ್ಯಯನ ಮತ್ತು ಅದರ ಅಭಿವೃದ್ಧಿ ಬಗ್ಗೆ ಸದಾ ಉತ್ಸುಕರಾಗಿರುವ ಸುಧೀರ್ ಅವರು ಹಾರ್ಮೋನಿಯಂ ಕುರಿತ ಕಾರ್ಯಾಗಾರ, ವಿಚಾರ ಗೋಷ್ಠಿಗಳನ್ನು ಆಯೋಜಿಸುತ್ತಾರೆ. ಅಂತರರಾಷ್ಟ್ರೀಯ ಸಂಗೀತ ಉತ್ಸವವಾದ 'ಗಾಜಾ ಬಾಜಾ'ದ ಆಯೋಕರಲ್ಲೊಬ್ಬರು.ನಿನಾದ ಗೃಹ ಸಂಗೀತದ ಕಾರ್ಯಕ್ರಮ'ದಲ್ಲಿ ಪಂ.ಸುಧೀರ್ ನಾಯಕ್ ಅವರಿಗೆ ತಬಲಾದಲ್ಲಿ ಕುಂದಾಪುರದವರಾದ ಪ್ರತಿಭಾವಂತ ಕಲಾವಿದ ಶ್ರೀ ವಿಘ್ನೇಶ್ ಕಾಮತ್ ಸಹಕರಿಸಲಿದ್ದಾರೆ.

## ಬೇಕರಿ ಟೆಕ್ನಾಲಜಿ ಸರ್ಟಿಫಿಕೇಟ್ ಕೋರ್ಸ್‌ಗೆ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆ ವಿಸ್ತರಣಾ ನಿರ್ದೇಶನಾಲಯದ ವತಿಯಿಂದ ಹದಿನಾಲ್ಕು ವಾರದ ಬೇಕರಿ ಟೆಕ್ನಾಲಜಿ ಸರ್ಟಿಫಿಕೇಟ್ ಕೋರ್ಸ್‌ಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಕನಿಷ್ಟ ಎಸ್.ಎಸ್.ಎಲ್.ಸಿ. ಪಾಸ್/ಫೇಲ್ ಆಗಿರಬೇಕು. ನಿಗಧಿತ ಅರ್ಜಿ ಫಾರಂಗಳನ್ನು ರೂಪಾಯಿ 10/- ಸಂದಾಯಿಸಿ, ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆ, ಕೃಷಿ ವಿಶ್ವ ವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು-560065, ಇಲ್ಲಿಂದ ಪಡೆದುಕೊಳ್ಳಬಹುದು ಹಾಗೂ ಭರ್ತಿಮಾಡಿದ ಅರ್ಜಿಯನ್ನು ಸಲ್ಲಿಸಲು ಏಪ್ರಿಲ್ 28 ಅಪರಾಹ್ನ 4.00 ಘಂಟೆಯೊಳಗೆ, ಸಂಯೋಜಕರು ಮತ್ತು ಮುಖ್ಯಸ್ಥರು, ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು-560065 ಈ ವಿಳಾಸಕ್ಕೆ ತಲುಪಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಂಯೋಜಕರು ಮತ್ತು ಮುಖ್ಯಸ್ಥರು, ಬೇಕಿಂಗ್ ತಂತ್ರಜ್ಞಾನ ಮತ್ತು ಮೌಲ್ಯವರ್ಧನಾ ಸಂಸ್ಥೆ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು-560065 ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080-23513370 ನ್ನು ಸಂಪರ್ಕಿಸಬಹುದಾಗಿದೆ.

### ಸುಳ್ಳು ಚುನಾವಣಾ ಅಫಿಡವಿಟ್ ಪ್ರಕರಣ | ಕೆಳ ಹಂತದ ಕೋರ್ಟ್ ವಿಧಿಸಿದ್ದ ಜೈಲು ಶಿಕ್ಷೆ ರದ್ದು!

# ಶಾಸಕ ಉದಯ್ ಗರುಡಾಚಾರ್‌ಗೆ ಬಿಗ್ ರಿಲೀಫ್

**ಬೆಂಗಳೂರು:** ಸುಳ್ಳು ಚುನಾವಣಾ ಅಫಿಡವಿಟ್ ಸಲ್ಲಿಸಿದ ಆರೋಪದ ಮೇಲೆ ಚಿಕ್ಕಪೇಟೆ ಶಾಸಕ ಬಿ ಜಿ ಉದಯ್ ಗರುಡಾಚಾರ್‌ಗೆ ಎರಡು ತಿಂಗಳು ಸಾಧಾರಣಾ ಜೈಲು ಶಿಕ್ಷೆ ಹಾಗೂ 10 ಸಾವಿರ ರೂಪಾಯಿ ದಂಡ ವಿಧಿಸಿ ವಿಚಾರಣಾಧೀನ ನ್ಯಾಯಾಲಯ ಮಾಡಿದ್ದ ಆದೇಶವನ್ನು ಹೈಕೋರ್ಟ್ ರದ್ದುಪಡಿಸಿದೆ.

ವಿಚಾರಣಾಧೀನ ನ್ಯಾಯಾಲಯಗಳ ಆದೇಶ ಪ್ರಶ್ನಿಸಿ ಬಿ ಜಿ ಉದಯ್ ಗರುಡಾಚಾರ್ ಸಲ್ಲಿಸಿದ್ದ ಕ್ರಿಮಿನಲ್ ಮರು ಪರಿಶೀಲನಾ ಅರ್ಜಿಯನ್ನು ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಅವರ ಏಕ ಸದಸ್ಯ ಪೀಠ ಪುರಸ್ಕರಿಸಿದೆ.

ಅಪರಾಧ ಪ್ರಕರಣ ಸಂಬಂಧ ದೋಷಾರೋಪ ಹೊರಿಸಿದ ಮತ್ತು ಆ ಸಂಬಂಧ ನ್ಯಾಯಾಲಯವು ಸಂಜ್ಞೇ ತೆಗೆದುಕೊಂಡ ಸಂದರ್ಭದಲ್ಲಿ ತಮ್ಮ ಮೇಲಿನ ಆರೋಪಗಳ ಕುರಿತ ಮಾಹಿತಿಯನ್ನು ಚುನಾವಣಾ ಕಣದಲ್ಲಿರುವ ಅಭ್ಯರ್ಥಿಯು ತಿಳಿಸಬೇಕಾಗುತ್ತದೆ. ಆ ಆರೋಪಗಳನ್ನು ಪರಿಗಣಿಸಬೇಕಾಗುತ್ತದೆ. ಆಗ ಅವರನ್ನು ಕ್ರಿಮಿನಲ್ ಪ್ರಕರಣದಲ್ಲಿ ಆರೋಪಿ ಎಂಬುದಾಗಿ ವ್ಯಾಖ್ಯಾನಿಸಬಹುದಾಗಿದೆ. ಎಫ್‌ಐಆರ್ ಅಥವಾ ಖಾಸಗಿ ದೂರು ದಾಖಲಾದ ಮಾತ್ರಕ್ಕೆ ಆರೋಪಿಯಾಗಿ ದೃಢಪಟ್ಟು, ಚುನಾವಣಾ ಪ್ರಮಾಣಪತ್ರದಲ್ಲಿ ಪ್ರಕರಣದ ಮಾಹಿತಿ ನೀಡಬೇಕು ಎಂದರ್ಥವಲ್ಲ ಎಂದು ಪೀಠ ಹೇಳಿದೆ.





ಪ್ರಕರಣದಲ್ಲಿ ಅರ್ಜಿದಾರರ ವಿರುದ್ಧ ಪ್ರಕರಣವೊಂದರ ಸಂಬಂಧ ದೂರು ದಾಖಲಾಗಿತ್ತು. ಆದರೆ, ನಾಮಪತ್ರ ಸಲ್ಲಿಕೆಯ ಸಂದರ್ಭದಲ್ಲಿ ಆ ದೂರಿನ ಸಂಬಂಧ ಅರ್ಜಿದಾರರ ವಿರುದ್ಧ ದೋಷಾರೋಪಣೆ ಹೊರಿಸಲಾಗಿರಲಿಲ್ಲ. ವಿಚಾರಣಾಧೀನ ನ್ಯಾಯಾಲಯ ಸಂಜ್ಞೇ ತೆಗೆದುಕೊಂಡಿರಲಿಲ್ಲ. ಹೀಗಿದ್ದರೂ ಚುನಾವಣೆಗೆ ಸಲ್ಲಿಸಿದ ಪ್ರಮಾಣಪತ್ರದಲ್ಲಿ ಅರ್ಜಿದಾರರು ತಮ್ಮ ಮೇಲಿನ ಕ್ರಿಮಿನಲ್ ಪ್ರಕರಣದ ಮಾಹಿತಿ ಮರೆ ಮಾಚಿದ್ದಾರೆ ಎಂದು ಹೇಳಿ ಅವರನ್ನು ದೋಷಿಯಾಗಿ ಪರಿಗಣಿಸಿದ ಹಾಗೂ ಶಿಕ್ಷೆ ವಿಧಿಸಿದ್ದ ವಿಚಾರಣಾ ನ್ಯಾಯಾಲಯಗಳ ಕ್ರಮ ಸರಿಯಲ್ಲ ಎಂದು ಹೈಕೋರ್ಟ್ ಹೇಳಿದೆ.

ಪ್ರಕರಣದಲ್ಲಿ ಅವರಿಗೆ ಸಂಪೂರ್ಣವಾಗಿ ಕ್ಲೀನ್ ಚಿಟ್ ನೀಡಬೇಕಿದೆ. ಈ ಕ್ರಿಮಿನಲ್ ಪ್ರಕರಣಕ್ಕೆ ಸಂಬಂಧಿಸಿದ ಪ್ರಕ್ರಿಯೆಯಿಂದ ಅರ್ಜಿದಾರರು ಸಾಕಷ್ಟು ಯಾತನೆ, ಕಷ್ಟ ಅನುಭವಿಸಿದ್ದಾರೆ ಎಂದು ಹೇಳಿರುವ ಪೀಠವು ವಿಚಾರಣಾಧೀನ ನ್ಯಾಯಾಲಯದ ತೀರ್ಪನ್ನು ರದ್ದುಪಡಿಸಿದೆ. ಜೊತೆಗೆ ಆ ತೀರ್ಪು ಪ್ರಕಟವಾದ ನಂತರ ಅರ್ಜಿದಾರರು ದಂಡ ಮೊತ್ತವನ್ನು ಪಾವತಿ ಮಾಡಿದ್ದರೆ, ಅದನ್ನು ಕೂಡಲೇ ಹಿಂದಿರುಗಿಸಬೇಕು ಎಂದು ವಿಚಾರಣಾಧೀನ ನ್ಯಾಯಾಲಯಕ್ಕೆ ಆದೇಶಿಸಿದೆ.

ಶಾಸಕ ಉದಯ್ ಗರುಡಾಚಾರ್ 2018 ರ ವಿಧಾನಸಭೆ ಚುನಾವಣೆಯಲ್ಲಿ ಚಿಕ್ಕಪೇಟೆ ಕ್ಷೇತ್ರದಿಂದ ಸ್ಪರ್ಧಿಸಿದ್ದಾಗ ಚುನಾವಣಾ ಆಯೋಗಕ್ಕೆ ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ತಮ್ಮ ವಿರುದ್ಧದ ಕ್ರಿಮಿನಲ್ ಪ್ರಕರಣ ಹಾಗೂ ಪತ್ನಿಯ ಬ್ಯಾಂಕ್ ವಿವರಗಳನ್ನು ಬಹಿರಂಗ ಪಡಿಸಿಲ್ಲ ಎಂದು ಆರೋಪಿಸಿ ಎಚ್ ಜಿ ಪ್ರಶಾಂತ್ ಎಂಬುವರು ಅರ್ಜಿ ಸಲ್ಲಿಸಿದ್ದರು. ಅದರ ವಿಚಾರಣೆ ನಡೆಸಿದ್ದ ನಗರದ 42ನೇ ಎಸಿಎಂಎಂ (ಜನ ಪ್ರತಿನಿಧಿಗಳ ವಿಶೇಷ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಪ್ರಜಾಪ್ರತಿನಿಧಿ ಕಾಯಿದೆ ಅಡಿಯಲ್ಲಿ ಎರಡು ತಿಂಗಳ ಸಾಧಾರಣ ಜೈಲು ಶಿಕ್ಷೆ ಮತ್ತು 10 ಸಾವಿರ ರೂಪಾಯಿ ದಂಡ ವಿಧಿಸಿ 2022ರ ಅಕ್ಟೋಬರ್ 13ರಂದು ತೀರ್ಪು ನೀಡಿತ್ತು.

ಆ ಆದೇಶವನ್ನು ಪುರಸ್ಕರಿಸಿ 2023ರ ಸೆಪ್ಟೆಂಬರ್ 11ರಂದು ಜನಪ್ರತಿನಿಧಿಗಳ ವಿಶೇಷ ಸತ್ರ ನ್ಯಾಯಾಲಯ ತೀರ್ಪು ನೀಡಿತ್ತು. ಈ ಎರಡು ಆದೇಶಗಳನ್ನು ರದ್ದುಪಡಿಸುವಂತೆ ಕೋರಿ ಉದಯ ಗರುಡಚಾರ್ ಅವರು ಹೈಕೋರ್ಟ್‌ಗೆ ಕ್ರಿಮಿನಲ್ ಮರುಪರಿಶೀಲನಾ ಅರ್ಜಿ ಸಲ್ಲಿಸಿದ್ದರು.

### ಹೊಸ ದಾಖಲೆ ಬರೆದ ಕೆಎಂಎಫ್

# ಒಂದೇ ದಿನ 51 ಲಕ್ಷ ಲೀಟರ್ ಹಾಲು ಮಾರಾಟ




**ಬೆಂಗಳೂರು:** ತಾಪಮಾನ ಹೆಚ್ಚಳದಿಂದ ಬಸವಳಿದ ಜನ ಹಾಲು, ಮೊಸರು, ಐಸ್ ಕ್ರೀಮ್ ಬಳಕೆಯನ್ನು ಹೆಚ್ಚಳ ಮಾಡಿದ್ದು, ಇದರ ಪರಿಣಾಮ ಕರ್ನಾಟಕ ಹಾಲು ಒಕ್ಕೂಟ (ಕೆಎಂಎಫ್) ಹಾಲು, ಮೊಸರು ಮಾರಾಟದಲ್ಲಿ ಹೊಸ ದಾಖಲೆ ಬರೆದಿದೆ.

ಕೆಎಂಎಫ್ ಒಂದೇ ದಿನ 51 ಲಕ್ಷ ಲೀಟರ್ ನಂದಿನಿ ಹಾಲು ಮತ್ತು 16.5 ಲಕ್ಷ ಲೀಟರ್ ಮೊಸರನ್ನು ಮಾರಾಟ ಮಾಡುವ ಮೂಲಕ ತನ್ನದೇ ದಾಖಲೆಯನ್ನು ಮುರಿದಿದೆ. ಇದರ ಜೊತೆಗೆ ಐಸ್ ಕ್ರೀಮ್ ಮಾರಾಟದಲ್ಲಿ ಕೂಡ ಭಾರೀ ಏರಿಕೆಯಾಗಿರುವುದು ಕಂಡು ಬಂದಿದೆ.

ಏಪ್ರಿಲ್ ಸಮಯದಲ್ಲಿ ಏಪ್ರಿಲ್ 9 ಮತ್ತು 15 ರ ನಡುವೆ - ಯುಗಾದಿ, ರಾಮ ನವಮಿ ಮತ್ತು ಈದ್-ಉಲ್-ಫಿತರ್‌ನಂತಹ ಹಬ್ಬಗಳು ಒಂದರ ನಂತರ ಒಂದರಂತೆ ಬಂದಿದ್ದು, ಹಾಲು ಮೊಸರಿನ ಮಾರಾಟ ಹೆಚ್ಚಳಕ್ಕೆ ಇದೂ ಒಂದು ಕಾರಣವಾಗಿದೆ ಎಂದು ಕೆಎಂಎಫ್‌ನ ವ್ಯವಸ್ಥಾಪಕ ನಿರ್ದೇಶಕ ಎಂ.ಕೆ. ಜಗದೀಶ್ ಹೇಳಿದ್ದಾರೆ.

ಈ ಬಾರಿ ಮೊಸರು ತಯಾರಿಕೆಯಲ್ಲಿ ಸುಧಾರಣೆಗಳನ್ನು ಮಾಡಿದ್ದೇವೆ. ಇದರಿಂದ ಮೊಸರು ಮಾರಾಟದಲ್ಲಿ ಭಾರಿ ಹೆಚ್ಚಳವಾಗುತ್ತಿರುವುದು ಕಂಡು ಬಂದಿದೆ. ದಿನಕ್ಕೆ ಎರಡು ಬಾರಿ ಉತ್ಪನ್ನಗಳನ್ನು ಪೂರೈಸುತ್ತಿದ್ದೇವೆ. ಕೆಲವು ಪ್ರದೇಶಗಳಲ್ಲಿ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಮೂರು ಬಾರಿ ಉತ್ಪನ್ನಗಳನ್ನು ಪೂರೈಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಹೆಚ್ಚುತ್ತಿರುವ ತಾಪಮಾನವನ್ನು ಗಮನದಲ್ಲಿಟ್ಟುಕೊಂಡು ಪೂರೈಕೆ-ಸರಪಳಿಯಲ್ಲಿ ಸುಧಾರಣೆಗಳನ್ನು ಮಾಡಲಾಗಿದೆ. ರಾಜ್ಯದಲ್ಲಿ ಕೋಲ್ಡ್ ಸ್ಟೋರೇಜ್‌ಗಳ ಕಾರ್ಯನಿರ್ವಹಣೆ ಮತ್ತು ನಿರ್ವಹಣೆಯನ್ನು ಹೆಚ್ಚಿಸಲಾಗಿದೆ ಎಂದು ಹೇಳಿದ್ದಾರೆ. ಈ ಮೊದಲು ನಂದಿನಿ ಹಾಲು ಮಾರಾಟ 44 ಲಕ್ಷ ಲೀಟರ್ ದಾಟಿರಲಿಲ್ಲ. ಆದರೆ, ಈ ವರ್ಷ ಒಂದೇ ದಿನ 48 ಲಕ್ಷ ಲೀಟರ್ ಮಾರಾಟವಾಗಿದೆ. ಮೊಸರು ಮತ್ತು ಮಜ್ಜಿಗೆ ಕೂಡ ಇದೇ ರೀತಿ ಮಾರಾಟವಾಗುತ್ತಿದೆ.. ದಿನಕ್ಕೆ 8 ರಿಂದ 8.5 ಲಕ್ಷ ಲೀಟರ್‌ಗಳ ನಡುವೆ ಮಾರಾಟವಾಗುತ್ತಿತ್ತು. ಈ ಬಾರಿ ಅದು ದ್ವಿಗುಣವಾಗಿದೆ.ಮೊಸರು ಮಾರಾಟದಲ್ಲಿ ಎರಡು ಮೈಲಿಗಲ್ಲುಗಳನ್ನು ಮುಟ್ಟಿದ್ದೇವೆ. ಮೊದಲ ವಾರದಲ್ಲಿ 11.5 ಲಕ್ಷ ಲೀಟರ್ ಮಾರಾಟವಾಗಿತ್ತು. ನಂತರ ಐದು ದಿನಗಳಲ್ಲಿ, ಇದು 16.5 ಲಕ್ಷ ಲೀಟರ್‌ಗೆ ಏರಿಕೆಯಾಯಿತು. ಜನರ ನಂದಿನಿಗೆ ಮೊದಲ ಆದ್ಯತೆ ನೀಡುತ್ತಿದ್ದಾರೆಂದು ಜಗದೀಶ್ ಹೇಳಿದ್ದಾರೆ.

ನಂದಿನಿ ಐಸ್‌ಕ್ರೀಂ ಮಾರಾಟದಲ್ಲಿ ಕೂಡ ಭಾರಿ ಹೆಚ್ಚಳವಾಗಿದೆ. ಈ ವರ್ಷ ಐಸ್‌ಕ್ರೀಮ್ ಮಾರಾಟದಲ್ಲಿ ಶೇ.40 ಹೆಚ್ಚಳ ಕಂಡು ಬಂದಿದೆ. ಫೆಬ್ರವರಿಯಲ್ಲೇ ರಾಜ್ಯದಲ್ಲಿ ತಾಪಮಾನ ಹೆಚ್ಚಿದ್ದ ಕಾರಣ, ಹೆಚ್ಚುವ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಪೂರೈಕೆಗೆ ಸಿದ್ಧರಾಗಿದ್ದೆವು. ಮಾರಾಟ ಹೆಚ್ಚಳದೊಂದಿಗೆ ಈ ವರ್ಷದ ತ್ರೈಮಾಸಿಕದಲ್ಲಿ ಉತ್ತಮ ಆದಾಯದ ನಿರೀಕ್ಷೆಯಲ್ಲಿದ್ದೇವೆ. ಶೀಘ್ರದಲ್ಲೇ ಬೇಸಿಗೆಯ ವಿಶೇಷ ಪಾನೀಯಗಳನ್ನು ಮಾರುಕಟ್ಟೆಗೆ ತರಲು ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆಂದು ಹೇಳಿದ್ದಾರೆ.

# ಪಿಯು ರಸಾಯನಶಾಸ್ತ್ರ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ: ಎಲ್ಲಾ ಆರೋಪಿಗಳು ಖುಲಾಸೆ

**ಬೆಂಗಳೂರು**: ರಾಜ್ಯದಲ್ಲಿ ತೀವ್ರ ಸಂಚಲನ ಮೂಡಿಸಿದ್ದ 2015-16ನೇ ಸಾಲಿನ ದ್ವಿತೀಯ ಪಿಯು ಪರೀಕ್ಷೆಯ ರಸಾಯನಶಾಸ್ತ್ರ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ಎಲ್ಲಾ 15 ಆರೋಪಿಗಳನ್ನು ಖುಲಾಸೆಗೊಳಿಸಿ ಬೆಂಗಳೂರು ನಗರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ.

ಪ್ರಕರಣ ಸಂಬಂಧ ಸುಧೀರ್ಘ ವಿಚಾರಣೆ ನಡೆಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಾಧೀಶರಾದ ಮುರಳೀಧರ ಪೈ ಗುರುವಾರ ಪ್ರಕಟಿಸಿದ್ದಾರೆ.

ಸಾಕ್ಷ್ಯಾಧಾರಗಳ ಕೊರತೆಯಿಂದ ಎಲ್ಲಾ ಆರೋಪಿಗಳನ್ನು ಖುಲಾಸೆಗೊಳಿಸಲಾಗಿದೆ ಎಂದು ತೀರ್ಪಿನಲ್ಲಿ ಹೇಳಲಾಗಿದೆ. ಆದೇಶದ ಪ್ರತಿ ಇನ್ನಷ್ಟೇ ಲಭ್ಯವಾಗಬೇಕಿದೆ. ಪ್ರಕರಣದಲ್ಲಿ ಒಟ್ಟು 19 ಮಂದಿ ಆರೋಪಿಗಳಿದ್ದರು. ಅವರ ಪೈಕಿ ವಿಚಾರಣೆ ಹಂತದಲ್ಲಿಯೇ ಆರೋಪಿಗಳಾಗಿದ್ದ ಓಬಳರಾಜು, ರುದ್ರಪ್ಪ ಮತ್ತು ರಂಗನಾಥ್ ಅವರ ವಿರುದ್ಧದ ಆರೋಪಗಳನ್ನು ಕೈ ಬಿಡಲಾಗಿತ್ತು. ಎರಡನೇ ಆರೋಪಿಯಾಗಿದ್ದ ಶಿವಕುಮಾರಯ್ಯ ಅಲಿಯಾಸ್ ಗುರೂಜಿ ವಿಚಾರಣಾ ಹಂತದಲ್ಲಿಯೇ ಸಾವನ್ನಪ್ಪಿದ್ದರು. ಹೀಗಾಗಿ, ಅವರ ವಿರುದ್ಧದ ಪ್ರಕರಣವನ್ನು ಮುಕ್ತಾಯಗೊಳಿಸಲಾಗಿತ್ತು. ಉಳಿದಂತೆ ಕುಮಾರಸ್ವಾಮಿ, ಈರಮಲ್ಲಯ್ಯ, ಸಂತೋಷ್ ಅಗಸಿಮನಿ, ಕೆ ಎಂ ಮುರಳೀಧರ ಮತ್ತು ಅನಿಲ್ ಕುಮಾರ್ ಸೇರಿದಂತೆ 15 ಮಂದಿ ಆರೋಪಿಗಳನ್ನು ಖುಲಾಸೆಗೊಳಿಸಿ ಗುರುವಾರ ತೀರ್ಪು ಪ್ರಕಟಿಸಲಾಗಿದೆ. ಪ್ರಕರಣದಲ್ಲಿ ಪ್ರಾಸಿಕ್ಯೂಷನ್ 126 ಸಾಕ್ಷ್ಯಗಳನ್ನು ವಿಚಾರಣೆಗೆ ಒಳಪಡಿಸಿತ್ತು. ಆರೋಪಿಗಳ ವಿರುದ್ಧ ಹಲವಾರು ದಾಖಲಾತಿಗಳನ್ನು ಹಾಜರು ಪಡಿಸಿತ್ತು. ಆದರೆ, ಆರೋಪಿಗಳ ಮೇಲಿನ ಆರೋಪಗಳನ್ನು ಸೂಕ್ತ ಸಾಕ್ಷ್ಯಾಧಾರಗಳ ಸಮೇತ ಸಾಬೀತುಪಡಿಸುವಲ್ಲಿ ತನಿಖಾಧಿಕಾರಿಗಳು ಮತ್ತು ಪ್ರಾಸಿಕ್ಯೂಷನ್ ವಿಫಲವಾಗಿದ್ದಾರೆ ಎಂದು ಆದೇಶದಲ್ಲಿ ಹೇಳಲಾಗಿದೆ.

ಅಲ್ಲದೆ, ಹಾನಗಲ್ ಉಪ ಖಜಾನೆಯಿಂದ ಪ್ರಶ್ನೆ ಪತ್ರಿಕೆಗಳು ಸೋರಿಕೆಯಾಗಿದ್ದವು ಎಂಬುದನ್ನು ಪ್ರಾಸಿಕ್ಯೂಷನ್ ಸಾಬೀತುಪಡಿಸಿಲ್ಲ. ಪ್ರಕರಣದಲ್ಲಿ ಪ್ರಮುಖ ಕಾಲೇಜುಗಳು ಭಾಗಿಯಾಗಿದ್ದವು. ಈ ಅಂಶದ ಬಗ್ಗೆ ಸಿಐಡಿ ಪೊಲೀಸರು ತನಿಖೆ ನಡೆಸಿಲ್ಲ. ಆರೋಪಿಗಳ ಸ್ವಇಚ್ಛೆ ಹೇಳಿಕೆಗಳು ಮತ್ತು ತಪ್ಪೊಪ್ಪಿಗೆ ಹೇಳಿಕೆಗಳು ಒಂದೇ ತೆರನಾಗಿವೆ. ತಪ್ಪೊಪ್ಪಿಗೆ ಹೇಳಿಕೆಗಳನ್ನು ತಿರುಚಲಾಗಿದೆ. 13 ಮಂದಿ ಸಹಾಯಕ ತನಿಖಾ ಅಧಿಕಾರಿಗಳು ತನಿಖೆಗೆ ಸಹಕರಿಸಿದ್ದಾರೆ. ಆದರೆ, ಅವರು ಸಮರ್ಪಕ ರೀತಿಯಲ್ಲಿ ಮುಖ್ಯ ತನಿಖಾಧಿಕಾರಿಗಳಿಗೆ ತನಿಖಾ ವರದಿ ಸಲ್ಲಿಸಿಲ್ಲ ಎಂದು ಆದೇಶದಲ್ಲಿ ತಿಳಿಸಲಾಗಿದೆ. ಆರೋಪಿಗಳ ಮೊಬೈಲ್ ಗೆ ಪ್ರಶ್ನೆ ಪತ್ರಿಕೆಗಳು ರವಾನೆಯಾದ ಮೂಲ ಹೇಳಲು ಎಫ್‌ಎಸ್‌ಎಲ್ ತಜ್ಞರಿಗೆ ಸಾಧ್ಯವಾಗಲಿಲ್ಲ. ಆರೋಪಿಗಳ ವಿರುದ್ಧ ಕೋಕಾ ಕಾಯಿದೆ ಹೂಡುವಲ್ಲಿ ಮತ್ತು ಕಾಯಿದೆ ಅಡಿ ತನಿಖೆ ನಡೆಸಲು ಅನುಮತಿ ನೀಡುವುದರಲ್ಲಿ ಸ್ವತಂತ್ರವಾಗಿ ವಿವೇಚನೆ ಬಳಕೆಯಾಗಿಲ್ಲ. ಈ ಎಲ್ಲಾ ಕಾರಣಗಳಿಂದ ಆರೋಪಿಗಳ ವಿರುದ್ಧ ಆರೋಪಗಳು ಸಾಬೀತಾಗಿಲ್ಲ ಎಂಬುದು ಸ್ಪಷ್ಟವಾಗುತ್ತಿದ್ದು, ಅವರುಗಳನ್ನು ಖುಲಾಸೆಗೊಳಿಸಲಾಗುತ್ತಿದೆ ಎಂದು ತೀರ್ಪಿನಲ್ಲಿ ಹೇಳಲಾಗಿದೆ. ಈ ಪ್ರಕರಣದಲ್ಲಿ ಪ್ರಮುಖ ಆರೋಪಿಗಳ ಪರ ವಕೀಲ ಆರ್ ಪಿ ಚಂದ್ರಶೇಖರ್ ವಾದ ಮಂಡಿಸಿದ್ದರು. 2015-16ರ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯು ವಾರ್ಷಿಕ ಪರೀಕ್ಷೆಯಲ್ಲಿ ರಸಾಯನಶಾಸ್ತ್ರ ವಿಭಾಗದ ಪರೀಕ್ಷೆ 2016 ಮಾರ್ಚ್ 21ರಂದು ನಡೆದಿತ್ತು. ಅಂದು ಬೆಳಿಗ್ಗೆ 7.29ಕ್ಕೆ ರಸಾಯನಶಾಸ್ತ್ರ ಪ್ರಶ್ನೆ ಪತ್ರಿಕೆ ವಾಟ್ಸ್ ಆಯಪ್ ಮೂಲಕ ಸೋರಿಕೆಯಾಗಿತ್ತು. ಈ ಸಂಬಂಧ ಮಲ್ಲೇಶ್ವರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ನಂತರ ಪ್ರಕರಣವು ಸಿಐಡಿಗೆ ವರ್ಗಾವಣೆಯಾಗಿತ್ತು. ತನಿಖೆ ನಡೆಸಿದ್ದ ಸಿಐಡಿ ಪೊಲೀಸರು ಒಟ್ಟು 19 ಮಂದಿ ಆರೋಪಿಗಳನ್ನು ಬಂಧಿಸಿದ್ದರು. ಕಳೆದ ಎಂಟು ವರ್ಷಗಳ ಸುದೀರ್ಘ ವಿಚಾರಣೆ ನಂತರ ಇದೀಗ ಎಲ್ಲ ಆರೋಪಿಗಳು ಖುಲಾಸೆಗೊಂಡಿದ್ದಾರೆ.

## ಮೂಲಭೂತಕ್ಕಾಗಿ ಮತದಾನ ಬಹಿಷ್ಕಾರ | ಲಾಠಿ ಪ್ರಹಾರ– ಕಲ್ಲು ತೂರಾಟದಿಂದ ತಹಸೀಲ್ದಾರ್, ಇನ್ಸ್‌ಪೆಕ್ಟರ್, ಚುನಾವಣಾಧಿಕಾರಿಗೆ ಪೆಟ್ಟು

# ರೊಚ್ಚಿಗೆದ್ದ ಪ್ರತಿಭಟನಾಕಾರರಿಂದ ಮತಗಟ್ಟೆ ಧ್ವಂಸ

**ಚಾಮರಾಜನಗರ/ಹನೂರು:** ಪವಾಡ ಪುರುಷ ಮಲೆ ಮಹದೇಶ್ವರ ನೆಲೆಸಿರುವ ಮಹದೇಶ್ವರ ಬೆಟ್ಟ ಸಮೀಪದ ಇಂಡಿಗನತ್ತ ಮೆಂದಾರೆ ಮತಗಟ್ಟೆ ಬಳಿ ಮತದಾನ ನಡೆಯುವ ಬದಲು ರಣರಂಗವಾಗಿ ಮಾರ್ಪಟ್ಟು ಮತಗಟ್ಟೆ ಸಂಪೂರ್ಣ ಧ್ವಂಸವಾಗಿದ್ದು, ಚುನಾವಣಾಧಿಕಾರಿ, ತಹಸೀಲ್ದಾರ್, ಪೊಲೀಸ್ ಇನ್ಸ್ ಪೆಕ್ಟರ್ ಗಾಯಗೊಂಡಿರುವ ಘಟನೆ ನಡೆದಿದೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಹದೇಶ್ವರ ಬೆಟ್ಟದ ಬಳಿ ಇರುವ ಇಂಡಿಗನತ್ತ ಮೆಂದಾರೆ ಗ್ರಾಮದ ಮತಗಟ್ಟೆಯೊಂದನ್ನು ಮತ ಬಹಿಷ್ಕಾರಕ್ಕೆ ಮುಂದಾಗಿದ್ದ ಪ್ರತಿಭಟನಾಕಾರರು ರೊಚ್ಚಿಗೆದ್ದು ಮತಯಂತ್ರವನ್ನು ಧ್ವಂಸ ಮಾಡಿದ ಘಟನೆ ನಡೆದಿದ್ದು, ಪ್ರತಿಭಟನಾಕಾರರ ಮೇಲೆ ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿದಾಗ ಪ್ರತಿಭಟನಾಕಾರರು ಕಲ್ಲು ತೂರಿದ ಘಟನೆಯಿಂದ ತಹಸೀಲ್ದಾರ್ ಗುರುಪ್ರಸಾದ್, ಇನ್ಸ್ ಪೆಕ್ಟರ್ ಜಗದೀಶ್ , ಚುನಾವಣಾಧಿಕಾರಿಗಳಿಗೆ ಪೆಟ್ಟಾಗಿದೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯ್ತಿ ಪರಿಮಿತಿಯ ಇಂಡಿಗನತ್ತ ಮೆಂದಾರೆ ಗ್ರಾಮದಲ್ಲಿ ವಾಸ ಮಾಡುವವರಗೆ ಮೂಲ ಭೂತ ಸೌಕರ್ಯ ಕಲ್ಪಿಸಲು ಸರ್ಕಾರವು ಮೀನಾಮೇಷ ಎಣಿಸುತ್ತಿದೆ, ಜಿಲ್ಲಾಡಳಿತವೂ ಸಹ ಈ ಬಗ್ಗೆ ಗಮನ ಹರಿಸುತ್ತಿಲ್ಲ ಎಂದು ಹಲವಾರು ಭಾರಿ ಪ್ರತಿಬಟನೆ ನಡೆಸಿದರೂ ಯಾವುದೇ ಪ್ರಯೋಜನಕ್ಕೆ ಬರದೇ ಇದ್ದಾಗ ಚುನಾವಣೆ ವೇಳೆ ಮತ ಬಹಿಷ್ಕಾರಕ್ಕೆ ನಿವಾಸಿಗಳು ನಿರ್ಧಾರ ಕೈಗೊಂಡಿದ್ದರು.

ಶುಕ್ರವಾರ ಮತದಾನಕ್ಕೆ ಇಂಡಿಗನತ್ತ ಗ್ರಾಮದ ಮತಗಟ್ಟೆ ಸಂಖ್ಯೆ 146 ರಲ್ಲಿ ಮತದಾನಕ್ಕೆ ಅಧಿಕಾರಿಗಳು ಸಿಬ್ಬಂದಿಗಳು ಪೊಲೀಸ್ ಬಂದೂಬಸ್ತ್ ನಲ್ಲಿ ಸಿದ್ದತೆ ಮಾಡಿಕೊಂಡಿದ್ದರು. ಮತಗಟ್ಟೆ ಬಳಿಯೇ ಮತ ಬಹಿಷ್ಕಾರ ಫಲಕಗಳನ್ನು ಹಿಡಿದು ಪ್ರತಿಭಟನೆಯೂ ನಡೆಯುತ್ತಿತ್ತು. ಮಧ್ಯಾಹ್ನವಾದರೂ ಮತ ಚಲಾವಣೆಯಾದ ಹಿನ್ನಲೆಯಲ್ಲಿ ಹನೂರು ತಾಲ್ಲೂಕು ತಹಸೀಲ್ದಾರ್ ಗುರುಪ್ರಸಾದ್, ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಾಹಕಾಧಿಕಾರಿ ಉಮೇಶ್ , ಮಹದೇಶ್ವರ ಬೆಟ್ಟ ಪೊಲೀಸ್ ಇನ್ಸ್ ಪೆಕ್ಟರ್ ಜಗದೀಶ್ ರವರುಗಳು ಮತದಾನಕ್ಕೆ ಸಹಕರಿಸುವಂತೆ ಪ್ರತಿಭಟನಾಕಾರರಲ್ಲಿ ಮನವಿ ಮಾಡಿದರು . ಅಧಿಕಾರಿಗಳ ಮನವಿಗೆ ಕಿವಿಕೊಡದೆ ಪ್ರತಿಭಟನೆ ಮುಂದುವರೆಸುತ್ತಿದ್ದಾಗ, ಕೆಲವರು ಅಧಿಕಾರಿಗಳ ಮನವಿಗೆ ಸ್ಪಂದನೆಯಾಗುವ ಹಾಗೆ ಮತದಾನಕ್ಕೆ ತೆರಳಿ ಮತ ಚಲಾಯಿಸಿ ಬರುವಾಗ ಪರಿಸ್ಥಿತಿ ನಿಯಂತ್ರಣ ತಪ್ಪಿತು.

ಏಕಾಏಕಿಯಾಗಿ ಮತಗಟ್ಟೆ ಬಳಿ ಜಮಾಯಿಸಿದ ಪ್ರತಿಭಟನಾಕಾರರು ತಮ್ಮ ಆಕ್ರೋಶ ವ್ಯಕ್ತಪಡಿಸತ್ತಿದ್ದಂತೆ ಕೆಲವರು ಮತಗಟ್ಟೆಯೊಳಗೆ ನುಗ್ಗಿದಲ್ಲದೆ, ಅಲ್ಲಿದ್ದ ವಿದ್ಯುನ್ಮಾನ ಮತಯಂತ್ರ, ವಿವಿ ಪ್ಯಾಟ್ , ಹಾಗೂ ಇನ್ನಿತರ ಸಲಕರಣೆಗಳನ್ನು ಧ್ವಂಸ ಮಾಡಿದ್ದಲ್ಲದೆ, ಮತಗಟ್ಟೆಯ ಬಾಗಿಲು , ಕಿಟಕಿಗಳನ್ನು ಒಡೆದು ಹಾಕಿದರು. ಇದನ್ನು ನೋಡಿದ ಸರ್ಕಲ್ ಇನ್ಸ್ ಪೆಕ್ಟರ್ ಜಗದೀಶ್ ರವರು ಪೊಲೀಸರು ಮತ್ತು ಹೋಂ ಗಾರ್ಡ್ ಗಳ ಮೂಲಕ ಗುಂಪನ್ನು ಚದುರಿಸಲು ಲಘು ಲಾಠಿ ಪ್ರಹಾರ ಮಾಡಿದರು. ಸ್ವತಃ ಸರ್ಕಲ್ ಇನ್ಸ್ ಪೆಕ್ಟರ್ ರವರೇ ಲಾಠಿ ಹಿಡಿದು ಪ್ರತಿಭಟನಾಕಾರರ ಮೇಲೆ ಹೊಡೆಯುವ ದೃಶ್ಯ ಮೊಬೈಲ್ ನಲ್ಲಿ ಸೆರೆಯಾಗಿದೆ.

ಪೊಲೀಸರ ಲಘು ಲಾಠಿ ಪ್ರಹಾರದಿಂದ ಕಂಗಲಾದ ಪ್ರತಿಭಟನಾಕಾರರು ಮತಗಟ್ಟೆ ಬಳಿ ಇದ್ದ ಕಲ್ಲುಗಳನ್ನು ತೆಗೆದುಕೊಂಡು ಪೊಲೀಸರು ಮತ್ತು ಮತಗಟ್ಟೆಯ ಮೇಲೆ ತೂರಿದ ವೇಳೆ ಕೆಲವು ಪ್ರತಿಭಟನಾರರ ಮೇಲೆ ಕಲ್ಲು ಬಿದ್ದು ಪೆಟ್ಟಾಗಿದೆ. ಪೊಲೀಸರ ಲಾಠಿ ಪ್ರಹಾರದಿಂದಾಗಿ ಮಹಿಳೆಯ ತಲೆ, ಕೈಗೆ ಪೆಟ್ಟಾಗಿದೆ. ಗ್ರಾಮಸ್ಥರು ಕಲ್ಲು ತೂರಾಟ ನಡೆಸಿದ್ದು, ತಹಸೀಲ್ದಾರ್ ಗುರುಪ್ರಸಾದ್ , ಇನ್ಸ್ ಪೆಕ್ಟರ್ ಜಗದೀಶ್ ಹಾಗೂ ಚುನಾವಣಾ ಅಧಿಕಾರಿಗಳು ಗಾಯಗೊಂಡಿದ್ದಾರೆ.

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಎಲ್ಲೆಡೆ ಶಾಂತಿಯುತ ಮತಧಾನ ನಡೆದಿದೆ ಮಹದೇಶ್ವರ ಬೆಟ್ಟ ಪೊಲೀಸ್ ಠಾಣಾ ಷರಹದ್ದಿನ ತುಳುಸಿಕೆರೆ ಗ್ರಾಮದಲ್ಲೂ ಗ್ರಾಮಸ್ಥರು ಒಕ್ಕರಲ್ಲಿನಿಂದ ಮತದಾನ ಬಹಿಷ್ಕರಿಸಿದ್ದಾರೆ.

ಈ ನಡುವೆ ಬಿಳಿಗಿರಿರಂಗನಾಥ ಹುಲಿ ಸಂರಕ್ಷಿತ ಪ್ರದೇಶ ವ್ಯಾಪ್ತಿಯ ಗೊಂಬೆಗಲ್ಲು ಮತ್ತು ಕೆರೆದಿಂಬ ಗ್ರಾಮದಲ್ಲಿ ಮೂಲಭೂತ ಸೌಕರ್ಯಕ್ಕೆ ಆಗ್ರಹಿಸಿ ಶುಕ್ರವಾರ ಬೆಳಗ್ಗೆ ಮತದಾನ ಬಹಿಷ್ಕಾರಕ್ಕೆ ಗ್ರಾಮಸ್ಥರು ಮುಂದಾಗಿದ್ದರು ಈ ಬಗ್ಗೆ ಮಾಹಿತಿ ಅರಿತ ಚುನಾವಣಾ ಅಧಿಕಾರಿಗಳು ಗ್ರಾಮಕ್ಕೆ ತೆರಳಿ ಗ್ರಾಮಸ್ಥರ ಮನವೊಲಿಸಿ ಮತದಾನ ಮತದಾನ ಆಗಿರುವ ಬಗ್ಗೆ ಚುನಾವಣೆ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಇಂಡಿಗನತ್ತ ಮತಗಟ್ಟೆಯಲ್ಲಿ ಮತದಾನ ದಿನದಂದು ಮತದಾನ ಬಹಿಷ್ಕಾರ ಕಿಚ್ಚಿನಿಂದಾಗಿ ಇಡೀ ಮತಗಟ್ಟೆ ಸಂಪೂರ್ಣವಾಗಿ ಧ್ವಂಸವಾಗಿದ್ದಲ್ಲದೆ, ವಿದ್ಯುನ್ಮಾನ ಮತಯಂತ್ರ ಹಾಗೂ ವಿವಿ ಪ್ಯಾಟ್ ಧ್ವಂಸವಾಗಿರುವ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮನಿಸಾಹು ಭೇಟಿ ಕೊಟ್ಟು ಪರಿಶೀಲನೆ ನಡೆಸಿದರು. ಗಾಯಗೊಂಡಿರುವ ತಹಸೀಲ್ದಾರ್, ಪೊಲೀಸ್ ಇನ್ಸ್ ಪೆಕ್ಟರ್ , ಚುನಾವಣಾಧಿಕಾರಿ ಮತ್ತಿತ್ತರನ್ನು ಪೊಲೀಸ್ ಬಂದೂಬಸ್ತ್ ನಲ್ಲಿ ಆಸ್ಪತ್ರೆಗೆ ಚಿಕಿತ್ಸೆಗೆ ಕರೆದೊಯ್ಯಲಾಯಿತು.

ಚಾಮರಾಜನಗರ ಜಿಲ್ಲೆಯ ಇಂಡಿಗನತ್ತ ಮತ್ತು ತೊಳಸಿಕೆರೆ ಮತಗಟ್ಟೆಗಳಲ್ಲಿ ಮತದಾನ ಸಂಪೂರ್ಣ ಬಹಿಷ್ಕಾರವಾಗಿದಂತ್ತಿದೆ. ಇಲ್ಲಿ ಮರು ಮತದಾನ ನಡೆಯಲಿದ್ದು, ಚುನಾವಣಾಧಿಕಾರಿಗಳು ಮತದಾನದ ದಿನಾಂಕ ನಿಗಧಿಪಡಿಸುವ ಮುನ್ನ ಗ್ರಾಮಸ್ಥರೊಂದಿಗೆ ಚರ್ಚೆ ನಡೆಸಿದ ಬಳಿಕ ಮತದಾನದ ದಿನಾಂಕ ನಿಗಧಿ ಪಡಿಸುವ ಸಾಧ್ಯತೆಗಳಿವೆ.

ಇಂಡಿಗನತ್ತ ಘಟನೆಯ ಬಗ್ಗೆ ಕರ್ನಾಟಕ ರಾಜ್ಯ ಚುನಾವಣಾ ಆಯೋಗದಿಂದ ಜಿಲ್ಲಾ ಚುನಾವಣಾಧಿಕಾರಿಗಳಿಂದ ವಿವರಣೆ ಪಡೆದುಕೊಂಡಿದ್ದಾರೆ.



### ಮತಚಲಾಯಿಸಿದ ಗಣ್ಯರು

**ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದಲ್ಲಿ ಮಾಜಿ ಸಚಿವೆ ಗೀತಾ ಮಹದೇವಪ್ರಸಾದ್, ಶಾಸಕ ಹೆಚ್. ಎಂ. ಗಣೇಶ್ ಪ್ರಸಾದ್ ಗುಂಡ್ಲುಪೇಟೆ ತಾಲ್ಲೂಕಿನ ಹಾಲಹಳ್ಳಿಯಲ್ಲಿ ಮತಚಲಾಯಿಸಿದರು. ಕೊಳ್ಳೇಗಾಲ ಕ್ಷೇತ್ರದ ಶಾಸಕ ಎ.ಆರ್. ಕೃಷ್ಣಮೂರ್ತಿ ಆಲೂರಿನಲ್ಲಿ ಮತಚಲಾವಣೆ ಮಾಡಿದರು. ಚಾಮರಾಜನಗರ ಶಾಸಕ ಸಿ.ಪುಟ್ಟರಂಗಶೆಟ್ಟಿ ಉಪ್ಪಿನಮೋಳೆಯಲ್ಲಿ ಮತಚಲಾಯಿಸಿದರು. ಬಿಜೆಪಿ ಜೆಡಿಎಸ್ ಅಭ್ಯರ್ಥಿ ಎಸ್ ಬಾಲರಾಜ್ ಯಳಂದೂರು ತಾಲ್ಲೂಕಿನ ಮದ್ದೂರಿನಲ್ಲಿ ಮತಚಲಾಯಿಸಿದರು.**

## ಕೈಮಗ್ಗದ ರೇಷ್ಮೆ ಸೀರೆಗಳಲ್ಲೂ ಜಾಗೃತಿ ಸಂದೇಶ

**ಚಾಮರಾಜನಗರ:** ಚುನಾವಣೆಯಲ್ಲಿ ಮತದಾನ ಪ್ರಮಾಣವನ್ನು ಹೆಚ್ಚಿಸಲು ಶ್ರಮಿಸುತ್ತಿರುವ ಜಿಲ್ಲಾ ಸ್ವೀಪ್ ಸಮಿತಿ, ಕೈಮಗ್ಗದ ರೇಷ್ಮೆ ಸೀರೆಗಳಲ್ಲೂ ಜಾಗೃತಿ ಸಂದೇಶವನ್ನು ಮುದ್ರಿಸಿದೆ.

ಜಿಲ್ಲಾ ಚುನಾವಣಾಧಿಕಾರಿ ಮತ್ತು ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾ ನಾಗ್, ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿ ಲಕ್ಷ್ಮಿ ಹಾಗೂ ಚಾಮರಾಜನಗರ ಸಹಾಯಕ ಚುನಾವಣಾಧಿಕಾರಿ ಸವಿತಾ ಸೇರಿದಂತೆ ಉನ್ನತ ಅಧಿಕಾರಿಗಳು ಮತದಾನದ ದಿನ ಆ ಸೀರೆಗಳನ್ನು ಧರಿಸಿ ಮಿಂಚಿದರು. 'ಚುನಾವಣಾ ಪರ್ವ ದೇಶದ ಗರ್ವ' ಎಂಬ ಸಂದೇಶನ್ನು ಸೀರೆಯಲ್ಲಿ ಮುದ್ರಿಸಲಾಗಿದೆ.

ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ನಗರದ ಪಿಡಬ್ಲ್ಯುಡಿ ಕಾಲೊನಿ ಮತಗಟ್ಟೆಯಲ್ಲಿ ಹಕ್ಕು ಚಲಾಯಿಸಿದರು.

ರೇಷ್ಮೆ ಸೀರೆ ಧರಿಸಿ ಮತಗಟ್ಟೆಗೆ ಬಂದಿದ್ದ ಅವರಿಗೆ ಲಕ್ಷ್ಮಿ, ಸವಿತಾ ಸಾಥ್ ನೀಡಿದರು. 'ಕೊಳ್ಳೇಗಾಲದ ನೇಕಾರ ಕೃಷ್ಣಮೂರ್ತಿ ಅವರು 10 ಸೀರೆಗಳನ್ನು ನೇಯ್ದಿದ್ದು, ಅದನ್ನು ನಾವು ಖರೀದಿಸಿದ್ದೇವೆ. ಮತದಾನದ ಅರಿವು ಮೂಡಿಸಲು ಸ್ವೀಪ್ ಸಮಿತಿ ಮಾಡಿರುವ ಪ್ರಯತ್ನ ಇದು' ಎಂದು ಸ್ವೀಪ್ ಸಮಿತಿ ನೋಡೆಲ್ ಅಧಿಕಾರಿ ಲಕ್ಷ್ಮಿ ' ತಿಳಿಸಿದರು. ಗಮನ ಸೆಳೆಯುತ್ತಿದೆ ಸಾಂಪ್ರದಾಯಿಕ ಮತಗಟ್ಟೆ: ಚಾಮರಾಜನಗರದ ರಾಮಸಮುದ್ರದ ಸರ್ಕಾರಿ ಶಾಲೆಯಲ್ಲಿ ಸ್ಥಾಪಿಸಲಾಗಿರುವ ಸಾಂಪ್ರದಾಯಿಕ ಮತಗಟ್ಟೆ ಗಮನಸೆಳೆಯುತ್ತಿದೆ. ಜಾನಪದ ಕಲಾವಿದರು ಬಳಸುವ ಸಂಗೀತ ಪರಿಕರಗಳು, ಹಳೆ ಕಾಲದಲ್ಲಿ ಬಳಸುತ್ತಿದ್ದ ವಸ್ತುಗಳನ್ನು ಮತಗಟ್ಟೆಗಳಲ್ಲಿ ಪ್ರದರ್ಶನಕ್ಕೆ ಇಡಲಾಗಿದೆ. ಜನರು ಬೆಳಿಗ್ಗೆಯಿಂದಲೇ ಸರತಿ ಸಾಲಿನಲ್ಲಿ ನಿಂತು ಮತದಾನ ಮಾಡುತ್ತಿದ್ದಾರೆ.

ಮುಸ್ಲಿಮರಿಂದ ಬೆಳಿಗ್ಗೆಯೇ ಮತದಾನ: ಬಿಸಿಲು ಮತ್ತು ಮಧ್ಯಾಹ್ನ ಶುಕ್ರವಾರದ ಪ್ರಾರ್ಥನೆ ಇರುವುದರಿಂದ ಮುಸ್ಲಿಂ ಸಮುದಾಯದ ಮತದಾರರು ಬೆಳಿಗ್ಗೆಯೇ ಮತದಾನ ಮಾಡಲು ಉತ್ಸಾಹ ತೋರಿದರು.



ಮತದಾನ ದಿನದಂದು ವೈವಾಹಿಕ ಜೀವನಕ್ಕೆ ಕಾಲಿಟ್ಟ ನವ ಜೋಡಿ ತಿಪಟೂರಿನ ಮನೋಜ್ ಮತ್ತು ಶಿಲ್ಪ ಮಧುವೆಯ ವೇಷಭೂಷಣದಲ್ಲಿ ಹೋಗಿ ಇಂದಿರಾ ನಗರದ ಮತಗಟ್ಟೆ ಸಂಖ್ಯೆ 98ರಲ್ಲಿ ಮತದಾನವನ್ನು ಮಾಡಿದರು.

## ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 3 ವರ್ಷಗಳ ಡಿಪ್ಲೊಮಾ ಕೋರ್ಸ್‌ಗೆ ಅರ್ಜಿ

**ಬೆಂಗಳೂರು:** ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 2024–25 ನೇ ಸಾಲಿನ ಶೈಕ್ಷಣಿಕ ಅವಧಿಗೆ ಒಟ್ಟು 44 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ವಿವಿಧ ಸಂಸ್ಥೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500/– ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು. ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ದಿನಾಂಕ: 01–07–2024 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25 ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೂಡೀಕೃತ ಅಂಕಗಳ ಮೆರಿಟ್‌ನ್ನು ಪರಿಗಣಿಸಲಾಗುವುದು. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನಾಂಕವಾಗಿದೆ. ಡಿಪ್ಲೊಮಾ ಕೋಸ್‌ರ್‌ಗೆ ಲಭ್ಯವಿರುವ ಸಂಸ್ಥೆಗಳು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ–ಬೆಟಗೇರಿ (ಕರ್ನಾಟಕ)–22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) –17 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ – 03 ಅಭ್ಯರ್ಥಿಗಳು, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ), ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) – 02 ಅಭ್ಯರ್ಥಿಗಳು ಸೇರಿ ಒಟ್ಟು 44 ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಿದೆ. ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೊಮಾ ಸಂಸ್ಥೆಗಳಲ್ಲಿ ಕೋರ್ಸ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ ದೂರವಾಣಿ ಸಂ: 08372–297221 ಮೊಬೈಲ್ ಸಂಖ್ಯೆ: 9449162822 ಅಥವಾ ಆಯಾ ಜಿಲ್ಲೆಯ ಜಂಟಿ/ಉಪ/ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಇವರನ್ನು ಸಂಪರ್ಕಿಸಬಹುದಾಗಿದೆ.

## ಅರಣ್ಯ ಪ್ರದೇಶ ಬೆಂಕಿಗೆ ಆಹುತಿ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಬಿ ಆರ್ ಟಿ ವನ್ಯಧಾಮ ವ್ಯಾಪ್ತಿಯ ಬೈಲೂರು ಅರಣ್ಯ ಪ್ರದೇಶದಲ್ಲಿ ಆಕಸ್ಮಿಕ ಬೆಂಕಿ ತಗುಲಿ ಅಪಾರ ಪ್ರಮಾಣದ ಅರಣ್ಯ ಪ್ರದೇಶ ಬೆಂಕಿಗೆ ಆಹುತಿಯಾಗಿದೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಬಿಆರ್ ಟಿ ಹುಲಿ ಸಂರಕ್ಷಿತ ಪ್ರದೇಶದ ಬೈಲೂರು ಅರಣ್ಯ ವ್ಯಾಪ್ತಿಯಲ್ಲಿ ಈ ಘಟನೆ ಜರುಗಿದೆ. ಬಿ ಆರ್ ಟಿ ವನ್ಯಜೀವಿ ವಿಭಾಗ ಬೈಲೂರು ವಲಯದ 40ಕ್ಕೂ ಹೆಚ್ಚು ಸಿಬ್ಬಂದಿ ವರ್ಗ ಹಾಗೂ ಸಮೀಪದ ಪುಣಜನೂರು ಅರಣ್ಯ ವ್ಯಾಪ್ತಿಯ 30ಕ್ಕೂ ಹೆಚ್ಚು ಸಿಬ್ಬಂದಿ ಸತತವಾಗಿ ಕೆಲ ತಾಸುಗಳ ಕಾಲ ಶ್ರಮಿಸಿ ಬೆಂಕಿಯನ್ನು ನಂಧಿಸಲು ಯಶಸ್ವಿಯಾಗಿದ್ದಾರೆ . ಈ ಕುರಿತು ಬಿಆರ್ ಟಿ ವನ್ಯಧಾಮದ ಅರಣ್ಯ ಅಧಿಕಾರಿಗಳು ಮಾಹಿತಿಯನ್ನು ನೀಡಿ ಯಾರೋ ಕಿಡಿಗೇಡಿಗಳ ಕೃತ್ಯದಿಂದ ಅರಣ್ಯಕ್ಕೆ ಬೆಂಕಿ ಬಿದ್ದಿರಬಹುದೆಂದು ಊಹಿಸಲಾಗಿದೆ .

## ಎಸ್‌ಸಿ ಮೋರ್ಚಾ ನಗರಾಧ್ಯಕ್ಷರಾಗಿ ಅಂಬೇಡ್ಕರ್ ನಗರದ ಆರ್.ಆನಂದ್



**ಕೋಲಾರ:** ಭಾರತೀಯ ಜನತಾಪಾರ್ಟಿ ಎಸ್.ಸಿ ಮೋರ್ಚಾ ನಗರಾಧ್ಯಕ್ಷರಾಗಿ ಅಂಬೇಡ್ಕರ್ ನಗರದ ಆರ್.ಆನಂದ್ ಅವರು ನೇಮಕಗೊಂಡಿದ್ದಾರೆ. ಪಕ್ಷದಲ್ಲಿ ಸಾಮಾನ್ಯ ಕಾರ್ಯಕರ್ತನಾಗಿ ಸೇವೆ ಸಲ್ಲಿಸುತ್ತಿದ್ದು, ಪಕ್ಷದಲ್ಲಿನ ಪ್ರಾಮಾಣಿಕ ಸೇವೆಯನ್ನು ಗುರುತಿಸಿ ಎಸ್.ಸಿ ಮೋರ್ಚಾ ನಗರಾಧ್ಯಕ್ಷರಾಗಿ ಆಯ್ಕೆ ಮಾಡಿರುವುದಾಗಿ ಭಾರತೀಯ ಜನತಾಪಾರ್ಟಿ ನಗರಾಧ್ಯಕ್ಷ ಎಸ್.ಎಂ.ಅನಿಲ್ ಕುಮಾರ್(ಸಾ.ಮಾ.ಬಾಬು) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೇ 76.72 ಮತದಾನ

**ಚಾಮರಾಜನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ 22–ಚಾಮರಾಜನಗರ (ಪ.ಜಾ) ಲೋಕಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಶೇ. 76.72 ರಷ್ಟು ಮತದಾನವಾಗಿದೆ.

ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 8,78,702 ಪುರುಷರು, 8,99,501 ಮಹಿಳೆಯರು, 107 ಇತರರು ಸೇರಿದಂತೆ ಒಟ್ಟು 17,78,310 ಮತದಾರರಿದ್ದಾರೆ. ಈ ಪೈಕಿ 6,81,965 ಪುರುಷರು, 6,82,341 ಮಹಿಳೆಯರು, 32 ಇತರೆ ಮಂದಿ ಸೇರಿದಂತೆ ಒಟ್ಟು 13,64,338 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದಾರೆ.

ಹೆಚ್.ಡಿ. ಕೋಟೆ ವಿಧಾನಸಭಾ ಕ್ಷೇತ್ರದಲ್ಲಿ 1,14,041 ಪುರುಷರು, 1,14,560 ಮಹಿಳೆಯರು, 12 ಇತರರು ಸೇರಿದಂತೆ ಒಟ್ಟು 2,28,613 ಮತದಾರರಿದ್ದಾರೆ. ಇವರಲ್ಲಿ 88,112 ಪುರುಷರು, 87,754 ಮಹಿಳೆಯರು, 7 ಮಂದಿ ಇತರರು ಸೇರಿದಂತೆ ಒಟ್ಟು 1,75,873 ಮತದಾರರು ಮತದಾನ ಮಾಡಿದ್ದಾರೆ.

ವಿಧಾನಸಭಾ ಕ್ಷೇತ್ರದಲ್ಲಿ 1,10,369 ಪುರುಷರು, 1,12,381 ಮಹಿಳೆಯರು, 7 ಇತರರು ಸೇರಿದಂತೆ ಒಟ್ಟು 2,22,757 ಮತದಾರರಿದ್ದಾರೆ. ಈ ಪೈಕಿ 86,202 ಪುರುಷರು, 85,074 ಮಹಿಳೆಯರು, 3 ಮಂದಿ ಇತರರು ಸೇರಿದಂತೆ ಒಟ್ಟು 1,71,279 ಮತದಾರರು ಮತ ಚಲಾಯಿಸಿದ್ದಾರೆ.

ವರುಣ ವಿಧಾನಸಭಾ ಕ್ಷೇತ್ರದಲ್ಲಿ 1,19,545 ಪುರುಷರು, 1,21,391 ಮಹಿಳೆಯರು, 13 ಇತರರು ಸೇರಿದಂತೆ ಒಟ್ಟು 2,40,949 ಮತದಾರರಿದ್ದಾರೆ. ಇವರಲ್ಲಿ 95,139 ಪುರುಷರು, 93,639 ಮಹಿಳೆಯರು, 8 ಇತರರು ಸೇರಿದಂತೆ ಒಟ್ಟು 1,88,786 ಮತದಾರರು ಮತ ಚಲಾಯಿಸಿದ್ದಾರೆ.

ಟಿ.ನರಸೀಪುರ ವಿಧಾನಸಭಾ ಕ್ಷೇತ್ರದಲ್ಲಿ 1,03,121 ಪುರುಷರು, 1,06,413 ಮಹಿಳೆಯರು, 13 ಇತರರು ಸೇರಿದಂತೆ ಒಟ್ಟು 2,09,547 ಮತದಾರರಿದ್ದಾರೆ. ಇವರಲ್ಲಿ 77,585 ಪುರುಷರು, 77,864 ಮಹಿಳೆಯರು, 2 ಇತರರು ಸೇರಿದಂತೆ ಒಟ್ಟು 1,55,451 ಮತದಾರರು ಮತ ಚಲಾಯಿಸಿದ್ದಾರೆ.

ಹನೂರು ವಿಧಾನಸಭಾ ಕ್ಷೇತ್ರದಲ್ಲಿ 1,12,880 ಪುರುಷರು, 1,11,793 ಮಹಿಳೆಯರು, 10 ಇತರರು ಸೇರಿದಂತೆ ಒಟ್ಟು 2,24,683 ಮತದಾರರಿದ್ದಾರೆ. ಇವರಲ್ಲಿ 81,056 ಪುರುಷರು, 80699 ಮಹಿಳೆಯರು, 2 ಇತರರು ಸೇರಿದಂತೆ ಒಟ್ಟು 1,61,757 ಮತದಾರರು ಮತ ಚಲಾಯಿಸಿದ್ದಾರೆ.

ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಲ್ಲಿ 1,08,056 ಪುರುಷರು, 1,11,988 ಮಹಿಳೆಯರು, 21 ಇತರರು ಸೇರಿದಂತೆ ಒಟ್ಟು 2,20,065 ಮತದಾರರಿದ್ದಾರೆ. ಇವರಲ್ಲಿ 81,489 ಪುರುಷರು, 82,292 ಮಹಿಳೆಯರು, 8 ಇತರರು ಸೇರಿದಂತೆ ಒಟ್ಟು 1,63,789 ಮತದಾರರು ಮತ ಚಲಾಯಿಸಿದ್ದಾರೆ.

ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ 1,04,903 ಪುರುಷರು, 1,10,517 ಮಹಿಳೆಯರು, 15 ಇತರರು ಸೇರಿದಂತೆ ಒಟ್ಟು 2,15,435 ಮತದಾರರಿದ್ದಾರೆ. ಇವರಲ್ಲಿ 84,021 ಪುರುಷರು, 85,399 ಮಹಿಳೆಯರು, 0 ಇತರರು ಸೇರಿದಂತೆ ಒಟ್ಟು 1,69,420 ಮತದಾರರು ಮತ ಚಲಾಯಿಸಿದ್ದಾರೆ.

ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 1,05,787 ಪುರುಷರು, 1,10,458 ಮಹಿಳೆಯರು, 16 ಇತರರು ಸೇರಿದಂತೆ ಒಟ್ಟು 2,16,261 ಮತದಾರರಿದ್ದಾರೆ. ಇವರಲ್ಲಿ 88,361 ಪುರುಷರು, 89,620 ಮಹಿಳೆಯರು, 2 ಇತರರು ಸೇರಿದಂತೆ ಒಟ್ಟು 1,77,983 ಮತದಾರರು ಮತ ಚಲಾಯಿಸಿದ್ದಾರೆ.

# ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಗೆಲುವು ಖಚಿತ : ಎಂ ಆರ್ ಕೃಷ್ಣಮೂರ್ತಿ

**ಚಾಮರಾಜನಗರ:** ಚಾ.ನಗರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಹೆಚ್ಚಿನ ಬಹುಮತದಲ್ಲಿ ಗೆಲುವು ಸಾಧಿಸಲಿದ್ದಾರೆ ಎಂದು ಕೊಳ್ಳೇಗಾಲ ಕ್ಷೇತ್ರದ ಶಾಸಕ ಎ.ಆರ್. ಕೃಷ್ಣಮೂರ್ತಿ ವಿಶ್ವಾಸ ವ್ಯಕ್ತಪಡಿಸಿದರು.

ತಾಲೂಕಿನ ಆಲೂರಿನಲ್ಲಿ ಸ್ಥಾಪಿಸಿ ಅನ್ನದಾತ ಮತಗಟ್ಟೆಯಲ್ಲಿ ಕುಟುಂಬ ಸಮೇತ ಆಗಮಿಸಿ ಹಕ್ಕು ಚಲಾಯಿಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿ, ಈ ಬಾರಿ ಇಂಡಿಯಾ ಮೈತ್ರಿಕೂಟಕ್ಕೆ ಬಹುಮತ ಬರಲಿದ್ದು, ಚಾ.ನಗರ ಲೋಕಸಭೆ ಸೇರಿದಂತೆ ಒಟ್ಟು 20ಕ್ಕು ಹೆಚ್ಚು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲ್ಲುವ ಸಾಧಿಸಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಐದು ಗ್ಯಾರಂಟಿ ಯೋಜನೆಗಳು ಯಶಸ್ವಿ ಅನುಷ್ಠಾನ ಹಾಗೂ ರಾಷ್ಟ್ರೀಯ ಮಟ್ಟದಲ್ಲಿ ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಅವರ ನೇತೃತ್ವದಲ್ಲಿ ಬಿಡುಗಡೆ ಮಾಡಿರುವ 25 ಗ್ಯಾರಂಟಿಗಳ ಪ್ರಾಣಾಳಿಕೆಗೆ ದೇಶದ ಜನರು ಬೆಂಬಲ ನೀಡಲಿದ್ದಾರೆ ಎಂದು ಅಚಲ ವಿಶ್ವಾಸವಿದೆ ಎಂದರು.

ಸಂವಿಧಾನ ವಿರೋಧಿ ಹೇಳಿಕೆ ಹಾಗೂ ಬಿಜೆಪಿಯ ಸಂವಿಧಾನ ವಿರೋಧಿ ನಡೆಯುವ ಸಹ ಈ ಬಾರಿಯ ಚುನಾವಣೆಯ ಅಜೆಂಡಾಗಿತ್ತು. ಈ ಸಂವಿಧಾನ ರಕ್ಷಣೆಗಾಗಿ ಮತ ನೀಡಿ ಎಂಬ ನಮ್ಮ ಕಾಂಗ್ರೆಸ್ ಪಕ್ಷದ ಕರೆ ದೇಶದ ಜನರ ಬೆಂಬಲ ವ್ಯಕ್ತವಾಗುತ್ತಿದೆ. ರಾಜ್ಯ ಸರ್ಕಾರ ಪರಿಪೂರ್ಣವಾಗಿ ಐದು ವರ್ಷಗಳ ಆಡಳಿತವನ್ನು ನಡೆಸಲಿದ್ದು, ಮುಂದಿನ ದಿನಗಳಲ್ಲಿ ಡಬಲ್ ಇಂಜಿನ್ ಸರ್ಕಾರದ ಜೊತೆಗೆ ಕರ್ನಾಟಕ ಹೆಚ್ಚಿನ ಅಭಿವೃದ್ಧಿಯಾಗಲಿದೆ ಎಂದು ಕೃಷ್ಣಮೂರ್ತಿ ತಿಳಿಸಿದರು. ಆಲೂರು ಗ್ರಾಮದಲ್ಲಿ ಈ ಬಾರಿ ಅನ್ನದಾತ ಮತಗಟ್ಟೆ ನಿರ್ಮಿಸಿ ಹಸಿರು ತೋರಣ,

ಅನ್ನದಾತ ಮತಗಟ್ಟೆಯಲ್ಲಿ ವಿಶೇಷವಾಗಿ ಚಪ್ಪರಿ ಹಾಕಿ, ಹಸಿರು ತೋರಣ, ಬಾಳೆ ಕಂತು, ಕಟ್ಟಿ ಸ್ವಾಗತ ಕೋರಲಾಗಿತ್ತು. ರೈತರ ಫಸಲು, ಬಾಳೆಗೊನೆ, ರೈತರ ಜಮೀನಿನಲ್ಲಿ ಬೆಳೆದಿರುವ ಹೂವಿನಿಂದ ಹಸಿರು ಚಪ್ಪರವನ್ನು ಅಲಂಕಾರ ಮಾಡಲಾಗಿತ್ತು. ರೈತೋಪಕರಣ, ಧಾನ್ಯಗಳ ರಾಶಿ, ಇವುಗಳ ಮೂಲಕ ರೈತರಿಗೆ ಮತಗಟ್ಟೆಯಲ್ಲಿ ಗೌರವ ಕೊಡಲಾಗಿತ್ತು.

ಈ ಸಂದರ್ಭದಲ್ಲಿ ಜಿ.ಪಂ. ಮಾಜಿ ಸದಸ್ಯ ಆರ್. ಬಾಲರಾಜು, ಎಪಿಎಂಸಿ ನಿರ್ದೇಶಕ ಆಲೂರು ಪ್ರದೀಪ್, ಮಂಜುಳಾ ಕೃಷ್ಣಮೂರ್ತಿ, ಆರ್.ಕೆ. ಶ್ರೀವರ್ಧನ್, ವಿಜಯಲಕ್ಷಿ?ಮ ಬಾಲರಾಜು, ರೋಷಿಣಿ ಆರ್.ಕೆ. ಮುಖಂಡರಾದ ಸಚಿನ್, ಆಲೂರು ಎ.ಎಸ್. ಮಲ್ಲಣ್ಣ, ಮಹದೇವಯ್ಯ, ಬಾಲರಾಜು, ರವಿಕುಮಾರ್, ಹೊಂಗನೂರು ಚೇತನ್, ಗೌಡಹಳ್ಳಿ ರಾಜೇಶ್ ಇತರರು ಇದ್ದರು.






ದೇವನಹಳ್ಳಿ ತಾಲೂಕು ವಿಜಯಪುರ ಪಟ್ಟಣದ ದುರ್ಗಾ ತಾಯಿ ದೇವಾಲಯದ ಬಳಿ ಮಾದರಿ ಮತಪತ್ರ ಯಂತ್ರ ತೋರಿಸಿ ಮತಯಾಚನೆ ಮಾಡುತ್ತಿರುವ ಬಿಜೆಪಿ ಕಾರ್ಯಕರ್ತರು.

## ಡಿಪ್ಲೊಮಾ ಕೋರ್ಸ್ ನೇರ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು:** ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 2024–25 ನೇ ಸಾಲಿನ ಶೈಕ್ಷಣಿಕ ಅವಧಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷದ ಡಿಪ್ಲೋಮಾ (ಡಿ.ಹೆಚ್.ಟಿ.ಟಿ) ಕೋರ್ಸ್ ನೇರ ಪ್ರವೇಶಕ್ಕಾಗಿ 32 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು ರೂ.2,500/– ರಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಆಯ್ಕೆಯಾದ ಅಭ್ಯರ್ಥಿಗಳಿಗೆ ಆಯಾ ಐ.ಐ.ಹೆಚ್.ಟಿ. ನಿಯಮಾನುಸಾರ ವಸತಿ ನಿಲಯದ ಸೌಲಭ್ಯವನ್ನು ಕಲ್ಪಿಸಲಾಗುವುದು. ಅಭ್ಯರ್ಥಿಗಳು ಗಣಿತ, ಭೌತಶಾಸ್ತ್ರ ಮತ್ತು ರಸಾಯನಶಾಸ್ತ್ರದೊಂದಿಗೆ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅಥವಾ ಯಾವುದೇ ಜವಳಿ ವಿಭಾಗದ ವೃತ್ತಿಪರ ವಿಭಾಗದಲ್ಲಿ 10+2 ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅಥವಾ 10ನೇ ತರಗತಿ ತೇರ್ಗಡೆ ಜೊತೆಗೆ (2 ವರ್ಷಗಳ ಐಟಿಐ) ತೇರ್ಗಡೆ ಹೊಂದಿರಬೇಕು. ಅಥವಾ 10+2 ಪಾಸ್ ಜೊತೆಗೆ (2 ವರ್ಷಗಳ ಐಟಿಐ) ತೇರ್ಗಡೆ ಎರಡನೇ ವರ್ಷದ ಡಿಪ್ಲೋಮಾ ಕೋರ್ಸ್‌ಗೆ ಪ್ರವೇಶ ಪಡೆಯಲು ಅರ್ಹರಾಗಿರುತ್ತಾರೆ. ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನಾಂಕವಾಗಿದೆ. ಜವಳಿ ವಿಭಾಗದ ವೃತ್ತಿಪರ ಸ್ಟ್ರೀಮ್‌ನಲ್ಲಿ 10+2 ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಐ.ಐ.ಹೆಚ್.ಟಿ ನಡೆಸುವ ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರದಲ್ಲಿ ಬ್ರಿಡ್ಜ್ ಕೋರ್ಸ್‌ನ್ನು ಅಭ್ಯಾಸ ಮಾಡಬೇಕು. ವಯೋಮಿತಿ ದಿನಾಂಕ: 01–07–2024 ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ವಯೋಮಿತಿ 25 ವರ್ಷ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ವಯೋಮಿತಿ 27 ವರ್ಷ. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೂಡೀಕೃತ ಅಂಕಗಳ ಮೆರಿಟ್‌ನ್ನು ಪರಿಗಣಿಸಲಾಗುವುದು. ಲ್ಯಾಟರಲ್ ಎಂಟ್ರಿ ಮುಖಾಂತರ 2 ನೇ ವರ್ಷದ ಡಿಪ್ಲೊಮಾ ಕೋರ್ಸಗೆ ನೇರ ಪ್ರವೇಶಕ್ಕಾಗಿ ಲಭ್ಯವಿರುವ ಸಂಸ್ಥೆಗಳು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ–ಬೆಟಗೇರಿ (ಕರ್ನಾಟಕ) – 13 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೇಲಂ (ತಮಿಳುನಾಡು) 14 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ, ಆಂಧ್ರಪ್ರದೇಶ) 03 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ) 02 ಅಭ್ಯರ್ಥಿಗಳು ಸೇರಿ ಒಟ್ಟು 32 ಅಭ್ಯರ್ಥಿಗಳಿಗೆ ಅರ್ಜಿ ಆಹ್ವಾನಿಸಿದೆ. ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯಾ ಡಿಪ್ಲೋಮಾ ಸಂಸ್ಥೆಗಳಲ್ಲಿ ಕೋರ್ಸ್ ಪ್ರವೇಶ ಕುರಿತಂತೆ ಕೌನ್ಸಿಲಿಂಗ್‌ಗಾಗಿ ಕರೆಯಲಾಗುವುದು. ಆಸಕ್ತಿ ಇರುವ ಅಭ್ಯರ್ಥಿಗಳು ಹೆಚ್ಚಿನ ವಿವರಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ ದೂರವಾಣಿ ಸಂ:08372–297221 ಹಾಗೂ ಮೊಬೈಲ್ ಸಂಖ್ಯೆ: 9449162822 ಅಥವಾ ಆಯಾ ಜಿಲ್ಲೆಯ ಜಂಟಿ/ಉಪ/ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಇವರನ್ನು ಸಂಪರ್ಕಿಸಿ ಪಡೆಯಬಹುದಾಗಿದೆ. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ "ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ–582102" ಇವರಿಗೆ ಸಲ್ಲಿಸಬೇಕು ಎಂದು ಕೈಮಗ್ಗ ಮತ್ತು ಜವಳಿ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿರುಬಿಸಿಲಿನ ನಡುವೆಯೂ ಶಾಂತಿಯುತ ಮತದಾನ

**ಯಳಂದೂರು:** ತಾಲೂಕಿನಾದ್ಯಂತ ಶುಕ್ರವಾರ ನಡೆದ ಲೋಕಸಭಾ ಚುನಾವಣೆಯು ಶಾಂತಿಯುತವಾಗಿ ನಡೆಯಿತು. ಬೆಳಿಗ್ಗೆಯಿಂದಲೇ ಕೆಲವು ಮತಗಟ್ಟೆಗಳಲ್ಲಿ ಜನಜಂಗುಳಿ ಕಂಡುಬಂದಿತು. ಬಿಸಿಲಿನ ಬೇಗೆಯಲ್ಲಿ ಮಧ್ಯಾಹ್ನದ ವೇಳೆ ಮತದಾನ ಕೊಂಚ ಮಂದಗತಿಯಲ್ಲಿ ನಡೆದು ಸಂಜೆ ವೇಳೆ ಮತ್ತೆ ಬಿರುಸನ್ನು ಪಡೆದುಕೊಂಡಿತು.

ತಾಲೂಕಿನ ಬಿಆರ್‌ಟಿ ಹುಲಿ ರಕ್ಷಿತ ಅರಣ್ಯದ ಮಧ್ಯಭಾಗದಲ್ಲಿರುವ ಪುರಾಣಿ ಪೋಡು ಸೇರಿದಂತೆ ತಾಲೂಕಿನ ಗುಡ್ಡಗಾಡು ಪ್ರದೇಶಗಳು, ಗ್ರಾಮಗಳು ಹಾಗೂ ಪಟ್ಟಣದಲ್ಲಿ ಮತದಾನ ನಡೆಯಿತು. ಮಧ್ಯಾಹ್ನದ ಬಿರುಬಿಸಿಲಿಗೆ ಕಾಂಗ್ರೆಸ್, ಬಿಜೆಪಿ ಸೇರಿದಂತೆ ಅನೇಕ ರಾಷ್ಟ್ರೀಯ ಪಕ್ಷ, ಪಕ್ಷೇತರ ಅಭ್ಯರ್ಥಿಗಳ ಬೆಂಬಲಿಗರು ಮತಗಟ್ಟೆಯ ಗಡಿಯಂಚಿನಲ್ಲಿ ನಿಂತು ತಮ್ಮ ಬೆಂಬಲಿಗರಿಗೆ ಮತದಾನ ಮಾಡುವಂತೆ ಮನವಿ ಮಾಡುತ್ತಿದ್ದರು. ಅಲ್ಲದೆ ಬಿಸಿಲಿಗೆ ಮಜ್ಜಿಗೆ, ತಂಪು ಪಾನೀಯ ಹಾಗೂ ಕುಡಿಯುವ ನೀರಿನ ಮೊರೆ ಹೋಗುತ್ತಿದ್ದ ದೃಶ್ಯ ಅಲ್ಲಲ್ಲಿ ಕಾಣಸಿಗುತ್ತಿತ್ತು.

ಕೆಟ್ಟು ಹೋದ ಇವಿಎಂ : ತಾಲೂಕಿನ ಚಾಮಲಾಪುರ, ಹೊನ್ನೂರು, ಯರಗಂಬಳ್ಳಿ ಗ್ರಾಮಗಳಲ್ಲಿ ಮತಗಟ್ಟೆಗಳಲ್ಲಿ ಮತ ಯಂತ್ರಗಳು ಕೆಲವು ಸಮಯ ಕೆಟ್ಟು ಆತಂಕ ಸೃಷ್ಟಿಸಿತು. ಇದು ಮತದಾರರಲ್ಲಿ ಗೊಂದಲ ಸೃಷ್ಟಿಸಲು ಕಾರಣವಾಯಿತು. ಸಂಬಂಧಪಟ್ಟ ತಾಂತ್ರಿಕ ಸಿಬ್ಬಂಧಿ ಇದನ್ನು ಸರಿಪಡಿಸುವ ತನಕ ಮತದಾರರು ಇಲ್ಲೇ ಕಾದು ನಿಂತು ನಂತರ ಮತದಾನ ಮಾಡಿದರು.

3 ಲಕ್ಷ ಅಂತರದ ಗೆಲುವಿನ ವಿಶ್ವಾಸ: ತಾಲೂಕಿನ ಮಾಂಬಳ್ಳಿ ಗ್ರಾಮದ ಮಾಜಿ ಶಾಸಕ ಹಾಗು ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷ ಎಸ್. ಜಯಣ್ಣ ತಮ್ಮ ಬೆಂಬಲಿಗರ ಜತೆಗೆ ಗ್ರಾಮದ ಕಮಲಮ್ಮ ಕರಿಗೇಗೌಡರ ಪ್ರೌಢಶಾಲೆಯ ಮತಗಟ್ಟೆಗೆ ಆಗಮಿಸಿ ಮತ ಚಲಾಯಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಈ ಬಾರಿ ಚಾಮರಾಜನಗರ ಕ್ಷೇತ್ರದಲ್ಲಿ ಭರ್ಜರಿ ಜಯ ಸಾಧಿಸಲಿದೆ. ಕ್ಷೇತ್ರದ ಅಭ್ಯರ್ಥಿ ಸುನೀಲ್ ಬೋಸ್ ಬಾರಿ 3 ಲಕ್ಷ ಕ್ಕೂ ಹೆಚ್ಚು ಮತಗಳ ಅಂತರದಲ್ಲಿ ಗೆಲ್ಲಲಿದ್ದಾರೆ. ರಾಜ್ಯದಲ್ಲಿ ಈ ಬಾರಿ 20 ಕ್ಕೂ ಹೆಚ್ಚು ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳೇ ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಮೈಸೂರು ವಿ.ವಿ.ಯ ಸಿಂಡಿಕೇಟ್‌ನ ಮಾಜಿ ಸದಸ್ಯ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡ ಕಿನಕಹಳ್ಳಿ ರಾಚಯ್ಯ ತಮ್ಮ ಬೆಂಬಲಿಗರ ಜತೆಗೆ ಆಗಮಿಸಿ ಕಿನಕಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತಮ್ಮ ಹಕ್ಕನ್ನು ಚಲಾಯಿಸಿದರು.



### ಮತದಾನ ಮಾಡಿದ ಗಣ್ಯರು

**ಚಾಮರಾಜನಗರ ಲೋಕ ಸಭಾ ಕ್ಷೇತ್ರ, ಬಿಜೆಪಿ ಅಭ್ಯರ್ಥಿಯಾದ ಎಸ್.ಬಾಲರಾಜು ರವರು ತಮ್ಮ ಕುಟುಂಬ ಸಮೇತ ತಮ್ಮ ಸ್ವಗ್ರಾಮವಾದ ತಾಲೂಕಿನ ಮದ್ದೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 2ರ ಮತಗಟ್ಟೆ ಸಂಖ್ಯೆ 187 ರಲ್ಲಿ ತಮ್ಮ ಪತ್ನಿ ಹಾಗೂ ಕುಟುಂಬ ಸದಸ್ಯರ ಜತೆಗೆ ಆಗಮಿಸಿ ಮತ ಚಲಾಯಿಸಿದರು. ಚಾಮರಾಜನಗರ ಕ್ಷೇತ್ರದ ವಿಧಾನ ಸಭಾ ಕ್ಷೇತ್ರ, ಶಾಸಕ ಸಿ. ಪುಟ್ಟರಂಗಶೆಟ್ಟಿ ಉಪ್ಪಿನಮೋಳೆ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಬೆಳಿಗ್ಗೆ ಮತಗಟ್ಟೆಗೆ ಭೇಟಿ ನೀಡಿ ಮತಚಲಾಯಿಸಿದರು.**

# ಸಂಜೆ ಟಿಪ್ಸ್

## ಮತಗಟ್ಟೆಯಲ್ಲಿ ಜೀವ ಉಳಿಸಿದ ನಾರಾಯಣ ಹೆಲ್ತ್ ಸಿಟಿಯ ವೈದ್ಯರು

ವೈದ್ಯಕೀಯ ಪರಿಣಿತಿ ಮತ್ತು ತ್ವರಿತ ಕ್ರಮದ ಮಹತ್ತರ ಸಂಯೋಜನೆಯಲ್ಲಿ ಬೊಮ್ಮಸಂದ್ರದ ನಾರಾಯಣ ಹೆಲ್ತ್ ಸಿಟಿಯನೆಫ್ರಾಲಜಿಸ್ಟ್ ಡಾ.ಗಣೇಶ್ ಶ್ರೀನಿವಾಸ ಪ್ರಸಾದ್ ಮತದಾನಕ್ಕಾಗಿ ಕಾಯುತ್ತಿರುವಾಗ ಹೃದಯಾಘಾತಕ್ಕೆ ಒಳಗಾದ ಮಹಿಳೆಯ ಜೀವ ಉಳಿಸಿ "ಜೀವರಕ್ಷಕ"ರಾಗಿದ್ದಾರೆ.

ಈ ಘಟನೆಯು ಜೆಪಿ ನಗರ 8ನೇ ಹಂತದಲ್ಲಿ ನಡೆದಿದ್ದು ಮತದಾರರು ತಮ್ಮ ಹಕ್ಕು ಚಲಾಯಿಸಲು ಕಾಯುತ್ತಿರುವಾಗ ನಡೆದಿದೆ. ಡಾ. ಪ್ರಸಾದ್ ತಮ್ಮ ಮತದಾನಕ್ಕೆ ಕಾಯುತ್ತಿದ್ದಾಗ ಐವತ್ತರ ವಯಸ್ಸಿನ ಮಹಿಳೆಯು ಬೆಳಿಗ್ಗೆ 9ರ ಸಮಯದಲ್ಲಿ ಕ್ಯೂನಲ್ಲಿ ನಿಂತಿರುವಾಗ ನೀರು ಕುಡಿಯಲು ಪ್ರಯತ್ನಿಸಿ ಕುಸಿದುಬಿದ್ದರು. ತಕ್ಷಣವೇ ಗಮನಿಸಿದ ಡಾ.ಪ್ರಸಾದ್ ಮತ್ತು ಕ್ಯೂನಲ್ಲಿರುವ ಜನರು ಮಹಿಳೆ ಕೆಳಕ್ಕೆ ಬೀಳುವ ಮುನ್ನವೇ ಹಿಡಿದುಕೊಂಡರು. ಈ ಸೂಕ್ಷ್ಮ ಕ್ಷಣ ಕುರಿತು ಡಾ.ಪ್ರಸಾದ್, "ನಾನು ಆಕೆಯ ನಾಡಿಯನ್ನು ಗಮನಿಸಿದೆ ಮತ್ತು ಅದು ಅತ್ಯಂತ ಕಡಿಮೆ ಇರುವುದನ್ನು ಕಂಡುಕೊಂಡೆ. ಆಕೆ ಕಣ್ಣುಗಳನ್ನು ಮೇಲಕ್ಕೆ ತಿರುಗಿಸುತ್ತಿದ್ದಳು. ಆಕೆಯ ದೇಹ ಯಾವುದೇ ಪ್ರತಿಕ್ರಿಯೆ ನೀಡುತ್ತಿರಲಿಲ್ಲ ಮತ್ತು ಆಕೆ ಉಸಿರಿಗಾಗಿ ಕಷ್ಟಪಡುತ್ತಿದ್ದಳು. ನಾನು ತಕ್ಷಣವೇ ಸಿಪಿಆರ್(ಕಾರ್ಡಿಯೊ ಪಲ್ಮನರಿ ರಿಸಸಿಟೇಷನ್) ನಡೆಸಿದೆ ಮತ್ತು ಆಕೆಯ ಪರಿಸ್ಥಿತಿ ಸುಧಾರಿಸಿತು" ಎಂದರು. ತ್ವರಿತ ಮತ್ತು ಪರಿಣಾಮಕಾರಿ ಸಿಪಿಆರ್ ಮಹಿಳೆಯ ಪರಿಸ್ಥಿತಿಯನ್ನು ಸ್ಥಿರಗೊಳಿಸುವಲ್ಲಿ ಹಾಗೂ ಮತ್ತಷ್ಟು ವೈದ್ಯಕೀಯನೆರವು ಒದಗಿಸುವವರೆಗೆ ಸುಧಾರಿಸಿತು. ಚುನಾವಣಾ ಕರ್ತವ್ಯದಲ್ಲಿದ್ದವರು ಮಹಿಳೆಗೆ ಜ್ಯೂಸ್ ನೀಡಿದರು ನಂತರ ಕೇವಲ ಐದೇ ನಿಮಿಷದಲ್ಲಿ ಆಂಬುಲೆನ್ಸ್ ಬಂದಿತು.ಮಹಿಳೆಯನ್ನು ತಕ್ಷಣವೇ ಆಸ್ಪತ್ರೆಗೆ ಸಾಗಿಸಲಾಯಿತು, ಆಕೆ ಅಲ್ಲಿ ಅಗತ್ಯ ವೈದ್ಯಕೀಯ ಚಿಕಿತ್ಸೆ ಪಡೆದರು. ಈ ಘಟನೆ ಕುರಿತು ಡಾ.ಪ್ರಸಾದ್ ಸಕಾಲಿಕ ಮಧ್ಯಪ್ರವೇಶದ ಪ್ರಾಮುಖ್ಯತೆಯ ಕುರಿತು ಹೇಳಿದರು, "ಚಿಕಿತ್ಸೆ ತಡವಾಗಿದ್ದಲ್ಲಿ ನಾವು ಆಕೆಯನ್ನು ಕಳೆದುಕೊಳ್ಳುವ ಸಂಭವನೀಯತೆ ಇತ್ತು. ಸಮೂಹವಾಗಿ ನಾವು ರೋಗಿಗಳಿಗೆ ಅವರ ಆರೋಗ್ಯಸೇವಾ ಪ್ರಯಾಣದಾದ್ಯಂತ ಆರೈಕೆ ಮಾಡಲು ಬದ್ಧರಾಗಿದ್ದೇವೆ. ಪ್ರಾಮಾಣಿಕ ಮತ್ತು ಪರಿಣಾಮಕಾರಿ ಪ್ರಥಮ ಚಿಕಿತ್ಸೆಯ ಮೂಲಕ ರೋಗಿಯ ಜೀವ ಉಳಿಸುವ ಅವಕಾಶ ಲಭಿಸಿದ್ದಕ್ಕೆ ನಾನು ಕೃತಜ್ಞನಾಗಿದ್ದೇನೆ. ಎಂದರು. ಮಹಿಳೆಗೆ ಮತದಾನ ಮಾಡುವ ಅವಕಾಶ ತಪ್ಪಿ ಹೋಗಿದ್ದರೂ ಆಕೆಯ ಜೀವ ಉಳಿಯಿತು, ಅದಕ್ಕೆ ನಾರಾಯಣ ಹೆಲ್ತ್ ಸಿಟಿಯ ಡಾ. ಪ್ರಸಾದ್ ಅವರ ಬದ್ಧತೆ ಮತ್ತು ಪರಿಣಿತಿ ಕಾರಣವಾಗಿದೆ.ಈ ಘಟನೆಯು ತುರ್ತು ಸಂದರ್ಭದಲ್ಲಿ ಸಿಪಿಆರ್ ವಹಿಸುವ ಪ್ರಮುಖ ಪಾತ್ರಕ್ಕೆ ರಿಮೈಂಡರ್ ಆಗಿದ್ದು ವಿಸ್ತಾರ ಜ್ಞಾನ ಮತ್ತುಜೀವ ಉಳಿಸುವ ತಂತ್ರಗಳ ಲಭ್ಯತೆಯ ಪ್ರಾಮುಖ್ಯತೆಯನ್ನು ಎತ್ತಿ ತೋರಿಸಿದೆ.

## ಓಟ್ಸ್ ಲಡ್ಡು ರೆಸಿಪಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಓಟ್ಸ್ - 1 1/2 ಕಪ್, ಸಕ್ಕರೆ - 1 ಕಪ್, ಗೋಡಂಬಿ 20 ಸಣ್ಣಗೆ ಹೆಚ್ಚಿದ್ದು, ಏಲಕ್ಕಿ ಪುಡಿ 1/2 ಚಮಚ, ತುಪ್ಪ 1/2 ಕಪ್

### ಮಾಡುವ ವಿಧಾನ

ಒಂದು ಬಾಣಲೆಯಲ್ಲಿ ಓಟ್ಸ್ ಅನ್ನು ಹಾಕಿ 5 ನಿಮಿಷ ಸಣ್ಣ ಉರಿಯಲ್ಲಿ ಹುರಿದು ಕೊಳ್ಳಬೇಕು. ಅದು ಆರಿದ ನಂತರ ನುಣ್ಣಗೆ ಪುಡಿ ಮಾಡಿ ಜರಡಿ ಹಿಡಿಯಬೇಕು. ನಂತರ ಸಕ್ಕರೆಯನ್ನು ಮಿಕ್ಸಿಯಲ್ಲಿ ಹಾಕಿ ಪುಡಿ ಮಾಡಿಕೊಳ್ಳಬೇಕು. ಒಂದು ಬೌಲ್ ನಲ್ಲಿ ಸಕ್ಕರೆ ಪುಡಿಯನ್ನು ಸೇರಿಸಿ ಮಿಶ್ರಣ ಮಾಡಿಕೊಳ್ಳಬೇಕು.ಬಾಣಲೆಗೆ ತುಪ್ಪ ಹಾಕಿ ಬಿಸಿ ಮಾಡಿ ಗೋಡಂಬಿಯನ್ನು ಹಾಕಿ ಕೆಂಬಣ್ಣ ಬರುವವರೆಗೆ ಹುರಿದುಕೊಳ್ಳಬೇಕು. ಇದನ್ನು ತಯಾರಿಸಿಕೊಂಡ ಹಿಟ್ಟಿಗೆ ಸೇರಿಸಿ ಕೊಳ್ಳಬೇಕು. ನಂತರ ಏಲಕ್ಕಿ ಪುಡಿಯನ್ನು ಸೇರಿಸಿ. ಎಲ್ಲಾ ಪದಾರ್ಥಗಳು ಒಂದಾಗುವ ರೀತಿಯಲ್ಲಿ ಮಿಶ್ರಣ ಮಾಡಿ. ತುಪ್ಪದ ಬಿಸಿಗೆ ಹಿಟ್ಟು ಉಂಡೆ ಕಟ್ಟುವ ಹದಕ್ಕೆ ಬಂದಿರುತ್ತದೆ. ಬಿಸಿ ಇರುವಾಗಲೇ ಬೇಕಾದ ಆಕಾರಕ್ಕೆ ಉಂಡೆಗಳನ್ನು ಕಟ್ಟಿ. ಈಗ ರುಚಿಯಾದ ಆರೋಗ್ಯಕರವಾದ ಓಟ್ಸ್ ಲಡ್ಡು ತಯಾರಿಸಿ ಸವಿಯಿರಿ.



### ಬೆಂಗಳೂರು ಅಂತರರಾಷ್ಟ್ರೀಯ ಕೇಂದ್ರದಲ್ಲಿ

## ಆರ್ಟ್ ಪಾರ್ಕ್ 75ನೇ ಆವೃತ್ತಿ

ಆರ್ಟ್ ಪಾರ್ಕ್ ನಗರದಲ್ಲಿ ತನ್ನ 75 ನೇ ಕಾರ್ಯಕ್ರಮದೊಂದಿಗೆ ಒಂದು ಮೈಲಿಗಲ್ಲನ್ನು ಆಚರಿಸುತ್ತದೆ ಮತ್ತು ಇದು2024 ರ ಏಪ್ರಿಲ್ 28 ರ ಭಾನುವಾರದಂದು 11 AM ನಿಂದ 4 PM ವರೆಗೆ ಬೆಂಗಳೂರು ಅಂತರರಾಷ್ಟ್ರೀಯ ಕೇಂದ್ರದಲ್ಲಿ ನಡೆಯಲಿದೆ.

ಆರ್ಟ್ ಪಾರ್ಕ್ ಬೆಂಗಳೂರು ಮೂಲದ ಸಮಕಾಲೀನ ಕಲಾವಿದರು ಪ್ರಾರಂಭಿಸಿದ ವಿಶಿಷ್ಟ ಸಾಂಸ್ಕೃತಿಕ ಉಪಕ್ರಮವಾಗಿದೆ, ಇದನ್ನು ಆರಂಭದಲ್ಲಿ ಹಿರಿಯ ಕಲಾವಿದ ಎಸ್.ಜಿ.ವಾಸುದೇವ್ ಅವರು ಪರಿಕಲ್ಪನೆ ಮಾಡಿದರು.

ಇದು ಮಾಸಿಕ ಕಾರ್ಯಕ್ರಮವಾಗಿ ಕಾರ್ಯನಿರ್ವಹಿಸುತ್ತದೆ ಮತ್ತು ಸಾಮಾನ್ಯವಾಗಿ ಪ್ರತಿ ತಿಂಗಳ ಮೊದಲ ಭಾನುವಾರದಂದು ಜಯಚಾಮರಾಜ ಒಡೆಯರ್ ರಸ್ತೆಯಲ್ಲಿರುವ ರವೀಂದ್ರ ಕಲಾಕ್ಷೇತ್ರದ ಸಂಕೀರ್ಣದಲ್ಲಿ (ಅಂದರೆ ಜೆ.ಸಿ. ರಸ್ತೆ) ಶಿಲ್ಪಕಲಾ ಉದ್ಯಾನದಲ್ಲಿ (ಶಿಲ್ಪವನ) ನಡೆಯುತ್ತದೆ. ಈ ಸರಣಿಯ ಮೊದಲ ಕಾರ್ಯಕ್ರಮವು 30 ಮಾರ್ಚ್ 2014 ರಂದು 30 ಆಯ್ದ, ಪ್ರಸಿದ್ಧ ಸ್ಥಳೀಯ ಕಲಾವಿದರನ್ನು ಒಳಗೊಂಡಿತ್ತು, ಅವರು ಇಡೀ ದಿನ ಸ್ಥಳದಲ್ಲಿ ಕೆಲಸ ಮಾಡಿದರು, ಇದರಿಂದಾಗಿ ಆಸಕ್ತ ಸದಸ್ಯರು ಕಲಾವಿದರ ವಿವಿಧ ಕಲಾ ತಯಾರಿಕೆಯ ವಿಧಾನಗಳನ್ನು ಮತ್ತು ಕಲಾತ್ಮಕ ಫಲಿತಾಂಶಗಳನ್ನು ನೋಡಬಹುದು,



ಪ್ರಶಂಸಿಸಬಹುದು ಮತ್ತು ಅರ್ಥಮಾಡಿಕೊಳ್ಳಬಹುದು.

ಆರ್ಟ್ ಪಾರ್ಕ್ ಬೆಂಗಳೂರು ಅನ್ನು ಸಾರ್ವಜನಿಕರಿಗೆ ಸಾಂಸ್ಕೃತಿಕ ಚಟುವಟಿಕೆಯಾಗಿ ವಿನ್ಯಾಸಗೊಳಿಸಲಾಗಿದೆ. ಹಿರಿಯ, ಪ್ರಸಿದ್ಧ ಮತ್ತು ಯುವ ಕಲಾವಿದರು ಸೇರಿದಂತೆ ನಗರದ ಹಲವಾರು ಕಲಾವಿದರನ್ನು ಒಳಗೊಂಡಿದೆ.ದಯವಿಟ್ಟು ಇಲ್ಲಿ ಕಲಾಕಾರರೊಂದಿಗೆ ಸಂವಾದ ನಡೆಸಿ, ಅವರು ಎಲ್ಲರೂ ಪರಿಪೂರ್ಣ ಕಲಾಕಾರರು.ಕಲೆಪ್ರಿಯರಿಗಾಗಿ ಒಂದು ಉತ್ಸಾಹಕರ ಉದಾಹರಣೆಯಾಗಿ, ಈ ಎಲ್ಲಾ ಕಲಾಕಾರರು ಅವರ ಅಭಿಜ್ಞಾನಗಳನ್ನು ಖರೀದಿಸಲು ಅತ್ಯಲ್ಪ ಮತ್ತು ಟೋಕನ್ ಬೆಲೆಯಲ್ಲಿ ಮತ್ತು ಅಮೂಲ್ಯವಾದ ಬೆಲೆಯಲ್ಲಿ ಮಾರಾಟ ಮಾಡುವ ಒಪ್ಪಿಗೆ ನೀಡಿದ್ದಾರೆ.

ಈ ಅಂಕಗಳನ್ನು ಖರೀದಿಸುವುದು ಒಂದು ಮೂಲ ಕಲೆಯ ಕೆಲಸವನ್ನು ಪ್ರಾರಂಭಿಸುವ ಒಂದು ಸುವರ್ಣಅವಕಾಶ. ಈ ರೂ. 1000/- (ರೂಪಾಯಿ ಒಂದು ಸಾವಿರ ಮಾತ್ರ) ಎಂಬ ಬೆಲೆಯಲ್ಲಿ ಕಲಾಕಾರರು ಅವರ ಮೊದಲ ಐದು ಅಂಕಗಳನ್ನು ಬೆಂಗಳೂರು ಆರ್ಟ್ ಪಾರ್ಕ್ ನಲ್ಲಿ ವಸ್ತುಗಳು. ನೀವು ಪ್ರತಿಷ್ಠಿತ ಕಲಾಕಾರರ ಸ್ಥಾನಕ್ಕೆ ಇರುವ ಮಂಜುಗಡೆಗಳ ಮೇಲೆ ಇರುವ ಪೂರ್ಣ ಆಂಗುಲ ಮೂಲಕ ಆಯ್ಕೆ ಮಾಡಬಹುದು.ಆರ್ಟ್ ಪಾರ್ಕ್ ಬೆಂಗಳೂರು ಬಗ್ಗೆ ಯಾವುದೇ ಸಹಾಯ ಮತ್ತು ಮಾಹಿತಿಯ ಬಗ್ಗೆ, ನಿರ್ವಹಿಸುವ ಕಮಿಟಿಯ ಯಾವುದೇ ಸದಸ್ಯರಿಗೆ ಮಾತನಾಡಿ.ಆರ್ಟ್ ಪಾರ್ಕ್ ಬೆಂಗಳೂರು ಕಲಾಕಾರರು ಮತ್ತು ಕಲಾಪ್ರಿಯರಿಗೆ ಆನಂದದ ಮತ್ತು ಶಿಕ್ಷಣಕರ ಅನುಭವವನ್ನು ಮಾಡೋಣ.

ಬೆಂಗಳೂರು ಇಂಟರ್ನ್ಯಾಶನಲ್ ಸೆಂಟರ್ನಲ್ಲಿ ಆಯೋಜಿಸಲಾಗುತ್ತಿರುವ ಆರ್ಟ್ ಪಾರ್ಕ 75ನೇ ಆವೃತ್ತಿಯು ಹಲವು ಕಾರ್ಯಕ್ರಮಗಳನ್ನು ಪ್ರದರ್ಶಿಸುತ್ತಿದೆ.

ಅರುಂಧತಿ ನಾಗ್, ಬಾಲನ್ ನಂಬಿಯಾರ್, ಪಾಸಾ ಕುಮಾರ್, ಲತಾರೆಡ್ಡಿ, ಮಹೇಂದ್ರ,. ಎಂ.ಎಸ್. ಮೂರ್ತಿ, ಪ್ರಿಯಾ ಚೆಟ್ಟಿ ರಾಜಗೋಪಾಲ್, ರೇಖಾ ರಾವ್,ಸಂಜಯ ಕಬೆ, ಸುಧಾಕರ ರಾವ್, ಸುಮೀತ್ ಶೆಟ್ಟಿ, ಊರ್ಮಿಳಾ ದೇವಿ. ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

## ಬೇಸಿಗೆಯಲ್ಲಿ ತಾಳೆಹಣ್ಣು ಪ್ರಯೋಜನಗಳೇನು?





### ಹೆಲ್ತ್ ಟಿಪ್ಸ್

ಬೇಸಿಗೆಯಲ್ಲಿ ರಸ್ತೆ ಬದಿಯಲ್ಲಿ ಅಲ್ಲಲ್ಲಿ ತಾಳೆಹಣ್ಣುಗಳನ್ನು ಮಾರಾಟ ಮಾಡುತ್ತಿದ್ದಾರೆ. ನಾವಿಂದು ಅದರ ಆರೋಗ್ಯಕರ ಪ್ರಯೋಜನಗಳ ಬಗ್ಗೆ ತಿಳಿಯೋಣ.

ಬೇಸಿಗೆಯಲ್ಲಿ ನಾವು ಹೆಚ್ಚಾಗಿ ತಂಪಾದ ಆಹಾರಗಳು, ತಂಪಾದ ಪಾನೀಯಗಳನ್ನು ತಿನ್ನಲು ಬಯಸುತ್ತೇವೆ.. ಅದರ ಬದಲಿಗೆ ಎಳನೀರು, ತಾಳೆಹಣ್ಣನ್ನು ಸೇವಿಸುವುದು ಆರೋಗ್ಯಕ್ಕೆ ಉತ್ತಮವಾಗಿದೆ. ತಾಳೆಹಣ್ಣನ್ನು ಪ್ರತಿಯೊಬ್ಬರೂ ನೋಡಿರುತ್ತೀರಿ. ಒಂದು ಕಪ್ಪು ಬಣ್ಣದ ದುಂಡಗಿನ ಕಾಯಿಯ ಒಳಗಡೆ ಮೂರು ಕಣ್ಣುಗಳಿರುತ್ತದೆ. ಅವು ನೋಡಲು ಐಸ್ ಇದ್ದಂತೆ ಇದೆ. ಆದರೆ ಇದು ಬಹಳ ರುಚಿಕರವಾಗಿದ್ದು, ಸಾಕಷ್ಟು ನೀರಿನಂಶವನ್ನು ಹೊಂದಿದೆ. ತಾಳೆಹಣ್ಣಿನ ಪ್ರಮುಖ ಪ್ರಯೋಜನವೆಂದರೆ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುವ ಸಾಮರ್ಥ್ಯವನ್ನು ಹೊಂದಿದೆ. ಅಸಂಖ್ಯಾತ ಪೋಷಕಾಂಶಗಳನ್ನು ಹೊಂದಿರುವ ಈ ಕಡಿಮೆ ಕ್ಯಾಲೋರಿ ಹಣ್ಣು ಅನೇಕ ರೋಗಗಳನ್ನು ತಡೆಯಲು ಸಹಾಯ ಮಾಡುತ್ತದೆ. ಆದ್ದರಿಂದ, ನಿಮ್ಮ ಆಹಾರದಲ್ಲಿ ತಾಳೆಹಣ್ಣನ್ನು ಸೇರಿಸುವುದು ಆರೋಗ್ಯದ ದೃಷ್ಟಿಯಿಂದ ತುಂಬಾ ಒಳ್ಳೆಯದು. ಕೇವಲ 100 ಗ್ರಾಂ ತಾಳೆಹಣ್ಣು 87 ಗ್ರಾಂ ನೀರನ್ನು ಹೊಂದಿರುವುದರಿಂದ ಇದು ಜಲಸಂಚಯನಕ್ಕೆ ಅತ್ಯುತ್ತಮವಾಗಿದೆ. ಆದ್ದರಿಂದ ಇದು ನಿಮ್ಮ ನೀರಿನ ಸೇವನೆಯನ್ನು ಹೆಚ್ಚಿಸಲು ಮತ್ತು ಹೊರಗಿನ ತಾಪಮಾನವು ಅಧಿಕವಾಗಿರುವಾಗ ನಿರ್ಜಲೀಕರಣವನ್ನು ತಡೆಯಲು ಪರಿಪೂರ್ಣ ಮಾರ್ಗವಾಗಿದೆ. ಬೇಸಿಗೆಯಲ್ಲಿ ಇದನ್ನು ಸೇವಿಸುವುದರಿಂದ ವ್ಯಕ್ತಿಯನ್ನು ಸ್ವಾಭಾವಿಕವಾಗಿ ಹೈಡ್ರೇಕರಿಸಲು ಸಹಾಯ ಮಾಡುತ್ತದೆ. ತಾಳೆಹಣ್ಣನ್ನು ನಿಯಮಿತವಾಗಿ ಸೇವಿಸಿದರೆ ಮಲಬದ್ಧತೆ, ವಾಕರಿಕೆ ಮತ್ತು ಹೊಟ್ಟೆ ಉಬ್ಬುವ ಸಮಸ್ಯೆಗಳು ನಿವಾರಣೆಯಾಗುತ್ತದೆ. ಈ ಹಣ್ಣಿನ ಸಸ್ಯ-ಆಧಾರಿತ ಸಂಯುಕ್ತಗಳು ಜೀರ್ಣಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಗುಣಪಡಿಸುವಲ್ಲಿ ಪರಿಣಾಮಕಾರಿ ಎಂದು ಸಾಬೀತಾಗಿರುವ ಗುಣಲಕ್ಷಣಗಳನ್ನು ಹೊಂದಿವೆ.

## ನಾಗಚೈತನ್ಯ ಜೊತೆ ನಟಿಸುವುದಿಲ್ಲ

### ಸಾರಾ ಅಲಿ ಖಾನ್ ಹೇಳಿಕೆ



ನಾಗ್ಚೈತನ್ಯ ಟಾಲಿವುಡ್ನಲ್ಲಿ ತಮ್ಮದೇ ಆದ ಇಮೇಜ್ ಕ್ರಿಯೆಟ್ ಮಾಡಿಕೊಂಡಿದ್ದಾರೆ.. ಈಮಾಯ ಚೇಸಾವೆ ಚಿತ್ರದ ಮೂಲಕ ಮೊದಲ ಹಿಟ್ ಗಳಿಸಿದ ನಾಗ ಚೈತನ್ಯ ಮನಂ, ಪ್ರೇಮಂ, ಮಜಿಲಿ, ಲವ್ ಸ್ಟೋರಿ ಮುಂತಾದ ಹಿಟ್ ಚಿತ್ರಗಳ ಮೂಲಕ ಜನಪ್ರಿಯತೆ ಗಳಿಸಿದರು. ಆದರೆ ನಾಗ ಚೈತನ್ಯ ಅವರಿಗೆ ಒಂದೇ ಒಂದು ಬ್ಲಾಕ್ ಬಸ್ಟರ್ ಸಿಕ್ಕಿಲ್ಲ.. ಈ ಸ್ಟಾರ್ ಹೀರೋ ಆಗುವ ಕನಸು ನನಸಾಗಲೇ ಇಲ್ಲ.. ನಾಗ ಚೈತನ್ಯ ಪ್ರಸ್ತುತ ತಾಂಡಲ್ ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ.. ಚಂದು ಮೊಂಡೇಟಿ ನಿರ್ದೇಶನದಲ್ಲಿ ಮೂಡಿಬರುತ್ತಿರುವ ಈ ಚಿತ್ರ ಗೀತಾ ಆರ್ಟ್ಸ್ ಬ್ಯಾನರ್ ಅಡಿಯಲ್ಲಿ ಚಿತ್ರ ಅದ್ಧೂರಿಯಾಗಿ ಬಿಡುಗಡೆಯಾಗಲಿದೆ. ನಾಗ ಚೈತನ್ಯ ನಾಯಕನಾಗಿ ನಟಿಸುತ್ತಿರುವ ಈ ಚಿತ್ರದ ಮೇಲೆ ಇಂಡಸ್ಟ್ರಿಯಲ್ಲಿ ನಿರೀಕ್ಷೆಗಳಿವೆ. ಈ ಮಧ್ಯೆ ನಾಯಕಿಯೊಬ್ಬಳು ನಾಗ ಚೈತನ್ಯ ಅವರನ್ನು ಕಂಡರೆ ಅವರು ನನ್ನ ಅಣ್ಣನಂತೆ ಭಾಸವಾಗುತ್ತಾರೆ ಎಂದಿದ್ದಾಳೆ... ಆಕೆ ಬೇರೆ ಯಾರೂ ಅಲ್ಲ, ಸ್ಟಾರ್ ಕಿಡ್ ಸಾರಾ ಅಲಿ ಖಾನ್. ಹೀರೋ ಸೈಫ್ ಅಲಿ ಖಾನ್ ಪುತ್ರಿ ಸಾರಾ ಅಲಿ ಖಾನ್ ಈ ಬಗ್ಗೆ ಕಾಮೆಂಟ್ ಮಾಡಿದ್ದಾರೆ ಎಂದು ವರದಿಯಾಗಿದೆ. ನಾಗ ಚೈತನ್ಯ ಅವರ ಚಿತ್ರದಲ್ಲಿ ನಾಯಕಿ ಆಫರ್ಗಾಗಿ ನಿರ್ದೇಶಕರೊಬ್ಬರು ಸಾರಾ ಅಲಿ ಖಾನ್ ಅವರನ್ನು ಸಂಪರ್ಕಿಸಿದಾಗ ಸಾರಾ ಅಲಿ ಖಾನ್ ನಾನು ಅವರೊಂದಿಗೆ ನಟಿಸುವುದಿಲ್ಲ ಎಂದಿದ್ದರಂತೆ.. ನನಗೆ ಅವರನ್ನು ಕಂಡರೆ ನನ್ನ ಅಣ್ಣನಂತೆ ಭಾಸವಾಗುತ್ತದೆ.. ಅವರೊಂದಿಗೆ ರೊಮ್ಯಾನ್ಸ್ ಮಾಡುವುದು ಕಷ್ಟ. ನಾನು ಅವರೊಟ್ಟಿಗೆ ಸಿನಿಮಾ ಮಾಡುವುದಿಲ್ಲ ಎಂದು ನೇರವಾಗಿ ಹೇಳಿದ್ದಾರೆ.



## ಕೂದಲುದುರುವ ಸಮಸ್ಯೆ ನಿವಾರಿಸಲು ಯೋಗ

### ಬ್ಯೂಟಿ ಟಿಪ್ಸ್



ಇತ್ತೀಚಿನ ದಿನಗಳಲ್ಲಿ ಹೆಚ್ಚಿನವರು ಕೂದಲುದುರುವ ಸಮಸ್ಯೆಯಿಂದ ಬಳಲುತ್ತಿರುತ್ತಾರೆ. ಇದಕ್ಕೆ ವಾತಾವರಣದ ಧೂಳು, ಮಾಲಿನ್ಯ, ಬಿಸಿಲು ಕಾರಣವಾಗಿರುತ್ತದೆ. ಈ ಸಮಸ್ಯೆಯನ್ನು ನಿವಾರಿಸಲು ಪ್ರತಿದಿನ 15 ನಿಮಿಷಗಳ ಕಾಲ ಬಾಲಾಯಂ ಯೋಗ ಮಾಡಿ. ಬಾಲಾಯಂ ಯೋಗ ಕೂದಲುದುರುವ ಸಮಸ್ಯೆಯನ್ನು ನಿವಾರಿಸುತ್ತದೆ. ಒಂದು ಸ್ಥಳದಲ್ಲಿ ಕುಳಿತುಕೊಂಡು ನಿಮ್ಮ ಎರಡೂ ಕೈಗಳನ್ನು ಹತ್ತಿರಕ್ಕೆ ತಂದು ಎರಡೂ ಕೈಗಳ ಉಗುರುಗಳನ್ನು ಒಟ್ಟಿಗೆ ಉಜ್ಜಿಕೊಳ್ಳಿ. ಇದನ್ನು 15 ನಿಮಿಷಗಳ ಕಾಲ ಮಾಡಿ. ನೀವು 3-4 ತಿಂಗಳುಗಳ ಕಾಲ ಪ್ರತಿದಿನ ನಿರಂತರವಾಗಿ ಮಾಡಿದರೆ ಇದರಿಂದ ಉತ್ತಮ ಫಲಿತಾಂಶ ಸಿಗುತ್ತದೆ. ಚಿಇದು ದೇಹದಲ್ಲಿನ ಶಕ್ತಿಯ ಹರಿವನ್ನು ಹೆಚ್ಚಿಸುತ್ತದೆ. ಇದರಿಂದ ದೇಹದಲ್ಲಿ ಶಾಖದ ಅಂಶ ಉತ್ಪತ್ತಿಯಾಗುತ್ತದೆ. ಇದು ನೆತ್ತಿಯ ಕಂಪನವನ್ನು ಉಂಟುಮಾಡಿ ಕೂದಲುದುರುವುದನ್ನು ಕಡಿಮೆ ಮಾಡಿ ಹೊಸ ಕೂದಲು ಬೆಳೆಯಲು ಪ್ರಾರಂಭಿಸುತ್ತದೆ. ಆದರೆ ಗರ್ಭಿಣಿಯರು ಹಾಗೂ ಅಧಿಕ ಬಿಪಿ ಇರುವವರು ಇದನ್ನು ಮಾಡಬಾರದು.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸಾಲದ ಚಿಂತೆ, ಶತ್ರುಗಳ ಕಾಟ, ಸಂಗಾತಿಯಿಂದ ಅಂತರ, ಪಾಲುದಾರಿಕೆಯಲ್ಲಿ ನಷ್ಟ.

**ವೃಷಭ:** ಆರ್ಥಿಕವಾಗಿ ಪ್ರಗತಿ, ಕುಟುಂಬದಿಂದ ಸಹಕಾರ, ಪಿತ್ರಾರ್ಜಿತ ಸ್ವತ್ತಿನಿಂದ ಅನುಕೂಲ, ಪ್ರೀತಿ ಪ್ರೇಮದಲ್ಲಿ ಹಿನ್ನಡೆ.

**ಮಿಥುನ:** ಅವಕಾಶ ಕೈ ತಪ್ಪುವುದು, ಅಧಿಕ ಉತ್ಸಾಹ, ಮಕ್ಕಳಿಗೋಸ್ಕರವಾಗಿ ಖರ್ಚು, ಬಂಧುಗಳೊಂದಿಗೆ ಉತ್ತಮ ಭಾಂದವ್ಯ.

**ಕಟಕ:** ಅಧಿಕ ಖರ್ಚು, ವ್ಯವಹಾರದಲ್ಲಿ ಲಾಭ ಕುಂಠಿತ, ನಿದ್ರಾಭಂಗ, ವಿದ್ಯಾಭ್ಯಾಸದಲ್ಲಿ ಹಿನ್ನಡೆ.

**ಸಿಂಹ:** ಆರ್ಥಿಕವಾಗಿ ಉತ್ತಮ ಬೆಳವಣಿಗೆ, ಕುಟುಂಬದಿಂದ ಸಹಕಾರ, ಉತ್ತಮ ಪ್ರಶಂಸೆ, ಮಾತಿನಿಂದ ಸಮಸ್ಯೆ.

**ಕನ್ಯಾ:** ವ್ಯವಹಾರದಲ್ಲಿ ನಷ್ಟ, ಗೌರವಕ್ಕೆ ಧಕ್ಕೆ, ಕೆಲಸ ಕಾರ್ಯಗಳಲ್ಲಿ ಅಡೆತಡೆ, ಅನಗತ್ಯ ಖರ್ಚು.

**ತುಲಾ:** ಉಳಿತಾಯದಲ್ಲಿ ಹಿನ್ನಡೆ, ಪ್ರಯಾಣದಲ್ಲಿ ಅನುಕೂಲ, ತಂದೆ ಆರೋಗ್ಯದಲ್ಲಿ ವ್ಯತ್ಯಾಸ, ವ್ಯಾಪಾರ ವ್ಯವಹಾರದಲ್ಲಿ ಹಿನ್ನಡೆ.

**ವೃಶ್ಚಿಕ:** ಅನಿರೀಕ್ಷಿತ ಲಾಭ, ಅಧಿಕಾರಿಗಳಿಂದ ಉತ್ತಮ ಸಹಕಾರ, ವರ್ಗಾವಣೆ ಸಂಬಂಧಪಟ್ಟಂತೆ ಅನುಕೂಲ, ಆರ್ಥಿಕವಾಗಿ ಚೇತರಿಕೆ.

**ಧನಸ್ಸು:** ತಂದೆಯಿಂದ ಅನುಕೂಲ, ರಾಜಕೀಯ ವ್ಯಕ್ತಿಗಳಿಂದ ಅನುಕೂಲ, ಉದ್ಯೋಗ ಪ್ರಾಪ್ತಿ, ಆರೋಗ್ಯ ವ್ಯತ್ಯಾಸದಿಂದ ಆತಂಕ.

**ಮಕರ:** ಆರೋಗ್ಯದಲ್ಲಿ ವ್ಯತ್ಯಾಸ, ಸಾಲದ ಚಿಂತೆ, ಆತ್ಮಸಂಕಟ, ಮಾನಸಿಕ ಒತ್ತಡ.

**ಕುಂಭ:** ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ, ಮಕ್ಕಳ ವಿದ್ಯಾಭ್ಯಾಸದಲ್ಲಿ ಕೊರತೆ, ಪ್ರಯಾಣದಲ್ಲಿ ವಿಘ್ನ, ಸಂಗಾತಿಯೊಂದಿಗೆ ಕಲಹ.

**ಮೀನ:** ಪ್ರೀತಿ-ಪ್ರೇಮದ ವಿಷಯಸಂಗಾತಿಯೊಂದಿಗೆ ಮನಸ್ತಾಪ, ಸಾಲದ ಆಲೋಚನೆ, ಆರೋಗ್ಯ ವಿಷಯದಲ್ಲಿ ಜಾಗೃತಿ, ಶತ್ರು ಕಾಟ.

## ವಿಶ್ವ ಪಶು ವೈದ್ಯಕೀಯ ದಿನ




ಪ್ರತಿವರ್ಷವು ಏಪ್ರಿಲ್ ತಿಂಗಳ ಕೊನೆಯ ಶನಿವಾರದಂದು ವಿಶ್ವ ಪಶುವೈದ್ಯಕೀಯ ದಿನವನ್ನು ಆಚರಿಸಲಾಗುತ್ತದೆ.

ಮನುಷ್ಯ ಮತ್ತುಪ್ರಾಣಿಗಳ ಸಂಬಂಧ ಬಿಡಿಸಲಾರದ ಅನುಬಂಧ. ಮಾತು ಬಾರದ ಪ್ರಾಣಿಗಳು ಕೂಡ ಮನುಷ್ಯನ ಭಾವನೆಗೆ ಸ್ಪಂದಿಸುತ್ತದೆ. ಹೀಗಾಗಿ ಅವುಗಳಿಗೆಆರೋಗ್ಯಸಮಸ್ಯೆಗಳು ಕಾಣಿಸಿಕೊಂಡಾಗ ಸರಿಯಾದ ಚಿಕಿತ್ಸೆ ನೀಡುವುದು ನಮ್ಮೆಲ್ಲರ ಹೊಣೆಯಾಗಿದೆ. ಈ ನಿಟ್ಟಿನಲ್ಲಿ ಪ್ರತೀವರ್ಷ ಎಪ್ರಿಲ್ ತಿಂಗಳ ಕೊನೇ ಶನಿವಾರ ವನ್ನು ವಿಶ್ವ ಪಶುವೈದ್ಯಕೀಯ ದಿನವನ್ನಾಗಿ ಆಚರಿಸಿಕೊಂಡು ಬರಲಾಗುತ್ತಿದೆ.

1863 ರಲ್ಲಿ ಜರ್ಮನಿಯ ಹ್ಯಾಂಬರ್ಗ್ನಲ್ಲಿ ಎಡಿನ್ಬರ್ಗ್ ಪಶುವೈದ್ಯಕೀಯ ಕಾಲೇಜು ಪ್ರೊಫೆಸರ್ ಜಾನ್ ಗಮ್ಗೀ ಅವರು ಅಂತಾರಾಷ್ಟ್ರೀಯ ಪಶುವೈದ್ಯಕೀಯ ಕಾಂಗ್ರೆಸ್ ಸಭೆಯನ್ನು ನಡೆಸಿ, ಇದರಲ್ಲಿ ಎಪಿಜೂಟಿಕ್ ಅಥವಾ ಪ್ರಾಣಿ ಸಾಂಕ್ರಾಮಿಕ ರೋಗಗಳು ಮತ್ತು ಯುರೋಪಿನಲ್ಲಿ ಜಾನುವಾರು ವ್ಯಾಪಾರದ ಪ್ರಮಾಣಿತ ನಿಯಮಗಳ ಕುರಿತು ಚರ್ಚಿಸಲಾಯಿತು. ಆ ಬಳಿಕ ಅಂತಾರಾಷ್ಟ್ರೀಯ ಪಶುವೈದ್ಯಕೀಯ ಕಾಂಗ್ರೆಸ್ ಅನ್ನು ವಿಶ್ವ ಪಶುವೈದ್ಯಕೀಯ ಕಾಂಗ್ರೆಸ್ ಎನ್ನುವ ಹೆಸರಿನಿಂದ ಕರೆಯಲಾಯಿತು. ಅಂದಿನಿಂದ ಪ್ರಾಣಿಗಳ ಆರೋಗ್ಯ ರಕ್ಷಣೆಗೆ ಹೆಚ್ಚು ನೀಡುವ ಮೂಲಕ ವಿಶ್ವ ಪಶುವೈದ್ಯಕೀಯ ದಿನವನ್ನು ಆಚರಿಸಲಾಗುತ್ತಿದೆ.

ವಿಶ್ವ ಪಶುವೈದ್ಯಕೀಯ ಸಂಘವು ಪ್ರಾಣಿಗಳ ಆರೋಗ್ಯ ಮತ್ತು ಕಲ್ಯಾಣವನ್ನು ಉತ್ತೇಜಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. ಅದರೊಂದಿಗೆ ಜಾನುವಾರುಗಳನ್ನು ಸಾಕಲು ಅಗತ್ಯವಾದ ನೈಸರ್ಗಿಕ ಸಂಪನ್ಮೂಲಗಳ ಲಭ್ಯತೆ ಹಾಗೂ ಉಚಿತ ಆರೋಗ್ಯ ಸೇವೆಗಳನ್ನು ನೀಡುವುದನ್ನು ಪ್ರೋತ್ಸಾಹಿಸಲಾಗುತ್ತದೆ. ವೈದ್ಯಕೀಯ ವೃತ್ತಿಯಲ್ಲಿ ನಿಸ್ವಾರ್ಥ ಸೇವೆಸಲ್ಲಿಸುತ್ತಿರುವ ವೈದ್ಯರನ್ನು ಈ ದಿನದಂದು ಸ್ಮರಿಸಲಾಗುತ್ತದೆ.

ಪ್ರಾಣಿಗಳು ಕೂಡ ನಮ್ಮಂತೆ ಜೀವಿಯಾಗಿದ್ದರೂ ತಮಗಾಗುವ ನೋವು ಸಂಕಟವನ್ನು ಹೇಳಿಕೊಳ್ಳಲು ಆಗದು. ಅವುಗಳ ಆರೋಗ್ಯವು ಹದಗೆಟ್ಟಾಗ ಸರಿಯಾದ ಚಿಕಿತ್ಸೆ ನೀಡುವವರೇ ಈ ಪಶು ವೈದ್ಯರು.

# ಬಂಧನ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ತ್ವರಿತ ವಿಚಾರಣೆಗೆ ಕೇಜ್ರಿವಾಲ್ ಮನವಿ

**ನವದೆಹಲಿ:** ಜಾರಿ ನಿರ್ದೇಶನಾಲಯದಿಂದ ಬಂಧನಕ್ಕೊಳಗಾಗಿರುವ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್, ಬಂಧನವನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ತ್ವರಿತವಾಗಿ ಕೈಗೆತ್ತಿಕೊಳ್ಳಬೇಕೆಂದು ಸುಪ್ರೀಂ ಕೋರ್ಟ್ ಗೆ ಮನವಿ ಮಾಡಿದ್ದಾರೆ.

ಕೇಜ್ರಿವಾಲ್ ಪರ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ ಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದಾರೆ. ಏ.29 ರಂದು ವಿಚಾರಣೆ ನಡೆಸುವುದಾಗಿ ಸುಪ್ರೀಂ ಕೋರ್ಟ್ ಈ ಹಿಂದಿನ ವಿಚಾರಣೆಯಲ್ಲಿ ತಿಳಿಸಿದ್ದರೂ ಈಗ ಮೇ.06 ರಂದು ವಿಚಾರಣೆಗೆ ಪಟ್ಟಿ ಮಾಡಿದೆ ಎಂದು ವಕೀಲರು ಸುಪ್ರೀಂ ಕೋರ್ಟ್ ಗಮನಕ್ಕೆ ತಂದಿದ್ದಾರೆ.

ಸಿಂಘ್ವಿ ಮನವಿಗೆ ಪ್ರತಿಕ್ರಿಯೆ ನೀಡಿರುವ ನ್ಯಾ. ಸಂಜೀವ್ ಖನ್ನಾ ಅವರಿದ್ದ ಪೀಠ, ಇ-ಮೇಲ್ ಕಳಿಸಿ ಅದನ್ನು ಪರಿಗಣಿಸುತ್ತೇವೆ ಎಂದು ಹೇಳಿದೆ.

ಏಪ್ರಿಲ್ 9 ರಂದು ದೆಹಲಿ ಹೈಕೋರ್ಟ್ ನಲ್ಲಿ ತಮ್ಮ ಮನವಿ ತಿರಸ್ಕೃತಗೊಂಡ ಒಂದು ದಿನದ ನಂತರ, ಕೇಜ್ರಿವಾಲ್ ಏಪ್ರಿಲ್ 10 ರಂದು ದೆಹಲಿ ಮದ್ಯ ಹಗರಣದಲ್ಲಿ ತನ್ನ ಬಂಧನ ಮತ್ತು ರಿಮಾಂಡ್ ಅರ್ಜಿಯನ್ನು ವಜಾಗೊಳಿಸುವುದರ ವಿರುದ್ಧ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಬಂಧನ ಮತ್ತು ಬಂಧನದ



ನಿರಾಕರಣೆಯನ್ನು ಪ್ರಶ್ನಿಸಿ ಅವರು ಸಲ್ಲಿಸಿದ ಮೇಲ್ಮನವಿಯು ಉನ್ನತ ನ್ಯಾಯಾಲಯದ ದ್ವಿಸದಸ್ಯ ಪೀಠದಲ್ಲಿ ವಿಚಾರಣೆಗೆ ಬಾಕಿ ಉಳಿದಿತ್ತು.

ದೆಹಲಿ ಮದ್ಯ ಹಗರಣ ಪ್ರಕರಣದ ತನಿಖಾ ಸಂಸ್ಥೆಯಾಗಿರುವ ಜಾರಿ ನಿರ್ದೇಶನಾಲಯ (ಇಡಿ) ಸುಪ್ರೀಂ ಕೋರ್ಟ್‌ಗೆ ಪ್ರತಿಕ್ರಿಯೆ ಸಲ್ಲಿಸಿದ್ದು, 9 ಸಮನ್ಸ್ ಜಾರಿಯಿಂದ ತಪ್ಪಿಸಿಕೊಳ್ಳುವ ಮೂಲಕ ಕೇಜ್ರಿವಾಲ್ ತನ್ನನ್ನು ಉಳಿಸಿಕೊಳ್ಳಲು ಹತಾಶವಾಗಿ ಪ್ರಯತ್ನಿಸಿದ್ದಾರೆ ಎಂದು ಹೇಳಿದೆ.

# ಫ್ರಾನ್ಸ್‌ನಿಂದ ವಿಜಯ್ ಮಲ್ಯ ಗಡಿಪಾರಿಗೆ ಭಾರತ ಆಗ್ರಹ

**ಪ್ಯಾರಿಸ್** : ಉದ್ಯಮಿ ವಿಜಯ್ ಮಲ್ಯರನ್ನು ಯಾವುದೇ ಪೂರ್ವಷರತ್ತು ಇಲ್ಲದೇ ಭಾರತಕ್ಕೆ ಗಡೀಪಾರು ಮಾಡುವ ಪ್ರಸ್ತಾವನೆಯನ್ನು ಅನುಮೋದಿಸುವಂತೆ ಭಾರತದ ಅಧಿಕಾರಿಗಳು ಫ್ರಾನ್ಸ್ ಗೆ ಔಪಚಾರಿಕ ಕೋರಿಕೆ ಸಲ್ಲಿಸಿದ್ದಾರೆ ಎಂದು ವರದಿಯಾಗಿದೆ.

ಎಪ್ರಿಲ್ 15ರಂದು ನಡೆದ ಭಯೋತ್ಪಾದನೆ ನಿಗ್ರಹಕ್ಕೆ ಸಂಬಂಧಿಸಿದ ಭಾರತ-ಫ್ರಾನ್ಸ್ ಜಂಟಿ ಕ್ರಿಯಾ ಸಮಿತಿಯ 16ನೇ ಅಧಿವೇಶನದಲ್ಲಿ ಈ ಕುರಿತ ಕೋರಿಕೆಯನ್ನು ಸಲ್ಲಿಸಲಾಗಿದೆ.

ಮಲ್ಯ ಗಡೀಪಾರಿಗೆ ಸಲ್ಲಿಸಿದ್ದ ಪ್ರಸ್ತಾವನೆಯ ಸ್ಥಿತಿಗತಿಯ ಬಗ್ಗೆ ಮಾಹಿತಿ ನೀಡುವಂತೆ ಭಾರತದ ನಿಯೋಗ ಸಭೆಯಲ್ಲಿ ಒತ್ತಾಯಿಸಿದೆ ಎಂದು ಉನ್ನತ ಮೂಲಗಳನ್ನು ಉಲ್ಲೇಖಿಸಿದ ವರದಿ ಹೇಳಿದೆ. ಕೆಲವೊಂದು ಪೂರ್ವ ಷರತ್ತುಗಳೊಂದಿಗೆ ಗಡೀಪಾರು ಮಾಡುವ ಪ್ರಸ್ತಾವನೆಯನ್ನು ಫ್ರಾನ್ಸ್ ಮುಂದಿರಿಸಿದೆ. ಆದರೆ ಯಾವುದೇ ಪೂರ್ವ ಷರತ್ತುಗಳಿಲ್ಲದೆ ಕೋರಿಕೆಯನ್ನು ಅನುಮೋದಿಸುವಂತೆ ಭಾರತ ಆಗ್ರಹಿಸಿದೆ ಎಂದು ಮೂಲಗಳು ಹೇಳಿವೆ. ಮಲ್ಯ ಯಾವೆಲ್ಲಾ ದೇಶಗಳಲ್ಲಿ ಆಸ್ತಿಯನ್ನು



ಹೊಂದಿದ್ದಾರೋ ಆ ದೇಶಗಳೊಂದಿಗೆ ಮತ್ತು ಗಡೀಪಾರು ಒಪ್ಪಂದ ಏರ್ಪಟ್ಟಿರುವ ರಾಷ್ಟ್ರಗಳೊಂದಿಗೆ ಮಲ್ಯರನ್ನು ಗಡೀಪಾರು ಮಾಡುವ ಬಗ್ಗೆ ಭಾರತ ಸಕ್ರಿಯ ಪ್ರಯತ್ನ ಮುಂದುವರಿಸಿದೆ. ಈ ಯಾವುದೇ ದೇಶಗಳಿಗೆ ಮಲ್ಯ ಪ್ರಯಾಣಿಸಿದರೂ ಆತನನ್ನು ಗಡೀಪಾರು ಮಾಡುವಂತೆ ಒತ್ತಡ ಹೇರುವುದು ಇದರ ಉದ್ದೇಶವಾಗಿದೆ ಎಂದು ಭಾರತದ ಮೂಲಗಳು ಹೇಳಿವೆ.

## ಮನಮೋಹನ್ ಸಿಂಗ್ರ ಮತ್ತೊಂದು ವಿಡಿಯೋ ಬಗ್ಗೆ ಪ್ರಧಾನಿ ಮೋದಿ ಕಿಡಿ

**ಬಿಹಾರ:** ಇತ್ತೀಚೆಗೆ ರಾಜಸ್ಥಾನದಲ್ಲಿ ಚುನಾವಣಾ ಪ್ರಚಾರದಲ್ಲಿ ಭಾಗವಹಿಸಿದ್ದ ಪ್ರಧಾನಿ ನರೇಂದ್ರ ಮೋದಿ ಈ ಹಿಂದೆ, ಮನಮೋಹನ್ ಸಿಂಗ್ ನೇತೃತ್ವದ ಸರ್ಕಾರವಿದ್ದಾಗ ದೇಶದ ಸಂಪತ್ತಿನಲ್ಲಿ ಮೊದಲ ಅಧಿಕಾರ ಮುಸಲ್ಮಾನರಿಗೆ ಎಂದು ಹೇಳುವ ಮೂಲಕ ಕಾಂಗ್ರೆಸ್ ವಿರುದ್ಧ ಗುಡುಗಿದ್ದರು. ಇದೀಗ ಅದೇ ಮನಮೋಹನ್ ಸಿಂಗ್ ಅವರ ಮತ್ತೊಂದು ಹಳೆಯ ವಿಡಿಯೋವೊಂದು ವೈರಲ್ ಆಗಿದ್ದು ಆ ಕುರಿತಾಗಿ ಮತ್ತೆ ಪ್ರಧಾನಿ ಮೋದಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬಿಹಾರದ ಅರಾರಿಯಾದಲ್ಲಿ ಚುನಾವಣಾ ರ್ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, 'ಮನಮೋಹನ್ ಸಿಂಗ್ ಅವರು ದೇಶದ ಸಂಪತ್ತಿನಲ್ಲಿ ಮೊದಲ ಅಧಿಕಾರ ಮುಸಲ್ಮಾನರಿಗೆ ಎಂದು ಯಾವತ್ತು ಹೇಳಿಲ್ಲವೆಂದು ಕಾಂಗ್ರೆಸ್ ಆರೋಪಿಸಿತ್ತು. ಆದರೆ, ಇಂದು ಅವರ ಮತ್ತೊಂದು ಹಳೆಯ ವಿಡಿಯೋ ವೈರಲ್ ಆಗಿದ್ದು, ಅದರಲ್ಲಿ ಅವರು ಅದನ್ನೇ ಹೇಳಿದ್ದಾರೆ. ಈ ಹಿಂದೆ ನನ್ನ ಹೇಳಿಕೆಯನ್ನು ಅಲ್ಲಗಳೆಯುತ್ತಿದ್ದ ಮಾಧ್ಯಮಗಳು ಈಗ ಮೌನವಹಿಸಿವೆ. ಯಾವುದೇ ಸೂಕ್ತ ಮಾಹಿತಿಯಿಲ್ಲದೆ ಅಥವಾ ಸತ್ಯಾಸತ್ಯತೆಯನ್ನು ಪರಿಶೀಲಿಸದೆ ಮಾಧ್ಯಮಗಳು ನನ್ನ ಮೇಲೆ ಹೇಗೆ ದಾಳಿ ಮಾಡುತ್ತಿವೆ ಎಂಬುದನ್ನು ನಾನು ನೋಡುತ್ತಿದ್ದೆ' ಎಂದಿದ್ದಾರೆ.



# ಹೆಂಡತಿಯ ಆಸ್ತಿಯ ಮೇಲೆ ಗಂಡನಿಗೆ ಹಕ್ಕಿಲ್ಲ ಸುಪ್ರೀಂಕೋರ್ಟ್

**ನವದೆಹಲಿ :** ಗಂಡ ಮತ್ತು ಹೆಂಡತಿಯ ಆಸ್ತಿಗೆ ಸಂಬಂಧಿಸಿದ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದ್ದು, ಪತ್ನಿಯ ಆಸ್ತಿಯ ಮೇಲೆ ಪತಿಗೆ ಹಕ್ಕಿಲ್ಲ ಎಂದು ಸುಪ್ರೀಂಕೋರ್ಟ್ ಹೇಳಿದೆ.

ಪತಿಗೆ ತನ್ನ ಹೆಂಡತಿಯ ಮಹಿಳೆಯ ಆಸ್ತಿ ಮೇಲೆ ಯಾವುದೇ ನಿಯಂತ್ರಣವಿಲ್ಲ ಮತ್ತು ತೊಂದರೆಯ ಸಮಯದಲ್ಲಿ ಅದನ್ನು ಬಳಸಬಹುದಾದರೂ ಬಳಕೆಯ ನಂತರ, ಹಣವನ್ನು ತನ್ನ ಹೆಂಡತಿಗೆ ಹಿಂದಿರುಗಿಸುವ ನೈತಿಕ ಬಾಧ್ಯತೆ ಪತಿಗೆ ಇದೆ ಎಂದು ನ್ಯಾಯಾಲಯ ಹೇಳಿದೆ.

25 ಲಕ್ಷ ಮೌಲ್ಯದ ಚಿನ್ನವನ್ನು ಪತಿಗೆ ಹಿಂದಿರುಗಿಸುವಂತೆ ಸುಪ್ರೀಂ ಕೋರ್ಟ್ ಮಹಿಳೆಗೆ ನಿರ್ದೇಶನ ನೀಡಿದೆ. ಈ ಪ್ರಕರಣದಲ್ಲಿ, ಮಹಿಳೆ ತನ್ನ ಮದುವೆಯ ಸಮಯದಲ್ಲಿ, ತನ್ನ ಕುಟುಂಬವು 89 ಚಿನ್ನದ ನಾಣ್ಯಗಳನ್ನು ಉಡುಗೊರೆಯಾಗಿ ನೀಡಿದೆ ಎಂದು ಹೇಳಿದ್ದಾರೆ. ಮದುವೆಯ ನಂತರ ಆಕೆಯ ತಂದೆ ಪತಿಗೆ 2 ಲಕ್ಷ ರೂ.ಗಳ ಚೆಕ್ ನೀಡಿದರು.

ಮದುವೆಯಾದ ಮೊದಲ ರಾತ್ರಿ, ಪತಿ ತನ್ನ ಎಲ್ಲಾ ಆಭರಣಗಳನ್ನು ತೆಗೆದುಕೊಂಡು ಅದನ್ನು ಸುರಕ್ಷಿತವಾಗಿಡುವ ನೆಪದಲ್ಲಿ ತಾಯಿಗೆ ನೀಡಿದ್ದಾನೆ ಎಂದು ಮಹಿಳೆ ನ್ಯಾಯಾಲಯಕ್ಕೆ ತಿಳಿಸಿದ್ದರು. ಪತಿ ಮತ್ತು ಅವನ ತಾಯಿ ತಮ್ಮ ಸಾಲವನ್ನು ಮರುಪಾವತಿಸಲು ತನ್ನ ಎಲ್ಲಾ ಆಭರಣಗಳನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಮಹಿಳೆ ಆರೋಪಿಸಿದ್ದಾರೆ.

ಪತಿ ಮತ್ತು ಆತನ ತಾಯಿ ವಾಸ್ತವವಾಗಿ ದೂರುದಾರ ಮಹಿಳೆಯ ಚಿನ್ನದ ಆಭರಣಗಳನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಮತ್ತು ಆದ್ದರಿಂದ ಅವಳು ಹಾನಿಗೆ ಅರ್ಹಳು ಎಂದು ಕುಟುಂಬ ನ್ಯಾಯಾಲಯವು 2011 ರಲ್ಲಿ ತೀರ್ಪು ನೀಡಿತ್ತು. ಕೌಟುಂಬಿಕ ನ್ಯಾಯಾಲಯ ನೀಡಿದ ಪರಿಹಾರವನ್ನು ಭಾಗಶಃ ರದ್ದುಗೊಳಿಸಿದ ಕೇರಳ ಹೈಕೋರ್ಟ್, ಮಹಿಳೆ ತನ್ನ ಪತಿ ಮತ್ತು ಅವನ ತಾಯಿ ಚಿನ್ನದ ಆಭರಣಗಳನ್ನು ದುರುಪಯೋಗಪಡಿಸಿಕೊಂಡಿರುವುದನ್ನು ಸಾಬೀತುಪಡಿಸಲು ಸಾಧ್ಯವಿಲ್ಲ ಎಂದು ಹೇಳಿದೆ.

ಇದಾದ ಬಳಿಕ ಸಂತ್ರಸ್ತೆ ಸುಪ್ರೀಂ ಕೋರ್ಟ್ ಬಾಗಿಲು ತಟ್ಟಿದ್ದಾರೆ. ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ ಮತ್ತು ದೀಪಂಕರ್ ದತ್ತಾ ಅವರ ನ್ಯಾಯಪೀಠವು 'ಸ್ತ್ರೀಧನ್' ಪತ್ನಿ ಮತ್ತು ಪತಿಯ ಜಂಟಿ ಆಸ್ತಿಯಲ್ಲ ಎಂದು ಹೇಳಿದೆ.



## ಲೋಕಸಭೆ ಚುನಾವಣೆಯ 2ನೇ ಹಂತ

# ಶೇ.61 ಮತದಾನ

**ದೆಹಲಿ:** ಲೋಕಸಭಾ ಚುನಾವಣೆ 2024ರ ಎರಡನೇ ಹಂತದಲ್ಲಿ ಶುಕ್ರವಾರ (ಏಪ್ರಿಲ್ 26) ಸಂಜೆ 7 ಗಂಟೆಯವರೆಗೆ 13 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ 88 ಕ್ಷೇತ್ರಗಳಲ್ಲಿ ಸುಮಾರು ಶೇಕಡಾ 60 ರಷ್ಟು ಮತದಾನವಾಗಿದೆ ಎಂದು ವರದಿಯಾಗಿದೆ.

ಬೆಳಿಗ್ಗೆ 7 ಗಂಟೆಗೆ ಪ್ರಾರಂಭವಾದ ಸಾರ್ವತ್ರಿಕ ಚುನಾವಣೆಯ ಎರಡನೇ ಹಂತದ ಮತದಾನದ 88 ಲೋಕಸಭಾ ಕ್ಷೇತ್ರಗಳಲ್ಲಿ ಸಂಜೆ 7 ಗಂಟೆಯ ವೇಳೆಗೆ ಅಂದಾಜು 60.96 ರಷ್ಟು ಮತದಾನವನ್ನು ದಾಖಲಿಸಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ತ್ರಿಪುರಾದ ಗರಿಷ್ಠ ಮತದಾನವಾಗಿದೆ. ಇಲ್ಲಿ ಶೇ. 77.93 ರಷ್ಟು ಮತ ಚಲಾವಣೆಯಾಗಿದೆ. ಛತ್ತೀಸ್ಗಢದ ಮೂರು ಕ್ಷೇತ್ರಗಳಲ್ಲಿ ಶೇ.72.13 ಹಾಗೂ ಪಶ್ಚಿಮ ಬಂಗಾಳದ ಮೂರು ಕ್ಷೇತ್ರಗಳಲ್ಲಿ ಶೇ.71.84ರಷ್ಟು ಮತದಾನವಾಗಿದೆ. ಮಣಿಪುರದ 13 ಮತಗಟ್ಟೆಗಳಲ್ಲಿ ಶೇ.76.06ರಷ್ಟು



ಮತದಾನವಾಗಿದ್ದರೆ, ಅಸ್ಸಾಂನ ಮತಗಟ್ಟೆಗಳಲ್ಲಿ ಸಂಜೆ 5 ಗಂಟೆಯವರೆಗೆ ಶೇ.70.66ರಷ್ಟು ಮತದಾನವಾಗಿತ್ತು.

ಎರಡನೇ ಹಂತದ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದಲ್ಲೂ ಉತ್ತಮ ಮತದಾನವಾಗಿದ್ದು, ಮಂಡ್ಯದಲ್ಲಿ ಶೇಕಡಾ 81.48 ರಷ್ಟು ಮತದಾನವಾಗಿದೆ. ಕೋಲಾರದಲ್ಲಿ ಶೇ 78.07, ತುಮಕೂರಿನಲ್ಲಿ ಶೇ 77.70 ಹಾಗೂ ಹಾಸನದಲ್ಲಿ ಶೇಕಡಾ 77.50 ರಷ್ಟು ಮತದಾನವಾಗಿದೆ.

ಮಹಾರಾಷ್ಟ್ರದಲ್ಲಿ ಶೇ.53.51ರಷ್ಟು ಮತದಾನವಾಗಿದೆ. ಬಿಹಾರದಲ್ಲಿ ಮತದಾನದ ಶೇಕಡಾವಾರು ಮೊದಲ ಹಂತಕ್ಕಿಂತ ಹೆಚ್ಚಾಗಿದ್ದರೆ, ಉತ್ತರ ಪ್ರದೇಶದಲ್ಲಿ ಶೇ 53.03 ರಷ್ಟು ಮತದಾನವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಉತ್ತರ ಪ್ರದೇಶದ ಎಂಟು ಲೋಕಸಭಾ ಕ್ಷೇತ್ರಗಳಲ್ಲಿ ಸಂಜೆ 5 ಗಂಟೆಯವರೆಗೆ ಶೇ 52.74 ರಷ್ಟು ಮತದಾನ ದಾಖಲಾಗಿತ್ತು.

## ಚೀನಾಕ್ಕೆ ಆಂಟನಿ ಬ್ಲಿಂಕೆನ್ ಭೇಟಿ

**ಬೀಜಿಂಗ್:** ವಿಶ್ವದ ಎರಡು ಬೃಹತ್ ಆರ್ಥಿಕತೆಗಳಾದ ಅಮೆರಿಕ ಮತ್ತು ಚೀನಾಗಳು ಪಾಲುದಾರರಾಗಬೇಕು, ಸ್ಪರ್ಧಿಗಳಲ್ಲ ಎಂದು ಚೀನಾ ಅಧ್ಯಕ್ಷ ಕ್ಸಿಜಿಂಪಿಂಗ್ ಶುಕ್ರವಾರ ಹೇಳಿದ್ದಾರೆ. ಚೀನಾಕ್ಕೆ ಭೇಟಿ ನೀಡಿರುವ ಅಮೆರಿಕದ ವಿದೇಶಾಂಗ ಸಚಿವ ಆಂಟನಿ ಬ್ಲಿಂಕೆನ್ರನ್ನು ಬೀಜಿಂಗ್ನ 'ಗ್ರೇಟ್ ಹಾಲ್ ಆಫ್ ದಿ ಪೀಪಲ್'ನಲ್ಲಿ ಭೇಟಿಯಾದ ಕ್ಸಿಜಿಂಪಿಂಗ್, ಕಳೆದ ನವೆಂಬರ್‌ನಲ್ಲಿ ತಾನು ಸ್ಯಾನ್ಫ್ರಾನ್ಸಿಸ್ಕೋದಲ್ಲಿ ಅಮೆರಿಕ ಅಧ್ಯಕ್ಷ ಜೋ ಬೈಡನ್ರನ್ನು ಭೇಟಿಯಾದ ಬಳಿಕ ಎರಡೂ ದೇಶಗಳು ಕೆಲವು ಧನಾತ್ಮಕ ಪ್ರಗತಿ ಸಾಧಿಸಿವೆ. ಆದರೂ ಉಭಯ ದೇಶಗಳ ನಡುವಿನ ಸಂಬಂಧದ ಕುರಿತ ಹಲವು ಸಮಸ್ಯೆಗಳು ಪರಿಹಾರವಾಗಬೇಕಿದೆ. ಈ ನಿಟ್ಟಿನಲ್ಲಿ ಪ್ರಯತ್ನ ನಡೆಸಲು ಈಗಲೂ ಅವಕಾಶವಿದೆ ಎಂದರು. ಚೀನಾದ ಅಭಿವೃದ್ಧಿ, ಬೆಳವಣಿಗೆಯ ಬಗ್ಗೆ ಅಮೆರಿಕ ಧನಾತ್ಮಕ ಧೋರಣೆ ವಹಿಸುವುದಾಗಿ ತಾನು ನಿರೀಕ್ಷಿಸುತ್ತೇನೆ. ಮೂಲಭೂತ ಸಮಸ್ಯೆ ಪರಿಹಾರವಾದರೆ ಆಗ ಸಂಬಂಧಗಳು ದೃಢಗೊಳ್ಳಬಹುದು ಮತ್ತು ಉತ್ತಮವಾಗಬಹುದು ಹಾಗೂ ಪ್ರಗತಿ ಸಾಧಿಸಬಹುದು ಎಂದು ಕ್ಸಿಜಿಂಪಿಂಗ್ ಇದೇ ಸಂದರ್ಭ ಒತ್ತಿಹೇಳಿರುವುದಾಗಿ ಉನ್ನತ ಮೂಲಗಳನ್ನು ಉಲ್ಲೇಖಿಸಿ ಸರಕಾರಿ ಸ್ವಾಮ್ಯದ ಸಿಸಿಟಿವಿ ವರದಿ ಮಾಡಿದೆ. ಒಂದು ವರ್ಷದೊಳಗೆ ಎರಡನೇ ಬಾರಿಗೆ ಚೀನಾಕ್ಕೆ ಭೇಟಿ ನೀಡಿರುವ ಬ್ಲಿಂಕೆನ್ ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ ಜತೆ ಸಭೆ ನಡೆಸಿದರು. ಈ ಸಭೆ ರಚನಾತ್ಮಕವಾಗಿತ್ತು . ರಶ್ಯ, ತೈವಾನ್ ಹಾಗೂ ವ್ಯಾಪಾರ ಸಂಬಂಧಗಳ ಬಗ್ಗೆ ಉಭಯ ಮುಖಂಡರು ವಿಸ್ತೃತ ಚರ್ಚೆ ನಡೆಸಿರುವುದಾಗಿ ವರದಿಯಾಗಿದೆ. ಸಭೆಯ ಬಳಿಕ ಮಾಧ್ಯಮದವರ ಜತೆ ಮಾತನಾಡಿದ ಚೀನಾದ ವಿದೇಶಾಂಗ ಸಚಿವ ವಾಂಗ್ ಯಿ, ಕಳೆದ ವರ್ಷ ಬೈಡನ್ ಮತ್ತು ಜಿಂಪಿಂಗ್ ನಡುವೆ ನಡೆದ ಸಭೆಯ ಬಳಿಕ ಎರಡೂ ದೇಶಗಳ ಸಂಬಂಧ ಸ್ಥಿರಗೊಳ್ಳಲು ಆರಂಭಿಸಿದೆ.



# ಸರಕಾರಿ ಸಂಸ್ಥೆಗಳ ವಿರುದ್ಧ ಹೇಳಿಕೆ ನೀಡದಂತೆ ಇಮ್ರಾನ್ ಖಾನ್ ಸೂಚನೆ

**ಇಸ್ಲಮಾಬಾದ್:** ಸರಕಾರಿ ಸಂಸ್ಥೆಗಳು ಹಾಗೂ ಸಿಬಂದಿಗಳ ವಿರುದ್ಧ ಹೇಳಿಕೆ ನೀಡಬಾರದು ಎಂದು ಪಾಕಿಸ್ತಾನದ ವಿಶೇಷ ನ್ಯಾಯಾಲಯ ಮಾಜಿ ಪ್ರಧಾನಿ ಇಮ್ರಾನ್ಖಾನ್ ಹಾಗೂ ಅವರ ಪತ್ನಿ ಬುಷ್ರಾ ಬೀಬಿಗೆ ಸೂಚಿಸಿರುವುದಾಗಿ ಮೂಲಗಳನ್ನು ಉಲ್ಲೇಖಿಸಿ 'ದಿ ಎಕ್ಸ್‌ಪ್ರೆಸ್ ಟ್ರಿಬ್ಯೂನ್' ವರದಿ ಮಾಡಿದೆ.

ನ್ಯಾಯಾಲಯದಲ್ಲಿ ವಿಚಾರಣೆ ಸಂದರ್ಭ ಸರಕಾರಿ ಸಂಸ್ಥೆಗಳ ವಿರುದ್ಧ ಪ್ರಚೋದನಕಾರಿ ಹೇಳಿಕೆ ನೀಡಬಾರದು ಎಂದು ಇಮ್ರಾನ್ ಮತ್ತವರ ಪತ್ನಿಗೆ ಸೂಚಿಸಿರುವ ನ್ಯಾಯಾಲಯ, ಇಂತಹ ಪ್ರಚೋದನಕಾರಿ ಹೇಳಿಕೆಯನ್ನು ಪ್ರಕಟಿಸದಂತೆ ಮಾಧ್ಯಮಗಳಿಗೆ ಆದೇಶ ನೀಡಿದೆ.



ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್(ಪಿಟಿಐ) ಪಕ್ಷದ ಸ್ಥಾಪಕ ಇಮ್ರಾನ್ಖಾನ್ ಸೇನೆ, ನ್ಯಾಯಾಂಗ, ಸೇನಾ ಮುಖ್ಯಸ್ಥರು ಸೇರಿದಂತೆ ಸರಕಾರಿ ಸಂಸ್ಥೆಗಳು ಹಾಗೂ ಅಧಿಕಾರಿಗಳ ವಿರುದ್ಧ ಪ್ರಚೋದನಕಾರಿ ರಾಜಕೀಯ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಇಂತಹ ಹೇಳಿಕೆಗಳು ನ್ಯಾಯಾಂಗದ ಸೌಹಾರ್ದತೆಗೆ ಅಡ್ಡಿಯಾಗಿವೆ ಮತ್ತು ನ್ಯಾಯ ವಿತರಣೆಯಂತಹ ನ್ಯಾಯಾಂಗದ ಕಾರ್ಯಗಳಿಗೆ ಅಡ್ಡಿಪಡಿಸುತ್ತವೆ ಎಂದು ನ್ಯಾಯಾಲಯದ ಆದೇಶ ತಿಳಿಸಿದೆ. 'ನ್ಯಾಯಾಲಯದ ಶಿಷ್ಟಾಚಾರಕ್ಕೆ ಅಡ್ಡಿಪಡಿಸುವ ರಾಜಕೀಯ ಅಥವಾ ಪ್ರಚೋದಕ ಹೇಳಿಕೆಗಳನ್ನು ನೀಡದಂತೆ ಪ್ರಾಸಿಕ್ಯೂಷನ್, ಆರೋಪಿಗಳು ಹಾಗೂ ಅವರ ಪರ ವಕೀಲರಿಗೆ ಸೂಚಿಸಿದೆ ಎಂದು ವರದಿ ಹೇಳಿದೆ. 2018ರಿಂದ 2022ರವರೆಗೆ ಪ್ರಧಾನಿಯಾಗಿದ್ದ ಇಮ್ರಾನ್ ಖಾನ್, ಹಲವು ಪ್ರಕರಣಗಳನ್ನು ಎದುರಿಸುತ್ತಿದ್ದು ತೋಷಖಾನಾ ಪ್ರಕರಣದಲ್ಲಿ 14 ವರ್ಷ ಜೈಲುಶಿಕ್ಷೆಗೆ ಗುರಿಯಾಗಿದ್ದಾರೆ.

## ಶಸ್ತ್ರಾಸ್ತ್ರ ತ್ಯಜಿಸಲು ಸಿದ್ಧ: ಹಮಾಸ್

**ಗಾಝಾ:** 1967ರ ಪೂರ್ವದ ಗಡಿಗಳನ್ನು ಹೊಂದಿರುವ ಸ್ವತಂತ್ರ ಫೆಲೆಸ್ತೀನ್ ರಾಷ್ಟ್ರ ಸ್ಥಾಪನೆಯಾದರೆ ಶಸ್ತ್ರಾಸ್ತ್ರ ತ್ಯಜಿಸಿ ರಾಜಕೀಯ ಪಕ್ಷವಾಗಿ ಪರಿವರ್ತನೆಗೊಳ್ಳಲು ಹಮಾಸ್ ಸಿದ್ಧವಿದೆ ಎಂದು ಹಮಾಸ್ನ ಉನ್ನತ ರಾಜಕೀಯ ಮುಖಂಡರನ್ನು ಉಲ್ಲೇಖಿಸಿ 'ದಿ ಅಸೋಸಿಯೇಟೆಡ್ ಪ್ರೆಸ್' ವರದಿ ಮಾಡಿದೆ. ಇಸ್ರೇಲ್ನೊಂದಿಗೆ ಐದು ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಕದನವಿರಾಮಕ್ಕೆ ಹಮಾಸ್ ಸಿದ್ಧ ಎಂದು ಹಮಾಸ್ನ ರಾಜಕೀಯ ವಿಭಾಗದ ಉನ್ನತ ಮುಖಂಡ ಖಲೀಲ್ ಅಲ್-ಹಯಾ ಹೇಳಿದ್ದಾರೆ. ಗಾಝಾದಲ್ಲಿ ಕದನ ವಿರಾಮ ಜಾರಿ ಹಾಗೂ ಒತ್ತೆಯಾಳುಗಳ ವಿನಿಮಯಕ್ಕೆ ಸಂಬಂಧಿಸಿ ನಡೆಯುತ್ತಿರುವ ಸಂಧಾನ ಮಾತುಕತೆಯಲ್ಲಿ ಖಲೀಲ್ ಅವರು ಹಮಾಸ್ನ ಪ್ರತಿನಿಧಿಯಾಗಿದ್ದಾರೆ.

ಟರ್ಕಿಯ ಇಸ್ತಾನ್ಬುಲ್ನಲ್ಲಿ ಮಾಧ್ಯಮದ ಜತೆ ಮಾತನಾಡಿದ ಖಲೀಲ್, ಗಾಝಾ ಮತ್ತು ಪಶ್ಚಿಮದಂಡೆಯಲ್ಲಿ ಏಕೀಕೃತ ಸರಕಾರ ರಚನೆಗೆ ಹಮಾಸ್ ಫೆಲೆಸ್ತೀನ್ ಲಿಬರೇಷನ್ ಆರ್ಗನೈಸೇಷನ್(ಪಿಎಲ್ಒ) ಜತೆ ಸೇರಲು ಸಿದ್ಧವಿದೆ ಎಂದಿದ್ದಾರೆ. ಗಾಝಾ ಪಟ್ಟಿ ಮತ್ತು ಪಶ್ಚಿಮದಂಡೆಯಲ್ಲಿ ಸಂಪೂರ್ಣ ಸಾರ್ವಭೌಮ ಫೆಲೆಸ್ತೀನ್ ರಾಷ್ಟ್ರ ಸ್ಥಾಪನೆಯನ್ನು ಮತ್ತು ಅಂತರಾಷ್ಟ್ರೀಯ ನಿರ್ಣಯಗಳಿಗೆ ಅನುಗುಣವಾಗಿ ಫೆಲೆಸ್ತೀನಿಯನ್ ನಿರಾಶ್ರಿತರು ಹಿಂದಿರುಗಿ ಬರಲು ಅವಕಾಶ ನೀಡುವ ಕ್ರಮವನ್ನು ಹಮಾಸ್ ಸಮ್ಮತಿಸುತ್ತದೆ ಎಂದರು.

# ಜಮ್ಮುಕಾಶ್ಮೀರದಲ್ಲಿ ಗುಂಡಿನ ದಾಳಿ : ಉಗ್ರರ ಹತ್ಯೆ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಬಾರಾಮುಲ್ಲದಲ್ಲಿ ಭಯೋತ್ಪಾದಕರು ಮತ್ತು ಭದ್ರತಾ ಪಡೆಗಳ ನಡುವೆ ನಡೆದ ಎನ್ಕೌಂಟರ್‌ನಲ್ಲಿ ಇಬ್ಬರು ಭಯೋತ್ಪಾದಕರು ಮೃತಪಟ್ಟಿದ್ದು, ಇಬ್ಬರು ಸೇನಾ ಸಿಬ್ಬಂದಿ ಗಾಯಗೊಂಡಿರುವ ಘಟನೆ ನಡೆದಿದೆ.



ಉತ್ತರ ಕಾಶ್ಮೀರದ ಸೋಪೋರ್ ಪ್ರದೇಶದ ಚೆಕ್ ಮೊಹಲ್ಲಾ ನೌಪೋರಾದಲ್ಲಿ ಗುರುವಾರ ಭಯೋತ್ಪಾದಕರು ಮತ್ತು ಭದ್ರತಾ ಪಡೆಗಳ ನಡುವೆ ಎನ್ಕೌಂಟರ್ ಪ್ರಾರಂಭಗೊಂಡು, ಶುಕ್ರವಾರ ಮುಂಜಾನೆಯೂ ಗುಂಡಿನ ದಾಳಿ ಮುಂದುವರೆದಿದೆ. ಇದುವರೆಗೆ ಇಬ್ಬರು ಉಗ್ರರು ಬಲಿಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಎನ್ಕೌಂಟರ್‌ನಲ್ಲಿ ಗಾಯಗೊಂಡ ಇಬ್ಬರು ಸೇನಾ ಸಿಬ್ಬಂದಿಯನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ. ಗುರುವಾರ ನಡೆದ ಎನ್ಕೌಂಟರ್‌ನಲ್ಲಿ ಸಮೀಪದ ನಾಗರಿಕರೊಬ್ಬರು ಗಾಯಗೊಂಡಿದ್ದಾರೆ. ಎನ್ಕೌಂಟರ್ ನಡೆದ ಪ್ರದೇಶದಲ್ಲಿ ಕಾರ್ಯಾಚರಣೆ ಮುಂದುವರಿದಿದೆ ಎಂಬ ಮಾಹಿತಿಯನ್ನು ಅಧಿಕಾರಿಗಳು ನೀಡಿದ್ದಾರೆ.

## ದೇಶಾದ್ಯಂತ X ಸೇವೆ ಡೌನ್

**ನವದೆಹಲಿ:** ಭಾರತದಲ್ಲಿ ಹಲವು x (ಟ್ವಿಟರ್) ಬಳಕೆದಾರರು ಪರದಾಡುವಂತಾಗಿದೆ. ದೇಶಾದ್ಯಂತ ಎರಡನೇ ಹಂತದ ಮತದಾನದ ವೇಳೆ



ಎಕ್ಸ್ ಸೇವೆ ಡೌನ್ ಆಗಿ ಬಳಕೆದಾರರ ಆಕ್ರೋಶಕ್ಕೆ ಕಾರಣವಾಗಿತ್ತು. ಭಾರತದಲ್ಲಿ ಹಲವು ಬಳಕೆದರರು ಎಕ್ಸ್ ಸೇವೆ ಡೌನ್ ಆಗಿರುವ ಕುರಿತು ಅಭಿಪ್ರಾಯ ಹಂಚಿಕೊಂಡಿದ್ದಾರೆ. ಇದೇ ವೇಳೆ ಡೌನ್ಡಿಟೆಕ್ಟರ್ ಈ ಕುರಿತು ವರದಿ ಮಾಡಿದೆ. ಡೌನ್ಡಿಟೆಕ್ಟರ್ ವರದಿ ಪ್ರಕಾರ, ಎಕ್ಸ್ ವೆಬ್ಸೈಟ್ ಹಾಗೂ ಆಯಪ್ನಲ್ಲಿ ಸಮಸ್ಯೆ ಕಾಣಿಸಿಕೊಂಡಿದೆ ಎಂದು ವರದಿ ಮಾಡಿದೆ. ಮಧ್ಯಾಹ್ನ ಸುಮಾರು 1.15ರ ಹೊತ್ತಿಗೆ ಸಮಸ್ಯೆ ಕಾಣಿಸಿಕೊಂಡಿರುವ ಕುರಿತು 145ಕ್ಕೂ ಅಧಿಕ ಬಳಕೆದಾರರು ದೂರು ನೀಡಿದ್ದರು ಎಂದಿದೆ. ಶೇಕಡಾ 57 ರಷ್ಟು ಬಳಕೆದಾರರು ಸರ್ವರ್ ಸಮಸ್ಯೆ ಎದುರಿಸಿದ್ದಾರೆ ಎಂದು ವರದಿ ಮಾಡಿದೆ. ಇನ್ನು ಶಕೇಡಾ 36 ರಷ್ಟು ಬಳಕೆದಾರರು ಎಕ್ಸ್ ಆಯಪ್ನಿಂದ ಸಮಸ್ಯೆಯಾಗಿದೆ ಎಂದು ವರದಿ ಮಾಡಿದ್ದಾರೆ. ಇನ್ನು ಶೇಕಡಾ 7 ರಷ್ಟು ಬಳಕೆದಾರರು ಲಾಗಿನ್ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ದೂರು ನೀಡಿದ್ದಾರೆ. ಬಳಕೆದಾರರು ಇತರ ಸಾಮಾಜಿಕ ಮಾಧ್ಯಮದಲ್ಲೂ ಈ ಕುರಿತು ಆಕ್ರೋಶ ಹೊರಹಾಕಿದ್ದಾರೆ.

## ಕಾಂಗ್ರೆಸ್ ಅಭ್ಯರ್ಥಿ ನೀಲೇಶ್ ಕುಂಭನಿ ಪಕ್ಷದಿಂದ ಅಮಾನತು!

**ಸೂರತ್:** ನಾಮಪತ್ರ ತಿರಸ್ಕೃತಗೊಂಡಿದ್ದ ಸೂರತ್ ಕಾಂಗ್ರೆಸ್ ಅಭ್ಯರ್ಥಿ ನೀಲೇಶ್ ಕುಂಭನಿ ಪಕ್ಷದಿಂದ ಅಮಾನತುಗೊಂಡಿದ್ದಾರೆ. ನಾಮಪತ್ರಗಳಲ್ಲಿನ ವ್ಯತ್ಯಾಸಗಳ ಕಾರಣದಿಂದ ಸೂರತ್ ಕಾಂಗ್ರೆಸ್ ಅಭ್ಯರ್ಥಿ ನೀಲೇಶ್ ಕುಂಭನಿ ನಾಮಪತ್ರ ತಿರಸ್ಕೃತಗೊಂಡಿತ್ತು. ಪರಿಣಾಮ ಬಿಜೆಪಿಯ ಮುಖೇಶ್ ದಲಾಲ್ ಅವಿರೋಧವಾಗಿ ಲೋಕಸಭೆಗೆ ಆಯ್ಕೆಗೊಂಡಿದ್ದರು.

ನೀಲೇಶ್ ಕುಂಭನಿ ಅಮಾನತು ಬಗ್ಗೆ ಪ್ರಕಟಣೆಯನ್ನು ಬಿಡುಗಡೆ ಮಾಡಿರುವ ಕಾಂಗ್ರೆಸ್ ಪಕ್ಷ, ಚರ್ಚೆಗಳ ನಂತರ ಕುಂಭನಿ ಅವರನ್ನು ಅಮಾನತುಗೊಳಿಸುವುದಕ್ಕೆ ನಿರ್ಧರಿಸಲಾಗಿದೆ ಎಂದು ಕಾಂಗ್ರೆಸ್ ಹೇಳಿದೆ. ಕುಂಭನಿ ಅವರ ನಿರ್ಲಕ್ಷ್ಯದ ಕಾರಣದಿಂದ ಅಥವಾ ಬಿಜೆಪಿ ಜೊತೆ ಶಾಮೀಲಾದ ಪರಿಣಾಮ ಅವರ ನಾಮಪತ್ರ ತಿರಸ್ಕೃತಗೊಂಡಿದೆ ಎಂದು ಕಾಂಗ್ರೆಸ್ ಆರೋಪಿಸಿದೆ. ನಿಮಗೆ ನ್ಯಾಯಯುತವಾಗಿರಲು, ನಿಮ್ಮ ಪ್ರಕರಣವನ್ನು ವಿವರಿಸಲು ನಾವು ನಿಮಗೆ ಸಮಯ ನೀಡಿದ್ದೇವೆ ಆದರೆ ಪಕ್ಷದ ಶಿಸ್ತು ಸಮಿತಿಯ ಮುಂದೆ ಬರುವ ಬದಲು ನೀವು ಅಜ್ಞಾತವಾಗಿ ಹೋಗಿದ್ದೀರಿ. ನಿಮ್ಮ ನಾಮಪತ್ರವನ್ನು ಅಧಿಕಾರಿಗಳು ತಿರಸ್ಕರಿಸಿದ ನಂತರ, ಬಿಜೆಪಿ ಮುಂದುವರಿದು, ಇತರ ಎಂಟು ಅಭ್ಯರ್ಥಿಗಳ ನಾಮಪತ್ರವನ್ನು ಹಿಂತೆಗೆದುಕೊಂಡಿತು. ಇದು ಸೂರತ್‌ನ ಜನರ ಮತದಾನದ ಹಕ್ಕನ್ನು ಕಸಿದುಕೊಂಡಿದೆ ಎಂದು ಬಾಲು ಪಟೇಲ್ ನೇತೃತ್ವದ ಕಾಂಗ್ರೆಸ್ ಶಿಸ್ತು ಸಮಿತಿ ಹೇಳಿದೆ. ನಿಮ್ಮ ಈ ಕ್ರಮದಿಂದ ಸೂರತ್‌ನ ಜನರು ಮತ್ತು ಪಕ್ಷದ ಕಾರ್ಯಕರ್ತರು ತೀವ್ರ ಕೋಪಗೊಂಡಿದ್ದಾರೆ ಮತ್ತು ವಿವಿಧ ರೀತಿಯಲ್ಲಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷವು ನಿಮ್ಮನ್ನು ಆರು ವರ್ಷಗಳ ಕಾಲ ಪಕ್ಷದಿಂದ ಅಮಾನತು ಮಾಡಲು ನಿರ್ಧರಿಸಿದೆ ಎಂದು ಪತ್ರಿಕಾ ಹೇಳಿಕೆಯಲ್ಲಿ ಕಾಂಗ್ರೆಸ್ ತಿಳಿಸಿದೆ.

# ತಾಂಜೇನಿಯಾದಲ್ಲಿ ಮಳೆ ಆರ್ಭಟ

ತಾಂಜೇನಿಯಾ: ಪೂರ್ವ ಆಫ್ರಿಕಾದ ದೇಶ ತಾಂಜೇನಿಯಾದಲ್ಲಿ ಭಾರಿ ಮಳೆಯಿಂದಾಗಿ ಕನಿಷ್ಠ 150ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ. ಮಳೆಯಿಂದ 200,000ಕ್ಕೂ ಹೆಚ್ಚು ಜನರು ನಿರಾಶ್ರಿತರಾಗಿದ್ದಾರೆ. 51,000 ಮನೆಗಳಿಗೆ ಹಾನಿಯಾಗಿದೆ ಎಂದು ತಾಂಜೇನಿಯಾ ಪ್ರಧಾನಿ ಕಾಸಿಮ್ ಮಜಲಿವಾ ಹೇಳಿದ್ದಾರೆ.

ಎಲ್ ನಿನೋ ಹವಾಮಾನ ಮಾದರಿಗಳು ಹವಾಮಾನವನ್ನು ಹದಗೆಡಿಸಿದೆ. ಪ್ರವಾಹಕ್ಕೆ ಕಾರಣವಾಗಿದೆ ಮತ್ತು ರಸ್ತೆಗಳು, ಸೇತುವೆಗಳು ಮತ್ತು ರೈಲ್ವೆಗಳನ್ನು ನಾಶಪಡಿಸಿದೆ ಎಂದು ಪ್ರಧಾನಿ ಕಾಸಿಮ್ ಮಜಲಿವಾ ಸಂಸತ್ತಿನಲ್ಲಿ ಹೇಳಿದರು.

ದೇಶದ ವಿವಿಧ ಭಾಗಗಳಲ್ಲಿ ಬಲವಾದ ಗಾಳಿ, ಪ್ರವಾಹ ಮತ್ತು ಭೂಕುಸಿತದೊಂದಿಗೆ ಭಾರಿ ಎಲ್ ನಿನೊ ಮಳೆ ಗಮನಾರ್ಹ ಹಾನಿಯನ್ನುಂಟು ಮಾಡಿದೆ ಎಂದು ಮಜಲೀವಾ ಗುರುವಾರ ಸಂಸತ್ತಿಗೆ ತಿಳಿಸಿದರು.



### ಏನಿದು ಎಲ್ ನಿನೋ?

ಎಲ್ ನಿನೋ ನೈಸರ್ಗಿಕವಾಗಿ ಸಂಭವಿಸುವ ಹವಾಮಾನ ಮಾದರಿಯಾಗಿದ್ದು, ಸಾಮಾನ್ಯವಾಗಿ ಪ್ರಪಂಚದಾದ್ಯಂತ ಹೆಚ್ಚುತ್ತಿರುವ ಶಾಖ, ಜೊತೆಗೆ ಬರಗಾಲ ಮತ್ತು ಭಾರಿ ಮಳೆಯೊಂದಿಗೆ ಸಂಬಂಧಿಸಿದೆ. ವಿನಾಶಕಾರಿ ಮಳೆಯ ಕಾರಣಗಳ ಬಗ್ಗೆ ಮಾತನಾಡಿದ ಕಾಸಿಮ್ ಮಜಲಿವಾ, ಅರಣ್ಯನಾಶ, ಕೃಷಿ ಮತ್ತು ಅನಿಯಂತ್ರಿತ ಜಾನುವಾರು ಮೇಯಿಸುವಿಕೆಯಂತಹ ಸುಸ್ಥಿರವಲ್ಲದ ಕೃಷಿ ಪದ್ಧತಿಗಳು ಇದಕ್ಕೆ ಕಾರಣವಾಗಬಹುದು ಎಂದು ಹೇಳಿದರು.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ‘ರಾಮಾಯಣ’ ಸಿನಿಮಾ ಬಗ್ಗೆ ಯಶ್ ಹೇಳಿದ್ದೇನು?

ನ್ಯಾಷನಲ್ ಸ್ಟಾರ್‌ಯಶ್ ನಿನ್ನೆ ಹೊಸಕೆರೆಹಳ್ಳಿಯಲ್ಲಿ ಮತದಾನ ಮಾಡಿದ್ದಾರೆ. ದೇಶಕ್ಕಾಗಿ ಮತದಾನ ಮಾಡಬೇಕು ಎಂದು ಯಂಗ್ ಸ್ಟರ್‌ಗೆ ಯಶ್ ಕಿವಿಹಿಂಡಿದ್ದಾರೆ. ಈ ವೇಳೆ, ಮಾಧ್ಯಮಎದುರು ಬಂದಯಶ್‌ಗೆ ‘ರಾಮಾಯಣ’ ಸಿನಿಮಾ ಬಗ್ಗೆ ಪ್ರಶ್ನೆಎದುರಾಗಿದೆ.ಈ ಬಗ್ಗೆ ಪ್ರತಿಕ್ರಿಯೆ ನೀಡಿದ್ದಾರೆ.

‘ರಾಮಾಯಣ’ ಸಿನಿಮಾ ಬಗ್ಗೆ ಯಶ್ ಮಾತನಾಡಿ, ಈಗ ವೋಟಿಂಗ್ ನಡೆಯುತ್ತಿದೆ. ವಿಷಯವನ್ನುಡೈವರ್ಟ್ ಮಾಡಬೇಡಿ.ಈ ವಿಚಾರದ ಬಗ್ಗೆ ಮುಂದೆ ಮಾತಾಡೋಣ.ನಾನು ಎಲ್ಲೂ ಹೋಗಲ್ಲಇಲ್ಲೇಇರುತ್ತೇನೆ ಮಾತಾಡೋಣಎಂದುಯಶ್ ರಿಯಾಕ್ಟ್ ಮಾಡಿದ್ದರು.ಬಳಿಕ ‘ರಾಮಾಯಣ’ ಸಿನಿಮಾ ಬಗ್ಗೆ ಯಾವುದೇಅಪ್‌ಡೇಟ್ ನೀಡಲಿಲ್ಲ.

‘ರಾಮಾಯಣ’ ಸಿನಿಮಾ ಬಹುಕೋಟಿ ವೆಚ್ಚದಲ್ಲಿ ಮೂಡಿ ಬರುತ್ತಿದೆ.ನಿತೇಶ್‌ತಿವಾರಿ ಈ ಸಿನಿಮಾ ನಿರ್ದೇಶನ ಮಾಡುತ್ತಿದ್ದಾರೆ.ರಣ್‌ಬೀರ್ ಕಪೂರ್‌ರಾಮನಾದ್ರೆ, ಸಾಯಿ ಪಲ್ಲವಿ ಸೀತೆಯಾಗಿ ಕಾಣಿಸಿಕೊಂಡಿದ್ದಾರೆ. ಈ ಚಿತ್ರಕ್ಕೆಯಶ್‌ಕೂಡ ಸಹ ನಿರ್ಮಾಪಕರಾಗಿದ್ದಾರೆ.



ಕೆಜಿಎಫ್ 2 ಸಕ್ಸಸ್ ನಂತರಯಶ್ ‘ಟಾಕ್ಸಿಕ್’ ಸಿನಿಮಾಗಾಗಿ ನಟನೆಯಜೊತೆ ನಿರ್ಮಾಣದ ಹೊಣೆಕೂಡ ಹೊತ್ತಿದ್ದಾರೆ. ಈ ಚಿತ್ರದ ಬಗ್ಗೆ ಅಭಿಮಾನಿಗಳಿಗೆ ಭಾರೀ ನಿರೀಕ್ಷೆ ಇದೆ.

# ‘ಜವಾನ್’ ಬೆಡಗಿ ಹಾಟ್ ಅವತಾರ



ಕಾಲಿವುಡ್ ಬೆಡಗಿ ನಯನತಾರಾ ಬ್ಲ್ಯಾಕ್ ವೈಟ್ ಲುಕ್‌ನಲ್ಲಿ ಮಿಂಚಿದ್ದಾರೆ. ಹಾಟ್ ಆಗಿ ಕಾಣಿಸಿಕೊಂಡಿರುವ ನಯನತಾರಾರನ್ನು ನೋಡಿ ಅಭಿಮಾನಿಗಳು ಬೆರಗಾಗಿದ್ದಾರೆ. ಸದ್ಯ ಸುಂದರ ಫೋಟೋಗಳನ್ನು ನಟಿ ಹಂಚಿಕೊಳ್ಳುವ ಮೂಲಕ ನಟಿ ಸದ್ದು ಮಾಡುತ್ತಿದ್ದಾರೆ.

40ನೇ ವಯಸ್ಸಿನಲ್ಲಿ ಟೀನೇಜ್ ಹುಡುಗಿಯರಿಗೆ ಠಕ್ಕರ್ ಕೊಡುವಷ್ಟು ನಟಿ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಗೌನ್‌ನಲ್ಲಿ ಸಖತ್‌ಆಗಿಯೇ ನಟಿ ಕಾಣಿಸಿಕೊಂಡಿದ್ದಾರೆ. ಇದು ಹೊಸ ಸಿನಿಮಾದ ಲುಕಾ ಎಂದು ಫ್ಯಾನ್ಸ್ ಪ್ರಶ್ನಿಸಿದ್ದಾರೆ. ಅಂದಹಾಗೆ, ಸೌತ್ ಸಿನಿಮಾಗಳಲ್ಲಿಯೇ ಮೋಡಿ ಮಾಡಿದ್ದ ಈ ಚೆಲುವೆಗೆ ಬಾಲಿವುಡ್ ನಲ್ಲಿಡಿಮ್ಯಾಂಡ್ ಜಾಸ್ತಿ ಆಗಿದೆ. ಶಾರುಖ್‌ಖಾನ್ ಜೊತೆರೊಮ್ಯಾನ್ಸ್ ಮಾಡಿದ್ದ ನಟಿ ಹಲವು ಹಿಂದಿ ಸಿನಿಮಾಗಳ ಆಫರ್ ಸಿಗುತ್ತಿದೆ.

ಜವಾನ್ ಸಕ್ಸಸ್ ನಂತರಕಥೆಯಲ್ಲಿ ನಟಿ ಸೆಲೆಕ್ಟೀವ್ ಆಗಿದ್ದಾರೆ. ತೆಲುಗು, ತಮಿಳು ಸಿನಿಮಾಗಳ ಜೊತೆಗೆ ಹಿಂದಿ ಸಿನಿಮಾಗಳಲ್ಲಿ ನಟಿ ಬ್ಯುಸಿಯಾಗಿದ್ದಾರೆ.

ಪತಿ ವಿಘ್ನೇಶ್ ಶಿವನ್ ಜೊತೆ ಈಗಾಗಲೇ ನಯನತಾರಾ ಸಿನಿಮಾ ಮಾಡಿದ್ದಾರೆ. ಹಾಗಾಗಿ ಇಬ್ಬರ ಕಾಂಬಿನೇಷನ್‌ನಲ್ಲಿ ಮತ್ತೆ ಸಿನಿಮಾ ಬರಲಿ ಫ್ಯಾನ್ಸ್ ಆಶಿಸುತ್ತಿದ್ದಾರೆ.



# ದಾಂಪತ್ಯ ಜೀವನಕ್ಕೆ ಕಾಲಿಟ್ಟ ‘ನನ್ನರಸಿ ರಾಧೆ’ ನಟಿಕೌಸ್ತುಭ ಮಣಿ

ಕಿರುತೆರೆ ನಟಿಕೌಸ್ತುಭ ಮಣಿಅದ್ದೂರಿಯಾಗಿನಿನ್ನೆ ಮದುವೆಯಾಗಿದ್ದಾರೆ. ಸಿದ್ಧಾಂತ್ ಸತೀಶ್ ದಾಂಪತ್ಯಜೀವನಕ್ಕೆ ನಟಿಕಾಲಿಟ್ಟಿದ್ದಾರೆ.ಮದುವೆ ಸಂಭ್ರಮದಲ್ಲಿರುವ ನಟಿಗೆ ಅಭಿಮಾನಿಗಳು ಶುಭಕೋರಿದ್ದಾರೆ.

ಕೌಸ್ತುಭ ಮದುವೆ ಫೋಟೋ ವೈರಲ್‌ಆಗಿದ್ದು, ಕೆಂಪು ಬಣ್ಣದ ಸೀರೆಯಲ್ಲಿ ಮಿಂಚಿದ್ದಾರೆ.ವರ ಸಿದ್ಧಾಂತ್ ಪಂಚೆ ಮತ್ತು ಶಲ್ಯ ಧರಿಸಿದ್ದಾರೆ.ನಟಿಯ ಮದುವೆಯಲ್ಲಿಕುಟುಂಬಸ್ಥರು, ಆಪ್ತರಷ್ಟೇ ಭಾಗಿಯಾಗಿದ್ದರು. ಪ್ರಿ ವೆಡ್ಡಿಂಗ್ ಫೋಟೋಶೂಟ್ ನಲ್ಲಿ ಲಿಪ್‌ಲಾಕ್ ಫೋಟೋ ಶೇರ್ ಮಾಡುವ ಮೂಲಕ ಈ ಜೋಡಿ ಗಮನ ಸೆಳೆದಿತ್ತು.ಪುಟ್ಟ ವಿಮಾನದಲ್ಲಿರೊಮ್ಯಾಂಟಿಕ್ ಆಗಿ ಫೋಟೋಶೂಟ್ ಮಾಡಿಸಿದ್ದರು. ಅಂದಹಾಗೆ, ಕೌಸ್ತುಭ ಮಣಿಅವರದ್ದುಅರೇಂಜ್ ಮ್ಯಾರೇಜ್.ಸಿದ್ಧಾಂತ್ ಸತೀಶ್‌ಅವರು ಸಾಫ್ಟ್‌ವೇರ್‌ಡೆವಲಪರ್ ಆಗಿ ವಿದೇಶದಲ್ಲಿ ಕೆಲಸ ಮಾಡುತ್ತಿದ್ದಾರೆ.ಸಿದ್ಧಾಂತ್ ಅವರುಕೆನಡಾದ ವಿಶ್ವವಿದ್ಯಾಲಯದಲ್ಲಿ ಎಂಬಿಎ ಮಾಡಿದ್ದರು.ಇತ್ತೀಚೆಗೆ ನಟಿಯಎಂಗೇಜ್‌ಮೆಂಟ್‌ಅದ್ದೂರಿಯಾಗಿ ನಡೆದಿತ್ತು.

ನನ್ನರಸಿ ರಾಧೆ, ಗೌರಿ ಶಂಕರ ಸೀರಿಯಲ್‌ನಲ್ಲಿ ಕೌಸ್ತುಭ ನಟಿಸಿದ್ದಾರೆ.ಅರ್ಜುನ್‌ಜನ್ಯ ನಿರ್ದೇಶನದ ’45’ ಸಿನಿಮಾದಲ್ಲಿ ಶಿವಣ್ಣ ಮತ್ತುರಾಜ್ ಬಿ ಶೆಟ್ಟಿಜೊತೆ ನಟಿತೆರೆಹಂಚಿಕೊಂಡಿದ್ದಾರೆ.



# ರನ್ ಮಳೆಯಲ್ಲಿ ಪಂಜಾಬ್‌ಗೆ ಎಂಟು ವಿಕೆಟ್‌ಗಳ ಜಯ

ಜಾನಿ ಬೈರ್‌ಸ್ಟೋವ್ ಭರ್ಜರಿ ಶತಕ ಹಾಗೂ ಶಶಾಂಕ್ ಸಿಂಗ್, ಪ್ರಭ್ ಸಿಮ್ರನ್‌ಸಿಂಗ್ ಸ್ಫೋಟಕ ಅರ್ಧಶತಕಗಳ ಬ್ಯಾಟಿಂಗ್ ನೆರವಿನಿಂದ ಪಂಜಾಬ್‌ಕಿಂಗ್ಸ್‌ತಂಡವುಕೋಲ್ಕತ್ತಾ ನೈಟ್‌ರೈಡರ್ಸ್ ವಿರುದ್ಧ 8 ವಿಕೆಟ್‌ಗಳ ಭರ್ಜರಿಜಯ ಸಾಧಿಸಿದೆ.

ಅಲ್ಲದೇಐಪಿಎಲ್‌ಇತಿಹಾಸದಲ್ಲಿ ಚೇಸಿಂಗ್‌ನಲ್ಲಿ ತಂಡವೊಂದು ಗಳಿಸಿದ ಗರಿಷ್ಠ ರನ್‌ಇದಾಗಿದೆ. ಇತ್ತೀಚೆಗೆ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ನಡೆದ ಪಂದ್ಯದಲ್ಲಿ ಆರ್‌ಸಿಬಿ ಚೇಸಿಂಗ್‌ನಲ್ಲಿ 262 ರನ್ ಗಳಿಸಿತ್ತು.ಇದುದಾಖಲೆಯಾಗಿತ್ತು.ಇದೀಗ ಪಂಜಾಬ್‌ಕಿಂಗ್ಸ್ ಸಹ 262 ರನ್ ಗಳಿಸಿ ಆರ್ ಸಿಬಿ ದಾಖಲೆ ಸರಿಗಟ್ಟಿದೆ. 262 ರನ್‌ಗಳ ಬೃಹತ್ ಮೊತ್ತದ ಚೇಸಿಂಗ್ ಆರಂಭಿಸಿದ ಪಂಜಾಬ್‌ಕಿಂಗ್ಸ್ ಆರಂಭದಿಂದಲೇ ಸ್ಫೋಟಕ ಇನ್ನಿಂಗ್ಸ್ ಶುರು ಮಾಡಿತ್ತು.ಮೊದಲ ವಿಕೆಟ್‌ಗೆ 6 ಓವರ್‌ಗಳಲ್ಲಿ ಬರೋಬ್ಬರಿ 93 ರನ್‌ಚಚ್ಚಿತ್ತು. ಆರಂಭಿಕ ಪ್ರಭ್ ಸಿಮ್ರನ್ ಸಿಂಗ್ 20 ಎಸೆತಗಳಲ್ಲಿ 54 ರನ್ (5 ಸಿಕ್ಸರ್, 4 ಬೌಂಡರಿ) ರನ್‌ಚಚ್ಚಿ ಔಟಾದರು. ಈ ಬೆನ್ನಲ್ಲೇ 26 ರನ್ ಗಳಿಸಿದ್ದ ರೀಲಿ ರೋಸೋ ಸಹ ಪೆವಿಲಿಯನ್‌ಗೆ ಮರಳಿದರು. ಬಳಿಕ ಜಾನಿ ಬೈರ್ ಸ್ಟೋವ್ ಜೊತೆಗೂಡಿದ ಶಶಾಂಕ್ ಸಿಂಗ್ ಕೆಕೆಆರ್ ಬೌಲರ್‌ಗಳ ವಿರುದ್ಧ ಬೆಂಕಿ-ಬಿರುಗಾಳಿಯಂತೆ ಬ್ಯಾಟಿಂಗ್ ನಡೆಸಿದರು. ಪರಿಣಾಮ ಪಂಬಾಜ್ 18.4 ಓವರ್‌ಗಳಲ್ಲೇ 262 ರನ್‌ಚಚ್ಚಿ ವಿಜಯಮಾಲೆ ಹಾಕಿಕೊಂಡಿತು.



ಪಂಜಾಬ್ ಪರಜಾನಿ ಬೈರ್‌ಸ್ಟೋವ್ 48 ಎಸೆತಗಳಲ್ಲಿ ಅಜೇಯ 108 ರನ್ (9 ಸಿಕ್ಸರ್, 8 ಬೌಂಡರಿ), ಶಶಾಂಕ್ ಸಿಂಗ್ 68 ರನ್ (8 ಸಿಕ್ಸರ್, 2 ಬೌಂಡರಿ) ಸಿಡಿಸಿ ತಂಡದ ಗೆಲುವಿಗೆ ನೆರವಾದರು.

**ರನ್‌ಏರಿದ್ದು ಹೇಗೆ?**

- **21 ಎಸೆತ 50 ರನ್**
- **44 ಎಸೆತ 100 ರನ್**
- **66 ಎಸೆತ 150 ರನ್**
- **90 ಎಸೆತ 200 ರನ್**
- **112 ಎಸೆತ 262 ರನ್**

ಇದಕ್ಕೂ ಮುನ್ನ ಬ್ಯಾಟಿಂಗ್ ಮಾಡಿದಕೆಕೆಆರ್ ಬ್ಯಾಟರ್ಸ್‌ಗಳು ಪಂಬಾಜ್ ಬೌಲರ್‌ಗಳನ್ನು ಹಿಗ್ಗಾಮುಗ್ಗಾ ಚೆಂಡಾಡಿದರು.ಆರಂಭಿಕರಾಗಿ ಕಣಕ್ಕಿಳಿದ ಸುನೀಲ್ ನರೇನ್ ಮತ್ತು ಫಿಲ್ ಸಾಲ್ಟ್ ಜೋಡಿ ಸಿಕ್ಸರ್ ಬೌಂಡರಿಗಳ ಅಬ್ಬರ ಶುರು ಮಾಡಿತು.ಮೊದಲ ವಿಕೆಟ್‌ಗೆ ಈ ಜೋಡಿ 10.2 ಓವರ್‌ಗಳಲ್ಲಿ 138 ರನ್ ಸಿಡಿಸಿತ್ತು.

ಸುನೀಲ್ ನರೇನ್ 32 ಎಸೆತಗಳಲ್ಲಿ ಸ್ಫೋಟಕ 71 ರನ್ (9 ಸಿಕ್ಸರ್, 4 ಬೌಂಡರಿ) ಚಚ್ಚಿದರೆ, ಫಿಲ್ ಸಾಲ್ಟ್ 37 ಎಸೆಗಳಲ್ಲಿ 75 ರನ್ ಬಾರಿಸಿ ಪೆವಿಲಿಯನ್‌ಗೆ ಮರಳಿದರು.ನಂತರ ಕಣಕ್ಕಿಳಿದ ವೆಂಕಟೇಶ್‌ಅಯ್ಯರ್ 33 ರನ್, ಆಂಡ್ರೆರಸ್ಸೆಲ್ 24 ರನ್, ಶ್ರೇಯಸ್‌ಅಯ್ಯರ್ ಸ್ಫೋಟಕ 28 ರನ್, ರಿಂಕು ಸಿಂಗ್ 5 ರನ್, ರಮಣದೀಪ್ ಸಿಂಗ್ 6 ರನ್‌ಗಳ ಕೊಡುಗೆ ನೀಡಿದರು. ಕೆಕೆಆರ್ ಪರ ಅರ್ಷ್‌ದೀಪ್ ಸಿಂಗ್ 2 ವಿಕೆಟ್, ಸ್ಯಾಮ್‌ಕರ್ರನ್, ಹರ್ಷಲ್ ಪಟೇಲ್ ಮತ್ತುರಾಹುಲ್‌ಚಹಾರ್ ತಲಾಒಂದೊಂದು ವಿಕೆಟ್ ಪಡೆದರು.

# ಬೆಂಗಳೂರಿನಲ್ಲಿ ಇದುವರೆಗೆ ಸೀಜ್ ಆಗಿರೋ ಹಣ, ಚಿನ್ನ, ಬೆಳ್ಳಿ ಎಷ್ಟು?

**ಬೆಂಗಳೂರು:** ಕರ್ನಾಟಕದಲ್ಲಿ ಮೊದಲ ಹಂತದ ಲೋಕಸಭಾಚುನಾವಣೆಮತದಾನ ಶುಕ್ರವಾರವಷ್ಟೇ ಮುಕ್ತಾಯಆಗಿದೆ.ಚುನಾವಣೆಘೋಷಣೆಆದಾಗಿಂದ ಬೆಂಗಳೂರಿನಲ್ಲಿ ಕುರುಡುಕಾಂಚಾಣದ ಸದ್ದುಜೋರಾಗಿದೆ.ಬೆಂಗಳೂರಿನಲ್ಲಿ ಇದುವರೆಗೂ ಸೀಜ್ ಆಗಿರೋಚಿನ್ನ, ಬೆಳ್ಳಿ ಹಾಗೂ ಹಣದಕಂಪ್ಲೀಟ್ ರಿಪೋರ್ಟ್‌ಇಲ್ಲಿದೆ.

ಲೋಕಸಭಾ ಚುನಾವಣೆ ಘೋಷಣೆ ಆದ ಬಳಿಕ ಬೆಂಗಳೂರಿನಲ್ಲಿ ಚುನಾವಣಾ ಅಕ್ರಮ ಚಟುವಟಿಕೆಗಳು ಎಗ್ಗಿಲ್ಲದೇ ನಡೆದಿದೆ. ಅಕ್ರಮವಾಗಿ, ಹಣ, ಚಿನ್ನ, ಡ್ರಗ್ಸ್ ಸಾಗಾಟಜೋರಾಗಿ ನಡೆದಿದೆ. ಮೊದಲ ಹಂತದಲ್ಲಿ ಬೆಂಗಳೂರಿನಲ್ಲೂ ಚುನಾವಣೆ ಮುಕ್ತಾಯಆಗಿದ್ದು, ಕೋಟಿಕೋಟಿ ಮೌಲ್ಯದಚಿನ್ನ, ಬೆಳ್ಳಿಯನ್ನ ವಶಪಡಿಸಿಕೊಳ್ಳಲಾಗಿದೆ

**ಬೆಂಗಳೂರಿನಲ್ಲಿ ಕುರುಡುಕಾಂಚಣ:**

- **11.85 ಕೋಟಿ ಹಣ ಸೀಜ್**
- **19.22 ಕೋಟಿ ಮೌಲ್ಯದ ಮದ್ಯ ವಶ**
- **7.15 ಕೋಟಿ ಮೌಲ್ಯದಡ್ರಗ್ಸ್ ವಶಕ್ಕೆ**
- **53.71 ಕೋಟಿ ಮೌಲ್ಯದ ಚಿನ್ನ, ಬೆಳ್ಳಿ ವಶಕ್ಕೆ**
- **1.14 ಕೋಟಿ ಮೌಲ್ಯದ ಗಿಫ್ಟ್ ವಶಕ್ಕೆ**
- **46.37ಕೋಟಿ ಮೌಲ್ಯದ ವಸ್ತುಗಳು ಜಪ್ತಿ**

ಹಣ ಸೀಜ್ ಅಷ್ಟೇ ಅಲ್ಲದೇ ದ್ವೇಷದ ಭಾಷಣ ಸೇರಿದಂತೆ ನೀತಿ ಸಂಹಿತೆ ಉಲ್ಲಂಘನೆಯಿಂದ ಪ್ರಕರಣಗಳು ಕೂಡದಾಖಲಾಗಿದೆ.ಬೆಂಗಳೂರು ಸೆಂಟ್ರಲ್- 513, ಬೆಂಗಳೂರು ಉತ್ತರ- 303, ಬೆಂಗಳೂರು ದಕ್ಷಿಣ- 373, ಬೆಂಗಳೂರು ನಗರ- 2929 ಹೀಗೆ ಒಟ್ಟು 4,118 ಪ್ರಕರಣಗಳು ದಾಖಲಾಗಿವೆ.

ಒಟ್ಟಾರೆ ಮೊದಲ ಹಂತದ ಮತದಾನ ಮುಕ್ತಾಯಆಗಿದ್ದು, ಈ ಚುನಾವಣೆಕುರುಡು ಕಾಂಚಾಣ, ಹೆಂಡ, ಆಮಿಷಗಳಿಂದ ನಡೆದಿದೆ. ಕೇಸ್‌ದಾಖಲಾಗಿಕೋಟಿಕೋಟಿ ಹಣ ಸೀಜ್ ಮಾಡಿದ್ದು, ಈ ರೀತಿಅಕ್ರಮದಿಂದಚುನಾವಣೆ ನಡೆಯುತ್ತಿದೆ.ಬೆಂಗಳೂರಿಗೆ ಕೆಟ್ಟ ಹೆಸರುಅಂದರೆತಪ್ಪಿಲ್ಲ ಫಲಿತಾಂಶ ಹೇಗಿರಲಿದೆಕಾದು ನೋಡಬೇಕಿದೆ.



# ರಾಜ್ಯದಲ್ಲಿ ಶೇ.69.23 ಮತದಾನ; ಮಂಡ್ಯದಲ್ಲೇ ಅತಿ ಹೆಚ್ಚು

**ಬೆಂಗಳೂರು:** ರಾಜ್ಯದ 14 ಕ್ಷೇತ್ರಗಳಿಗೆ ಶುಕ್ರವಾರ ಮೊದಲ ಹಂತದ ಮತದಾನ ನಡೆದಿದ್ದು, ಶೇ.69.23 ರಷ್ಟು ಮತದಾನ ನಡೆದಿದೆಎಂದುಚುನಾವಣಾಆಯೋಗ ಮಾಹಿತಿ ನೀಡಿದೆ.

ಮಂಡ್ಯಕ್ಷೇತ್ರದಲ್ಲಿ ಅತಿ ಹೆಚ್ಚು ಮತದಾನವಾಗಿದೆ. ಆದರೆ ಬೆಂಗಳೂರು ಭಾಗದಲ್ಲಿ ಮತದಾನಕ್ಕೆ ನೀರಸ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬೆಂಗಳೂರು ಕೇಂದ್ರದಲ್ಲಿ ಕಡಿಮೆ ಪ್ರಮಾಣದ ಮತದಾನವಾಗಿದೆ.

**ಯಾವಕ್ಷೇತ್ರದಲ್ಲಿಎಷ್ಟು ಮತದಾನ?:**

ಉಡುಪಿ-ಚಿಕ್ಕಮಗಳೂರು 76.06%, ಹಾಸನ 77.51%, ದಕ್ಷಿಣಕನ್ನಡ 77.43%, ಚಿತ್ರದುರ್ಗ 73.11%, ತುಮಕೂರು 77.70%, ಮಂಡ್ಯ 81.48%, ಮೈಸೂರು70.45%, ಚಾಮರಾಜನಗರ 76.59%, ಬೆಂಗಳೂರು ಗ್ರಾಮಾಂತರ 67.29%, ಬೆಂಗಳೂರು ಉತ್ತರ 54.42%, ಬೆಂಗಳೂರು ಕೇಂದ್ರ 52.81%, ಬೆಂಗಳೂರು ದಕ್ಷಿಣ 53.15%, ಚಿಕ್ಕಬಳ್ಳಾಪುರ 76.82%, ಕೋಲಾರ 78.07% ರಷ್ಟು ಮತದಾನ ನಡೆದಿದೆ.



# ಗಂಡು ಮಗುವಿಗೆ ಜನ್ಮ ನೀಡಿದ ಕೃನಾಲ್ ಪಾಂಡ್ಯ ಪತ್ನಿ

ಟೀಂ ಇಂಡಿಯಾ ಕ್ರಿಕೆಟಿಗ ಕೃನಾಲ್ ಪಾಂಡ್ಯಅವರ ಪತ್ನಿ ಪಂಖುರಿ ಶರ್ಮಾ ಅವರಿಂದು ತಮ್ಮ 2ನೇ ಮಗುವಿಗೆ ಜನ್ಮನೀಡಿದ್ದಾರೆ. ಶುಭ ಶುಕ್ರವಾರವೇ ಗಂಡು ಮಗುವಿನ ಜನನವಾಗಿದ್ದು ದಂಪತಿಗಳಿಬ್ಬರು ಸಂಭ್ರಮದಲ್ಲಿದ್ದಾರೆ.

ತಮ್ಮ ಪತ್ನಿ ಹಾಗೂ ಮಗುವಿನೊಂದಿಗೆ ತೆಗೆಸಿರುವ ಫೋಟೋವನ್ನುಕೃನಾಲ್ ತಮ್ಮ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಹಂಚಿಕೊಂಡಿದ್ದಾರೆ.ಮಗುವಿನ ಹೆಸರು ವಾಯುಎಂದು ಸಹ ಪಾಂಡ್ಯ ಹೇಳಿಕೊಂಡಿದ್ದಾರೆ. ಈ ಫೋಟೋಕಂಡು ಪಾಂಡ್ಯ ಅಭಿಮಾನಿಗಳೂ ಶುಭ ಹಾರೈಸಿದ್ದಾರೆ. 2022ರ ಜುಲೈನಲ್ಲಿ ಕೃನಾಲ್ ಮತ್ತು ಪಂಖುರಿ ದಂಪತಿ ಮೊದಲ ಮಗುವಿಗೆ ಜನ್ಮ ನೀಡಿದ್ದರು. ಮೊದಲ ಮಗುವಿನ ಹೆಸರು ಕವಿರ್. 2017ರಲ್ಲಿ ಕೃನಾಲ್ ಪಾಂಡ್ಯಅವರುತಮ್ಮ ಬಹುಕಾಲದ ಗೆಳತಿ ಪಂಖುರಿ ಶರ್ಮಾಅವರೊಂದಿಗೆ ದಾಂಪತ್ಯಜೀವನಕ್ಕೆ ಕಾಲಿಟ್ಟಿದ್ದರು. ವೃತ್ತಿಯಲ್ಲಿ ಮಾಡೆಲ್ ಆಗಿದ್ದ ಪಂಖುರಿ, ತನಗೆ ಆಧಾರ ಸ್ತಂಭವಾಗಿ ನಿಂತಿದ್ದಾರೆ ಎಂದು ಕೃನಾಲ್ ಆಗಾಗ್ಗೆ ಹೇಳಿಕೊಂಡಿದ್ದಾರೆ.ಸದ್ಯಐಪಿಎಲ್‌ಕಣದಲ್ಲಿರುವ ಕೃನಾಲ್ ಪಾಂಡ್ಯಅವರು ಲಕ್ನೋ ಸೂಪರ್‌ಜೈಂಟ್ಸ್‌ತಂಡದ ಪರವಾಗಿ ಆಡುತ್ತಿದ್ದಾರೆ.



Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com